ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 118

16–10–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 118

# ರಸ್ತೆ ಗುಂಡಿ ಮುಚ್ಚಿ ಅಪಘಾತ ತಪ್ಪಿಸಿ

## ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ

**ದಾವಣಗೆರೆ :** ನಗರದಲ್ಲಿನ ಬ್ಲಾಕ್ ಸ್ಪಾಟ್ ಗುಂಡಿಗಳನ್ನು ಮುಚ್ಚಿ ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪೊಲೀಸ್ ಇಲಾಖೆ ಗುರುತಿಸಿರುವ ಅಪಘಾತ ಮತ್ತು ಸೂಕ್ಷ್ಮ ವಲಯಗಳನ್ನು ಅಭಿವೃದ್ಧಿಪಡಿಸಬೇಕು. ಅಗತ್ಯ ಸಂಚಾರಿ ಹಾಗೂ ಸೂಚನಾ ಫಲಕ ಅಳವಡಿಸಬೇಕು. ಇತ್ತೀಚೆಗೆ ಚನ್ನಗಿರಿ ವ್ಯಾಪ್ತಿಯಲ್ಲಿ ರಸ್ತೆ ಅಪಘಾತದಲ್ಲಿ 4 ಜನ ಸಾವನ್ನಪ್ಪಿದ್ದಾರೆ. ಅದರಲ್ಲೂ ಮಹಿಳೆಯರೇ ಹೆಚ್ಚು ತೊಂದರೆಗೊಳಗಾಗುತ್ತಿದ್ದಾರೆ. ಆದುದರಿಂದ ತ್ವರಿತವಾಗಿ ರಸ್ತೆ ದುರಸ್ಥಿಗೊಳಿಸಬೇಕು. ರಸ್ತೆ ಬ್ಲಾಕ್ ಸ್ಪಾಟ್‌ಗಳನ್ನು ಮುಚ್ಚಬೇಕಾದರೆ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಸಂಬಂಧಪಟ್ಟ



ಅಧಿಕಾರಿಗಳಿಗೆ ನಿರ್ದೇಶಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು ದಾವಣಗೆರೆ, ಚನ್ನಗಿರಿ, ಹರಿಹರ ಹಾಗೂ ನ್ಯಾಮತಿ ತಾಲ್ಲೂಕಿನಲ್ಲಿ ಅಪಘಾತವಲಯಗಳನ್ನು ಗುರುತಿಸಿ ಅಪಘಾತ ಸಂಭವಿಸದಂತೆ ಕ್ರಮ ಕೈಗೊಳ್ಳಲಾಗಿದೆ. ರಸ್ತೆ ಗುಂಡಿಗಳನ್ನು ಮುಚ್ಚಲು ಈಗಾಗಲೇ ಟೆಂಡರ್ ಕರೆಯಲಾಗಿದೆ. ಶೀಘ್ರದಲ್ಲಿಯೇ ರಸ್ತೆಗುಂಡಿ ಮುಚ್ಚುವ ಕಾಮಗಾರಿ ಆರಂಭಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಹಾದು ಹೋಗಿರುವ ಹೊಸ ಕುಂದುವಾಡ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ –48 ಅಂಡರ್ ಪಾಸ್ ಕಾಮಗಾರಿ ಹಾಗೂ ದಾವಣಗೆರೆ– ಚನ್ನಗಿರಿ ಹೊರ ವಲಯದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ –369 ಕಾಮಗಾರಿ ವಿಳಂಭವಾಗುತ್ತಿದ್ದು, ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿವೆ. ಆದುದರಿಂದ ರಸ್ತೆಯ ಇಕ್ಕೆಲಗಳ ಸರ್ವೀಸ್ ರಸ್ತೆ ಕಾಮಗಾರಿ, ತ್ವರಿತವಾಗಿ ಪೂರ್ಣಗೊಳಿಸಬೇಕು. ರಸ್ತೆಯ ಬದಿಯಲ್ಲಿ ಬೀದಿ ದೀಪಗಳಿಲ್ಲ. ಬೀದಿ ದೀಪ ಅಳವಡಿಸಿ ಅಲ್ಲಿನ ಸಾರ್ವಜನಿಕರಿಗೆ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು. ಆನಗೋಡು ಗ್ರಾಮದ ಬಳಿ ಸರ್ವೀಸ್ ರಸ್ತೆಯ ಪಕ್ಕದಲ್ಲಿಯೇ ಡಾಬಾ, ಹೋಟೇಲ್‌ಗಳು ಇರುವುದರಿಂದ ಏಕಾಏಕಿ ತಿರುವು ಪಡೆದುಕೊಳ್ಳುವ ಕಾರಣದಿಂದ ಅಪಘಾತ ಪ್ರಕರಣ ಹೆಚ್ಚುತ್ತಿವೆ. ಅವುಗಳನ್ನು ತೆರವುಗೊಳಸಿಬೇಕು. ಹಾಗೆಯೇ ಅಂಡರ್ ಪಾಸ್ ರಸ್ತೆ ಬದಿ ವ್ಯಾಪಾರಿಗಳು ನಿರ್ಮಿಸಿಕೊಂಡಿರುವ ಗೂಡಂಗಡಿಗಳನ್ನು ನಿಯಮಾನುಸಾರ ಅಳತೆ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**ಟೋಲ್‌ನಲ್ಲಿ ಎಎನ್‌ಪಿಆರ್ ಸಿಸಿಟಿವಿ:** ಇತ್ತೀಚೆಗೆ ಅಪಘಾತ ಮತ್ತು ದರೋಡೆ ಪ್ರಕರಣ ಹೆಚ್ಚಾಗುತ್ತಿವೆ. ಇಂತಹ ಕೃತ್ಯವೆಸಗಿ ತಲೆ ಮರೆಸಿಕೊಳ್ಳುತ್ತಿದ್ದಾರೆ. ಹಾಗಾಗಿ ಹೆದ್ದಾರಿ ಪ್ರಾಧಿಕಾರದ ಟೋಲ್‌ಗಳಲ್ಲಿ ಎಎನ್‌ಪಿಆರ್ ನಂಬರ್ ಪ್ಲೇಟ್ ದಾಖಲು ಮಾಡಿಕೊಳ್ಳುವ ಸಿಸಿಟಿವಿ ಹಾಗೂ ಟೋಲ್‌ನ ಎರಡೂ ಕಡೆ ಚಿತ್ರೀಕರಣ ಮಾಡಿಕೊಳ್ಳುವ ಉತ್ತಮ ಗುಣಮಟ್ಟದ ಪಿಟಿಜಡ್ ಕ್ಯಾಮೆರಾ, ಬೆಳಕಿನ ದೀಪಗಳ ಅಳವಡಿಸುವ ವ್ಯವಸ್ಥೆ ಮಾಡಬೇಕು. ಇದರಿಂದ ಪ್ರಕರಣಕ್ಕೆ ಸಂಬಂಧಿಸಿದವರನ್ನು ಗುರುತಿಸಿ ತ್ವರತವಾಗಿ ಪತ್ತೆ ಹಚ್ಚಲು ಸಹಾಯಕವಾಗಲಿವೆ ಎಂದರು.

# ಇಂಜೆಕ್ಷನ್ ಚುಚ್ಚಿ ಪತ್ನಿಯನ್ನೇ ಕೊಂದ ವೈದ್ಯ

## ಪ್ರಕರಣ ಬಯಲಾಗಿದ್ದೇ ರೋಚಕ!



**ಬೆಂಗಳೂರು:** ಇಂಜೆಕ್ಷನ್ ನೀಡಿ ವೈದ್ಯೆ ಪತ್ನಿಯನ್ನೇ ಕೊಂದು ಸಹಜ ಸಾವು ಎಂದು ಬಿಂಬಿಸಿ ಕುಟುಂಬಸ್ಥರನ್ನು ನಂಬಿಸಿದ್ದ ಖತರ್ನಾಕ್ ವೈದ್ಯನನ್ನು ಪೊಲೀಸರು ಬಂಧಿಸಿದ್ದಾರೆ.

ಹೌದು.. ಇಡೀ ಬೆಂಗಳೂರನ್ನೇ ಬೆಚ್ಚಿ ಬೀಳಿಸುವ ಘಟನೆಯೊಂದು ವರದಿಯಾಗಿದ್ದು, ಸ್ವಂತ ಪತಿಯೇ ತನ್ನ ಪತ್ನಿಯನ್ನು ಇಂಜೆಕ್ಷನ್ ನೀಡಿ ಕೊಂದು ಹಾಕಿರುವ ಭೀಕರ ಘಟನೆ ಬೆಂಗಳೂರಿನ ಮಾರತ್ ಹಳ್ಳಿಯಲ್ಲಿ ನಡೆದಿದೆ. ಕೃತಿಕಾ ಎಂಬ ಮಹಿಳೆಯನ್ನು ಡಾಕ್ಟರ್ ಮಹೇಂದ್ರ ಎಂಬುವವರು ಕೊಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ವೃತ್ತಿಯಲ್ಲಿ ಜನರಲ್ ಸರ್ಜನ್ ಆಗಿರುವ ಡಾ. ಮಹೇಂದ್ರರೆಡ್ಡಿ ಬಂಧಿತ ಆರೋಪಿಯಾಗಿದ್ದು, ಪತ್ನಿಗೆ ಅನಾರೋಗ್ಯ ಸಮಸ್ಯೆ ಇರುವ ಕಾರಣ ಈತ ಕೊಲೆ ಮಾಡಿದ್ದಾನೆ ಎಂಬ ಆಘಾತಕಾರಿ ವಿಷಯ ತನಿಖೆ ವೇಳೆ ಗೊತ್ತಾಗಿದೆ.

ಮೂಲಗಳ ಪ್ರಕಾರ, 2024ರ ಮೇ 26ರಂದು ಡಾ.ಮಹೇಂದ್ರರೆಡ್ಡಿ ಮತ್ತು ಡಾ.ಕೃತಿಕಾರೆಡ್ಡಿ ವಿವಾಹವಾಗಿತ್ತು. ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚರ್ಮರೋಗ ತಜ್ಞೆಯಾಗಿದ್ದ ಡಾ.ಕೃತಿಕಾರೆಡ್ಡಿ ಅವರಿಗೆ ಕೆಲ ದಿನಗಳಿಂದ ಆರೋಗ್ಯ ಸಮಸ್ಯೆ ಎದುರಾಗಿತ್ತು. ಅಜೀರ್ಣ, ಗ್ಯಾಸ್ಟ್ರಿಕ್, ಲೋಶುಗರ್ ಸಮಸ್ಯೆಯಿಂದ ಬಳಲುತ್ತಿದ್ದರು. ಈ ವಿಷಯ ಮುಚ್ಚಿಟ್ಟು ಕುಟುಂಬಸ್ಥರು ಅದೇ ಆಸ್ಪತ್ರೆಯಲ್ಲಿ ಜನರಲ್ ಸರ್ಜನ್ ಆಗಿದ್ದ ಡಾ.ಮಹೇಂದ್ರರೆಡ್ಡಿಗೆ ಮದುವೆ ಮಾಡಿಕೊಟ್ಟಿದ್ದರು.

ಆದರೆ, ಮದುವೆ ಬಳಿಕ ಹೆಂಡತಿಯ ಆರೋಗ್ಯ ಸಮಸ್ಯೆ ವಿಷಯ ಪತಿ ಮಹೇಂದ್ರ ರೆಡ್ಡಿಗೆ ಗೊತ್ತಾಗಿತ್ತು. ಪ್ರತಿದಿನ ವಾಂತಿ, ಇತರೆ ಸಮಸ್ಯೆಯಿಂದ ಬಳಲುತ್ತಿದ್ದ ಪತ್ನಿಯನ್ನ ಮಹೇಂದ್ರರೆಡ್ಡಿ ಇಂಜೆಕ್ಷನ್ ನೀಡಿ ಕೊಂದಿದ್ದ. ಆದರೆ ಅದನ್ನು ಸಹಜ ಸಾವು ಎಂದು ಬಿಂಬಿಸಿದ್ದ.

**ಸಹಜ ಸಾವು ಎಂಬಂತೆ ಬಿಂಬಿಸಿದ್ದ ಖತರ್ನಾಕ್ ವೈದ್ಯ**

ವೈದ್ಯ ಮಹೇಂದ್ರ ರೆಡ್ಡಿ ತನ್ನ ವೈದ್ಯಕೀಯ ಬುದ್ದಿ ಬಳಸಿ ಕೊಲೆ ಮಾಡಿದ ಬಳಿಕ ನ್ಯಾಚುರಲ್ ಡೆತ್ ಆಗಿದೆ ಎಂದು ಎಲ್ಲರನ್ನು ನಂಬಿಸಿದ್ದ. ಇದನ್ನು ಸಹಜ ಸಾವು ಎಂದೇ ಕುಟುಂಬದವರು ನಂಬಿದ್ದರು.

ದೂರು ನೀಡಿದ್ದ ತಂದೆ

ಕೃತಿಕಾ ಸಾವಿಗೆ ಸಂಬಂಧಿಸಿದಂತೆ ಆಕೆಯ ತಂದೆ ಮುನಿರೆಡ್ಡಿ ಎಂಬುವವರು ಪೊಲೀಸ್ ದೂರು ದಾಖಲಿಸಿದ್ದರು. ಕೃತಿಕಾ ಮುನಿ ರೆಡ್ಡಿ ಅವರ ಕಿರಿಯ ಮಗಳಾಗಿದ್ದು, ತನ್ನ ಅಳಿಯನೇ ಮಗಳನ್ನು ಕೊಂದಿದ್ದಾನೆ ಎಂದು ಆರೋಪಿಸಿದ್ದರು.

ಮದುವೆಯ ನಂತರ ಮಹೇಂದ್ರ ಕೃತಿಕಾಳನ್ನು ನಿರ್ಲಕ್ಷಿಸಲು ಪ್ರಾರಂಭಿಸಿದ್ದ. ಮನೆಯ ಸಣ್ಣ ನಿರ್ಧಾರಗಳಿಗೂ ಸಹ ತನ್ನ ತಂದೆಯ ಒಪ್ಪಿಗೆಯನ್ನು ಪಡೆಯಬೇಕೆಂದು ಮತ್ತು ವೈಯಕ್ತಿಕ ಖರ್ಚುಗಳನ್ನು ಆಕೆಯೇ ಭರಿಸಬೇಕೆಂದು

# ಕೋಲಾರ: ಸಮೀಕ್ಷೆಗೆ ತೆರಳಿ ನಾಪತ್ತೆಯಾಗಿದ್ದ ಶಿಕ್ಷಕಿ ಶವವಾಗಿ ಪತ್ತೆ!

## ಕೊಲೆಯೋ, ಆತ್ಮಹತ್ಯೆಯೋ?

**ಕೋಲಾರ:** ಜಾತಿ ಗಣತಿ ಸಮೀಕ್ಷೆಗೆ ತೆರಳಿ ನಾಪತ್ತೆಯಾಗಿದ್ದ



ಶಿಕ್ಷಕಿ ಶವವಾಗಿ ಪತ್ತೆಯಾಗಿದ್ದು, ಕೊಲೆಯೋ ಅಥವಾ ಆತ್ಮಹತ್ಯೆಯೋ ಎಂಬ ಅನುಮಾನ ವ್ಯಕ್ತವಾಗುತ್ತಿದೆ.

ಅಖ್ತರ್ ಬೇಗಂ ಮೃತಪಟ್ಟ ಮಹಿಳೆಯಾಗಿದ್ದಾರೆ. ಕೆಜಿಎಫ್ ತಾಲೂಕಿನ ಐಪಲ್ಲಿ ಕೆರೆಯಲ್ಲಿ ಅವರ ಶವ ಪತ್ತೆಯಾಗಿದೆ. ಕೋಲಾರ ತಾಲೂಕಿನ ಬಿ ಹೊಸಹಳ್ಳಿ ಸರ್ಕಾರಿ ಶಾಲೆಯ ಶಿಕ್ಷಕಿಯಾಗಿದ್ದ ಅಖ್ತರ್ ಬೇಗಂ ಕೋಲಾರದ ಮಹಾಲಕ್ಷ್ಮಿ ಬಡಾವಣೆಯ ನಿವಾಸಿಯಾಗಿದ್ದರು. ನರಸಾಪುರದಲ್ಲಿ ಸಮೀಕ್ಷೆ ಕಾರ್ಯ ನಡೆಸಿದ ಬಳಿಕ ನಾಪತ್ತೆಯಾಗಿದ್ದರು. ಎರಡು ದಿನಗಳಿಂದ ನಾಪತ್ತೆಯಾಗಿದ್ದ ಶಿಕ್ಷಕಿ ಸುಳಿವು ಸಿಕ್ಕಿರಲಿಲ್ಲ. ಈ ಸಂಬಂಧ ಕೋಲಾರ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಾಗಿತ್ತು.

ಜಾತಿ ಗಣತಿ ಸಮೀಕ್ಷೆಯನ್ನು ಪೂರ್ಣಗೊಳಿಸಲು ಒತ್ತಡದ ಕಾರಣದಿಂದ ಮಾನಸಿಕವಾಗಿ ಸಮಸ್ಯೆ ಎದುರಿಸುತ್ತಿದ್ದರು ಎಂದು ಮೂಲಗಳು ಹೇಳಿವೆ. ಇದು ಸಮೀಕ್ಷೆಯಲ್ಲಿ ತೊಡಗಿರುವ ಶಿಕ್ಷಕರಲ್ಲಿ ಸುರಕ್ಷತೆ ಬಗ್ಗೆ ಭೀತಿ ಉಂಟು ಮಾಡಿದೆ.

# ಇಂದು ಬೌದ್ಧಿಕ ಆಸ್ತಿ ಹಕ್ಕುಗಳ ಕಾರ್ಯಾಗಾರ

**ದಾವಣಗೆರೆ:** ಎ.ಆರ್.ಜಿ. ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಸಂಶೋಧನಾ ಅಭಿವೃದ್ಧಿ ಕೋಶದೊಂದಿಗೆ ಶೈಕ್ಷಣಿಕ ಸಲಹಾ ಸಮಿತಿ ಸಹಯೋಗದಲ್ಲಿ 'ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ಕಾರ್ಯಾಗಾರವನ್ನು ಅ.16 ರಂದು ಬೆಳಿಗ್ಗೆ 11 ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾಲೇಜು ಪ್ರಾಂಶುಪಾಲ ಡಾ. ಜಿ ಬಿ ಬೋರಯ್ಯ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಅಪರಾಧಶಾಸ್ತ್ರ ನಿವೃತ್ತ ಪ್ರಾಧ್ಯಾಪಕ ಡಾ. ನಾಗರಾಜ್ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಳ್ಳಲಿದ್ದಾರೆ.

# ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಮೇಲೆ ಶೂ ಎಸೆದ ವಕೀಲನ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹಿಸಿ ದಸಂಸ ಪ್ರತಿಭಟನೆ

**ದಾವಣಗೆರೆ.ಅ.15:** ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳ ಮೇಲೆ ವಕೀಲರೊಬ್ಬರು ಶೂ ಎಸೆದ ಪ್ರಕರಣವನ್ನು ಖಂಡಿಸಿ ದಾವಣಗೆರೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಾಗೂ ಪ್ರಗತಿ ಪರ ಸಂಘಟನೆಗಳು ಪ್ರತಿಭಟನೆ ನಡೆಸಿದವು. ನಗರದ ಅಂಬೇಡ್ಕರ್ ವೃತ್ತದಲ್ಲಿ ಬುಧವಾರ ಪ್ರತಿಭಟನೆ ನಡೆಸಿದ ಕಾರ್ಯಕರ್ತರು ವಕೀಲರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಕುಂದುವಾಡ ಮಂಜುನಾಥ್ ಮಾತನಾಡಿ, ಡಾ.ಬಾಬ ಸಾಹೇಬ್ ಅಂಬೇಡ್ಕರ್ ಅವರು ಸರ್ವರಿಗೂ ಸಮಪಾಲು, ಸಮಬಾಳನ್ನು ಕಲ್ಪಿಸಿಕೊಟ್ಟಿದ್ದಾರೆ. ಅದರಂತೆ ಸುಪ್ರೀಂ ಕೋರ್ಟ್ ನ್ಯಾಯಾಧೀಶರು ಸಂವಿಧಾನ ಬದ್ಧವಾಗಿ ಯಾವುದೇ ಪಕ್ಷಪಾತವಿಲ್ಲದೇ ನ್ಯಾಯಪೀಠದಲ್ಲಿ ತೀರ್ಪುಗಳನ್ನು ನೀಡುತ್ತಾರೆ ಎಂದರು.

ಅಂತಹ ನ್ಯಾಯಾಧೀಶರ ಮೇಲೆ ಕೋರ್ಟ್‌ನಲ್ಲಿಯೇ ವಕೀಲರೊಬ್ಬರು ಶೂ ಎಸೆದಿರುವುದು ಖಂಡನೀಯ. ನ್ಯಾಯ ಕೊಡಿಸುವ ವಕೀಲನಾಗಿ ನ್ಯಾಯ ನೀಡುವ ದೇವರ ಮೇಲೆಯೇ ಶೂ ಎಸೆದು ಅವಮಾನ ಮಾಡಿದ್ದಾನೆ. ಕೂಡಲೇ ಆ ವಕೀಲನ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಮಿತಿಯ ಪದಾಧಿಕಾರಿಗಳಾದ ಬುಳ್ಳಸಾಗರ ಸಿದ್ದರಾಮಣ್ಣ, ಚಿತ್ರಲಿಂಗಪ್ಪ, ಕರಿಬಸಪ್ಪ, ಜಬೀನಾ ಖಾನಂ, ನಾಗರಾಜ, ಪ್ರದೀಪ್, ಖಾಲಿದ್ ಅಲೀ, ಮಂಜುನಾಥ್, ಪರಮೇಶ್ವರಪ್ಪ, ಶಂಕರ್ ಗಾಂಧಿನಗರ ಇತರರು ಇದ್ದರು.

## ರಾಜ್ಯ ಸರ್ಕಾರಿ ನೌಕರರಿಗೆ ದೀಪಾವಳಿ ಗಿಫ್ಟ್:

# ಶೇ. 2 ರಷ್ಟು ತುಟ್ಟಿಭತ್ಯೆ ಹೆಚ್ಚಳ

**ಬೆಂಗಳೂರು:** ದೀಪಾವಳಿಗೂ ಮುನ್ನ ರಾಜ್ಯ ಸರ್ಕಾರ ತನ್ನ ನೌಕರರಿಗೆ ಸಿಹಿ ಸುದ್ದಿ ನೀಡಿ–



ದ್ದು, ತುಟ್ಟಿಭತ್ಯೆಯನ್ನು (ಡಿಎ) ಶೇ.2ರಷ್ಟು ಹೆಚ್ಚಿಸಿ ಬುಧವಾರ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು ಜುಲೈ 1ರಿಂದಲೇ ಅನ್ವಯವಾಗುವಂತೆ ಮೂಲವೇತನದ ಶೇ.12.25 ರಿಂದ ಶೇ.14.25ಕ್ಕೆ ಪರಿಷ್ಕರಿಸಿ ರಾಜ್ಯ ಸರ್ಕಾರ ಇಂದು ಆದೇಶಿಸಿದೆ.

ಕೇಂದ್ರ ಸರ್ಕಾರ ನೌಕರರಿಗೆ ತುಟ್ಟಿಭತ್ಯೆ ಹೆಚ್ಚಳದ ಬಳಿಕ ರಾಜ್ಯ ಸರ್ಕಾರ ತುಟ್ಟಿಭತ್ಯೆಯನ್ನು ಪರಿಷ್ಕರಿಸುವ ಸಂಪ್ರದಾಯವಿದೆ.

ಇತ್ತೀಚೆಗೆ ಕೇಂದ್ರ ಸರ್ಕಾರವು ತನ್ನ ನೌಕರರಿಗೆ ಶೇ.3ರಷ್ಟು ಡಿಎ ಹೆಚ್ಚಳ ಮಾಡಿತ್ತು.

ಸರ್ಕಾರದ ಈ ನಿರ್ಧಾರವನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರು ಸ್ವಾಗತಿಸಿದ್ದು, ನೌಕರರ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ

**ದಾವಣಗೆರೆ.ಅ.15:** ಭತ್ತಕ್ಕೆ 3500 ರೂ ಬೆಂಬಲ ಬೆಲೆ ನೀಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಘಟಕದ ವತಿಯಿಂದ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಯಿತು.

ನಗರದ ಎಸಿ ಕಚೇರಿ ಮುಂಭಾಗ ಬುಧವಾರ ತಾಲ್ಲೂಕು ಅಧ್ಯಕ್ಷ ಮಂಡಲೂರು ವಿಶ್ವನಾಥ ಅವರ ನೇತೃತ್ವದಲ್ಲಿ ಧರಣಿ ನಡೆಸಿದ ರೈತರು ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಉಪವಿಭಾಗಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ತಾಲ್ಲೂಕು ಅಧ್ಯಕ್ಷ ಮಂಡ್ಲೂರು ವಿಶ್ವನಾಥ್ ಮಾತನಾಡಿ, ಸರ್ಕಾರ ರೈತರು ಬೆಳೆದ ಬೆಳೆಗಳನ್ನು ವರ್ಷಪೂರ್ತಿ ಖರೀದಿಸಬೇಕು. ರಾಗಿಗೆ 4500 ರೂ. ಭತ್ತಕ್ಕೆ 3500 ರೂ. ಬೆಂಬಲ ಬೆಲೆ ನೀಡಬೇಕು. ಪ್ರತಿ ಲೀಟರ್ ಹಾಲಿಗೆ 50 ರೂ ಹೆಚ್ಚಳ ಮಾಡಬೇಕು, ಪ್ರತಿ ತಾಲೂಕಿನಲ್ಲೂ ಖರೀದಿ ಕೇಂದ್ರ ಸ್ಥಾಪನೆ ಮಾಡಬೇಕು, ಬಗರ್ ಹುಕುಂ ಸಾಗುವಳಿದಾರರಿಗೆ ಹಕ್ಕು ಪತ್ರ ವಿತರಣೆ ಮಾಡಬೇಕು ಎಂದು ಒತ್ತಾಯಿಸಿದರು.

ಅತೀವೃಷ್ಟಿ, ಅನಾವೃಷ್ಟಿಯಿಂದ ಬೆಳೆ ನಾಶವಾಗಿರುವುದರಿಂದ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಸಾಲ ಪಡೆದ ರೈತರ ಸಾಲ ಮನ್ನಾ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಇದೇ ವೇಳೆ ಒತ್ತಾಯಿಸಿದರು.

ಈ ವೇಳೆ ಸೇನೆಯ ಪದಾಧಿಕಾರಿಗಳಾದ ಗೀತಾ ಚಂದ್ರಶೇಖರ್, ಆಶಾ, ಎಸ್.ಕೆ.ಪ್ರಸನ್ನ ಕುಮಾರ್, ಎಸ್.ವಿ.ನಾಗರಾಜಪ್ಪ, ಅಣ್ಣೇಶ್, ಶಿವಕುಮಾರ್, ಮಹಾದೇವಪ್ಪ, ನಾಗರಾಜ ಇತರರು ಇದ್ದರು.

# ವಿದ್ಯಾರ್ಥಿಗಳು ಸಾಹಿತ್ಯ ಸಮ್ಮೇಳನಗಳ ಪುಸ್ತಕ ಖರೀದಿ ಮಾಡಿ : ಶಾಸಕ ಬಿ. ದೇವೇಂದ್ರಪ್ಪ

**ಜಗಳೂರು:** ತಾಲೂಕಿನಲ್ಲಿ 30 ವರ್ಷಗಳ ನಂತರ 14 ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಬಹಳ ಅದ್ದೂರಿಯಾಗಿ ಕಲಾತಂಡಗಳ ಜೊತೆಯಲ್ಲಿ ಮೆರೆವಣಿಗೆಯ ಮೂಲಕ ಅರ್ಥಪೂರ್ಣವಾಗಿ 2 ದಿನ ಸಾಹಿತ್ಯ ಸಮ್ಮೇಳನ, 1 ದಿನ ಜಲೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು ಜನವರಿಯಲ್ಲಿ ನಡೆದ ಸಮ್ಮೇಳನದ ಸಂಚಿಕೆಯ ರೂಪದಲ್ಲಿ "ಚಿನ್ನ ಹಗರಿಯ ನುಡಿ ತೇರು" ಪುಸ್ತಕ ಬಿಡುಗಡೆ ಮಾಡುತ್ತಿರುವುದು ಶ್ಲಾಘನೀಯ ಎಂದು ಶಾಸಕ ಬಿ ದೇವೇಂದ್ರಪ್ಪ ಹೇಳಿದರು.

ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ದಾವಣಗೆರೆ. ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಜಗಳೂರು ಇವರ ಜಂಟಿ ಸಹಯೋಗದಲ್ಲಿ ಚಿನ್ನ ಹಗರಿಯ ನುಡಿ ತೇರು ಎನ್ನುವ ಪುಸ್ತಕವನ್ನು ಲೋಕಾರ್ಪಣೆ ಕಾರ್ಯಕ್ರಮದಲ್ಲಿ





ಭಾಗವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಸಾಹಿತ್ಯ ಸಮ್ಮೇಳನಗಳ ಪುಸ್ತಕಗಳನ್ನು ಖರೀದಿ ಮಾಡಿ. ಇದರಲ್ಲಿನ ಅಂಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಓದುವಾಗ ಮನಸು ಏಕಾಗ್ರತೆಯಾಗಿರಬೇಕು ಪುಸ್ತಕದ ಮೌಲ್ಯವನ್ನು ನೀವು ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ಚೆನ್ನಾಗಿ ವಿದ್ಯಾಭ್ಯಾಸವನ್ನು ಮಾಡಿ ಒಳ್ಳೆಯ ಹುದ್ದೆಗೆ ಹೋದರೆ ನನ್ನ ಹಾಗೆ ನಿಮ್ಮನ್ನು ಗುರುತಿಸುತ್ತಾರೆ. ಮುಂದಿನ ದಿನಗಳಲ್ಲಿ ನಿಮಗೆ ಉತ್ತಮವಾದ ಭವಿಷ್ಯವಿದೆ ಎಂದು ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬಿದರು.

ಡಾ, ಎಂ ಬಿ ರಾಮಚಂದ್ರಪ್ಪ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ ಮಾತನಾಡಿ ಜಗಳೂರಿನಲ್ಲಿ ನಡೆದ ಜಿಲ್ಲಾ ಸಮ್ಮೇಳನ ರಾಜ್ಯ ಸಮ್ಮೇಳನದಕ್ಕಿಂತ ಉತ್ತಮವಾದ ರೀತಿಯಲ್ಲಿ ಹಾಗಿದೆ. ಶಾಸಕ ಬಿ ದೇವೇಂದ್ರಪ್ಪ ಸೇರಿದಂತೆ ಗೌರವ ಸಹಕಾರವನ್ನು ನೀಡಿ ಅದ್ದೂರಿಯಾಗಿ ಮಾಡಿದ್ದಾರೆ. ನುಡಿ ಜಾತ್ರೆಯಲ್ಲಿ ಮಾತುಗಳು ಅದ್ಭುತವಾಗಿ ನಡೆದವು. ತಾಲೂಕಿನಲ್ಲಿ ಸಾಹಿತಿಗಳಿಗೇನು ಬರವಿಲ್ಲ ಕಾರಣ ಈ ನೆಲದ ಸತ್ವಮೂಲ ಕಾರಣ ಎನ್ನಬಹುದು. ಈ ಸಮ್ಮೇಳನ ರಾಜ್ಯದಲ್ಲಿಯೇ ಹೆಸರು ಮಾಡಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾದ ಬಿ ವಾಮದೇವಪ್ಪ ತೊಗಲೇರಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಸಾಹಿತ್ಯವನ್ನು ಬಿತ್ತಿ ಬೆಳೆಯಬಹುದು ಎನ್ನುವುದನ್ನು ನಾವು ಜಗಳೂರಿನಲ್ಲಿ ನೋಡಿದ್ದೇವೆ. ಶಾಸಕರು ಸಾಹಿತ್ಯದ ಬಗ್ಗೆ ಹಲವಾರು ವಿಶೇಷತೆಗಳನ್ನು ಮೈಗೂಡಿಸಿಕೊಂಡಿದ್ದಾರೆ. ಜೊತೆಗೆ ಶಿಕ್ಷಣ ಪ್ರೇಮಿಯೂ ಹೌದು. ಕಲ್ಲೇದೇವರಪುರ ಗ್ರಾಮದಲ್ಲಿ ದೇವಸ್ಥಾನ ಸೇರಿದಂತೆ ಹಲವು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ ಎಂದರು.

ಸಾಹಿತಿ ಎನ್. ಟಿ. ಎರ್ರಿಸ್ವಾಮಿ ಸಂಪಾದಕರ ನುಡಿ ಮಾತನಾಡಿ ಸಂಸ್ಕೃತಿಕವಾಗಿ ಜಗಳೂರು ಬದಲಾವಣೆ ಹಾಕುತ್ತಿದೆ. 1996ರಲ್ಲಿ ಸಮ್ಮೇಳನ ನಡೆದಿತ್ತು. ಪ್ರತಿ ಸಮ್ಮೇಳನ ನಡೆದ ಮೇಲೆ ನಾವು ಒಂದು ಕೃತಿಯನ್ನು ಬಿಡುಗಡೆ ಮಾಡುತ್ತೇವೆ. ನಾನು ಪಕ್ಕದ ಹಾಲೇಹಳ್ಳಿ ತೊರೆ ಸಾಲಿನ ಹುಡುಗ. ಬುಡಕಟ್ಟು ಜನಾಂಗದಿಂದ ಬಂದವನು. ಈ ಪುಸ್ತಕದಲ್ಲಿ ಜಗಳೂರಿನ ಇತಿಹಾಸವನ್ನೇ ನೋಡಬಹುದು ಎಂದರು.


ಈ ಸಂದರ್ಭದಲ್ಲಿ ತಾಲೂಕು ಕ.ಸಾ.ಪ ಅಧ್ಯಕ್ಷರಾದ ಸುಜಾತಮ್ಮ ರಾಜು, ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷರಾದ ಜಿಎಸ್ ಚಿದಾನಂದ, ಪ್ರಾಂಶುಪಾಲರಾದ ಡಾ, ರಂಗಪ್ಪ ಆರ್, ಡಾ, ದಾದಾಪೀರ್ ನವಿಲೇಹಾಳ್, ರೇವಣ ಸಿದ್ದಪ್ಪ ಅಂಗಡಿ, ಪ್ರಕಾಶ್, ದಿಳ್ಳಪ್ಪ ನಾಗಲಿಂಗಪ್ಪ, ಸೇರಿದಂತೆ ಕಾಲೇಜಿನ ಉಪನ್ಯಾಸಕರು ಉಪಸ್ಥಿತರಿದ್ದರು..

# ಎಸ್ಸೆಸ್ಸೆಲ್ಸಿ ಪಾಸ್‌ಗೆ 33 ಅಂಕ ಸಾಕು : ಮಧು ಬಂಗಾರಪ್ಪ

**ಬೆಂಗಳೂರು:** ರಾಜ್ಯದಲ್ಲಿ ಈ ವರ್ಷದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡಾ 33 ರಷ್ಟು ಅಂಕ ಪಡೆದರೆ ಉತ್ತೀರ್ಣ ಎಂದು ಘೋಷಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಇದು 35 ಅಂಕ ಪಡೆಯಲು ಪರದಾಡುವ ಅನೇಕ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.

ರಾಜ್ಯ ಸರ್ಕಾರದ ಹೊಸ ನಿಯಮ ಈ ವರ್ಷದಿಂದಲೇ ಖಾಸಗಿ ಶಾಲೆಗಳಿಗೂ ಇದು ಅನ್ವಯ ಆಗಲಿದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪ್ರಸಕ್ತ ವರ್ಷದಿಂದ ಶೇಕಡಾ 33 ರಷ್ಟು ಅಂಕ ಪಡೆದರೆ ಎಸ್‌ಎಸ್‌ಎಲ್‌ಸಿ ಪಾಸ್ ಎಂದು ಘೋಷಿಸಲಾಗುವುದು. 625ಕ್ಕೆ 206 ಅಂಕ ಪಡೆದರೆ ವಿದ್ಯಾರ್ಥಿಗಳು





ಉತ್ತೀರ್ಣ ಆಗಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಆಂತರಿಕ ಅಂಕ, ಬಾಹ್ಯ ಅಂಕ ಎರಡು ಸೇರಿ ಶೇಕಡಾ 33 ರಷ್ಟು ಅಂಕ ಪಡೆಯಬೇಕಾಗುತ್ತದೆ. ಇದರಿಂದ ಅನೇಕ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಮಾಹಿತಿ ನೀಡಿದ್ದಾರೆ.

ಸುಧಾರಣೆಗೆ 3 ಪರೀಕ್ಷೆ ವ್ಯವಸ್ಥೆ ಜಾರಿ

ರಾಜ್ಯದಲ್ಲಿ ಪರೀಕ್ಷಾ ವ್ಯವಸ್ಥೆ ಸುಧಾರಣೆಗೆ ಮೂರು ಪರೀಕ್ಷಾ ವ್ಯವಸ್ಥೆ ಜಾರಿ ಮಾಡಲಾಗುವುದು ಎಂದು ಹೇಳಿದ ಅವರು, ಪಾರದರ್ಶಕವಾಗಿ ಇರಲಿ ಎನ್ನುವ ಕಾರಣ–ಕ್ಕೆ ಒತ್ತು ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಪರೀಕ್ಷೆಗಳು ಉತ್ತಮವಾಗಿ ನಡೆಸಲು ವ್ಯವಸ್ಥೆ ಮಾಡಲಾಗಿದೆ. ವಿಶೇಷ ತರಗತಿ ಪಡೆದು ವಿದ್ಯಾರ್ಥಿಗಳನ್ನ ತಯಾರು ಮಾಡಲಾಗಿದೆ. ಹೀಗಾಗಿ ಉತ್ತಮ ಫಲಿತಾಂಶ ಬಂದಿದೆ ಎಂದು ಹೇಳಿದರು.

ಇದೀಗ ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ತರಲು ಶೇಕಡಾ 33 ರಷ್ಟು ಪಾಸಿಂಗ್ ಅಂಕ ನಿಗದಿ ಮಾಡಲಾಗಿದೆ.

625ಕ್ಕೆ 206 ಅಂಕ ಪಡೆದರೆ ಅಥವಾ ಆಯಾ ವಿಷಯದ ಒಟ್ಟು ಅಂಕಗಳಲ್ಲಿ 30 ಅಂಕ ಪಡೆದಿರಬೇಕು. ಆಂತರಿಕ ಮತ್ತು ಬಾಹ್ಯ ಅಂಕ ಸೇರಿ ಒಟ್ಟು ಶೇಕಡಾ 33 ರಷ್ಟುಅಂಕ ಪಡೆದ ವಿದ್ಯಾರ್ಥಿಯನ್ನು ಉತ್ತೀರ್ಣ ಎಂದು ಘೋಷಿಸಲಾಗುತ್ತದೆ ತಿಳಿಸಿದರು.

2025–26ನೇ ಸಾಲಿನಿಂದ ಈ ನಿಯಮ ಜಾರಿಗೆ ಬರಲಿದೆ. ಈ ವರ್ಷ ಹಾಜರಾಗಿರುವ ಎಲ್ಲಾ ವಿದ್ಯಾರ್ಥಿಗಳು, ರಿಪೀಟರ್ಸ್, ಖಾಸಗಿ ಅಭ್ಯರ್ಥಿಗಳಿಗೂ ಈ ನಿಯಮ ಜಾರಿಯಾಗಲಿದೆ ಎಂದು ಮಾಹಿತಿ ನೀಡಿದ್ದಾರೆ.

# ಆರ್‌ಎಸ್‌ಎಸ್ ನಿಷೇಧ ಅಸಾಧ್ಯ: ಬಿ.ವೈ.ವಿಜಯೇಂದ್ರ

**ಚಿತ್ರದುರ್ಗ:** ಆರೆಸ್ಸೆಸ್ ಮೇಲೆ ನಿಷೇಧ ಹೇರುವುದು ಅಸಾಧ್ಯವಾದ ಮಾತು



ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ. ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.

ಇಂದು ಇಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ಸಿನ ಶಾಸಕರು, ಹಿರಿಯ ಸಚಿವರು ಆರ್‌ಎಸ್‌ಎಸ್ ಕುರಿತು ಮನ ಬಂದಂತೆ ಹೇಳಿಕೆ ನೀಡುತ್ತಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘವು 100 ವರ್ಷಗಳನ್ನು ಪೂರೈಸಿದ ಈ ಶುಭ ಘಳಿಗೆಯಲ್ಲಿ ಪ್ರಧಾನಿ ನರೇಂದ್ರ ಮೋದಿಜೀ ಅವರು ಆಗಸ್ಟ್ 15ರಂದು ಕೆಂಪುಕೋಟೆ ಮೇಲೆ ಭಾಷಣ ಮಾಡುವಾಗ ಆರ್‌ಎಸ್‌ಎಸ್ ಅನ್ನು ಪ್ರಶಂಸೆ ಮಾಡಿದ್ದರು ಎಂದು ಗಮನ ಸೆಳೆದರು.

ನಿಸ್ವಾರ್ಥವಾಗಿ ದೇಶವನ್ನು ಕಟ್ಟುವ ಮತ್ತು ಯುವಜನರಲ್ಲಿ ರಾಷ್ಟ್ರಭಕ್ತಿಯನ್ನು ಮೂಡಿಸುವ ಪ್ರಾಮಾಣಿಕ ಕೆಲಸವನ್ನು ಆರೆಸ್ಸೆಸ್ ಮಾಡುತ್ತ ಬಂದಿದೆ. ಕೇವಲ ಕರ್ನಾಟಕ, ಭಾರತವಷ್ಟೇ ಅಲ್ಲ; ಜಗತ್ತಿನ 40ಕ್ಕೂ ಹೆಚ್ಚು ರಾಷ್ಟ್ರಗಳಲ್ಲಿ ಆರ್ ಎಸ್‌ಎಸ್ ಚಟುವಟಿಕೆ ನಡೆಯುತ್ತಿದೆ ಎಂದು ವಿವರಿಸಿದರು.

ಆರೆಸ್ಸೆಸ್ ಅನ್ನು ನಿಷೇಧಿಸುವುದು ಯಾರಿಂದಲೂ ಸಾಧ್ಯವಿಲ್ಲ; ರಾಜ್ಯ ಮತ್ತು ದೇಶದಲ್ಲಿ ಬಿಜೆಪಿ ಹೆಚ್ಚಿನ ಅಸ್ತಿತ್ವ ಇಲ್ಲದ ಸಂದರ್ಭದಲ್ಲೂ ಆರ್‌ಎಸ್‌ಎಸ್ ಅನ್ನು ನಿಷೇಧಿಸಿದ್ದ ಕಾಂಗ್ರೆಸ್ ಪಕ್ಷವು ಬಳಿಕ ನಿಷೇಧವನ್ನು ಹಿಂಪಡೆಯಬೇಕಾಯಿತು. ಈಗ ಬಿಜೆಪಿಯು ನರೇಂದ್ರ ಮೋದಿಜೀ ಅವರ ದಿಟ್ಟ ನಾಯಕತ್ವವನ್ನು ಹೊಂದಿದೆ.

ದೇಶದ ಅನೇಕ ರಾಜ್ಯಗಳಲ್ಲಿ ಬಿಜೆಪಿ ಸರಕಾರವೂ ಇದೆ. ಇಂಥ ಸಂದರ್ಭದಲ್ಲಿ ಆರ್‌ಎಸ್‌ಎಸ್ ನಿಷೇಧದ ಮಾತು ಮೂರ್ಖತನದ ಪರಮಾವಧಿ ಎಂದು ಟೀಕಿಸಿದರು. ಪ್ರಿಯಾಂಕ್ ಖರ್ಗೆಯವರು ನಿಮ್ಮ ಗ್ರಾಮೀಣಾಭಿವೃದ್ಧಿ ಇಲಾಖೆಯ ಸಾಧನೆಗಳು, ಸುಧಾರಣೆಯನ್ನು ರಾಜ್ಯದ ಜನತೆಯ ಮುಂದೆ ಬಿಚ್ಚಿಡಿ ಎಂದು ಬಿ.ವೈ.ವಿಜಯೇಂದ್ರ ಅವರು ಮನವಿ ಮಾಡಿದರು.

# ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯ

**ದಾವಣಗೆರೆ.ಅ.15:** ಹಾಲುಮತ ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕೆಂದು ಕುರುಬರ ಸಂಘದ ಜಿಲ್ಲಾಧ್ಯಕ್ಷ ಪಿ.ಬಿ.ಬೀರಪ್ಪ ಮಲೇಬೆನ್ನೂರು ಸರ್ಕಾರಕ್ಕೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ರಾಜ್ಯದ ಕೆಲ ಜಿಲ್ಲೆಗಳಲ್ಲಿ ಕುರುಬ ಸಮುದಾಯದವರು ಎಸ್ಟಿ ಪಟ್ಟಿಯಲ್ಲಿ ಸೌಲಭ್ಯ ಪಡೆಯುತ್ತಿದ್ದಾರೆ. ಕುರುಬ ಸಮಾಜವು ಎಸ್ಟಿ ಪಟ್ಟಿಗೆ ಸೇರುವ ಎಲ್ಲಾ ಅರ್ಹತೆ ಹೊಂದಿದ್ದು, ಇಡೀ ರಾಜ್ಯಕ್ಕೆ ಅನ್ವಯವಾಗುವಂತೆ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಈ ಸಂಬಂಧ ಮುಂಬರುವ ದಿನಗಳಲ್ಲಿ ಹೋರಾಟ ರೂಪಿಸಲಾಗುವುದು ಎಂದರು.

ಕುರುಬ ಸಮುದಾಯದ ಏಳಿಗೆ, ಮಕ್ಕಳ ಶಿಕ್ಷಣ, ಸರ್ಕಾರಿ ಸೌಲಭ್ಯಗಳ ಜೊತೆಗೆ ಸಮಾಜದ ಸಮಸ್ಯೆ, ಸವಾಲುಗಳಿಗೆ ಸ್ಪಂದಿಸುವ ಸಲುವಾಗಿ ನೂತನವಾಗಿ ರಾಜ್ಯಮಟ್ಟದಲ್ಲಿ ಪ್ರಭುಲಿಂಗ ದೊಡ್ಡಣಿ ಅಧ್ಯಕ್ಷತೆಯಲ್ಲಿ ಕುರುಬರ ಸಂಘ ಅಸ್ತಿತ್ವಕ್ಕೆ ಬಂದಿದೆ. ಜಿಲ್ಲಾ ಉಪಾಧ್ಯಕ್ಷರಾಗಿ ದೇವಿರಿ ದೊಡ್ಡಪ್ಪ, ದಾವಣಗೆರೆ ಉತ್ತರ ಅಧ್ಯಕ್ಷರಾಗಿ ಕೆ.ಹೆಚ್.ಭಗತ್ ಸಿಂಹ, ದಾವಣಗೆರೆ ದಕ್ಷಿಣ ಘಟಕದ ಅಧ್ಯಕ್ಷರಾಗಿ ಎ.ಹೆಚ್.ನಾಗರಾಜ, ಖಜಾಂಚಿಯಾಗಿ ಕೆ.ಆರ್.ಶಿವಾನಂದಪ್ಪ, ಮಾಯಕೊಂಡ ಅಧ್ಯಕ್ಷರಾಗಿ ಹೆಚ್.ರವಿ, ಹರಿಹರ ತಾಲೂಕು ಅಧ್ಯಕ್ಷರಾಗಿ ಎಸ್.ಮಂಜುನಾಥ, ಚನ್ನಗಿರಿ ತಾಲೂಕು ಘಟಕದ ಅಧ್ಯಕ್ಷರಾಗಿ ಡಿ.ಶಿವಣ್ಣ, ಉಪಾಧ್ಯಕ್ಷರಾಗಿ ಕೆ.ಜಗದೀಶ್ ನೇಮಕಗೊಂಡಿದ್ದಾರೆ. ಶೀಘ್ರವೇ ಎಲ್ಲಾ ತಾಲೂಕುಗಳನ್ನು ಪದಾಧಿಕಾರಿಗಳನ್ನು ಆಯ್ಕೆ ಮಾಡಿ ಸಂಘಟನೆ ಬಲಿಷ್ಠಗೊಳಿಸಲಾಗುವುದು ಎಂದು ಅವರು ತಿಳಿಸಿದರು.

ಸಂಘಟನೆ ಪದಾಧಿಕಾರಿಗಳಾದ ದೇವಿರಿ ದೊಡ್ಡಪ್ಪ, ಕೆ.ಹೆಚ್.ಭಗತ್ ಸಿಂಹ, ಎ. ಹೆಚ್.ನಾಗರಾಜ, ಹೆಚ್.ರವಿ, ಎಸ್. ಮಂಜುನಾಥ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ-ನಿಮ್ಮ ಹಠಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು. ವೈಯಕ್ತಿಕ ಮಾರ್ಗದರ್ಶನ ನಿಮ್ಮ ಸಂಬಂಧವನ್ನು ಸುಧಾರಿಸುತ್ತದೆ.

### ವೃಷಭ ರಾಶಿ

ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು. ನೀವು ಹಣವನ್ನು ಸಂಗ್ರಹಿಸಲು ಬಯಸಿದರೆ ನಿಮ್ಮ ಸಂಗಾತಿಯೊಂದಿಗೆ ಅಥವಾ ಪೋಷಕರೊಂದಿಗೆ ಮಾತನಾಡಿ.

### ಮಿಥುನ ರಾಶಿ

ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ಡೇಟ್ ಕಾರ್ಯಕ್ರಮ ವಿಫಲವಾಗಬಹುದಾದ್ದರಿಂದ ನಿರಾಶೆಯಾಗಬಹುದು. ದೇಶಿ ವ್ಯಾಪಾರಕ್ಕೆ ಸೇರಿರುವ ಜನರು, ಇಂದು ಅವರು ಅಪೇಕ್ಷಿತ ಫಲಿತಾಂಶವನ್ನು ಪಡೆಯುವ ಸಂಪೂರ್ಣ ಭರವಸೆ ಇದೆ.

### ಕರ್ಕ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ಮನೆಯ ಕೆಲಸ ಸುಸ್ತು ಮಾಡುತ್ತದೆ ಮತ್ತು ನಿಮ್ಮನ್ನು ಮಾನಸಿಕ ಒತ್ತಡದಲ್ಲಿರಿಸುತ್ತದೆ. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು.

### ಸಿಂಹ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೆಣಟಿಜಜಜುಟಿಜಜರಬರಲು ಪ್ರಯತ್ನಿಸಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ನಾಲಗೆ ನಿಮ್ಮ ಅಜ್ಜ ಅಜ್ಜಿಯಂದಿರ ಭಾವನೆಗಳಿಗೆ ಘಾಸಿ ಮಾಡುವುದರಿಂದ ನಿಮ್ಮ ಭಾಷೆಯನ್ನು ನಿಯಂತ್ರಿಸಿ. ಹರಟಿ ನಿಮ್ಮ ಸಮಯ ವ್ಯರ್ಥ ಮಾಡುವುದಕ್ಕಿಂತ ಸುಮ್ಮನಿರುವುದು ಉತ್ತಮ. ನಾವು ಬುದ್ಧಿವಂತ ಚಟುವಟಿಕೆಗಳ ಮೂಲಕ ಜೀವನಕ್ಕೆ ಅರ್ಥ ನೀಡುತ್ತೇವೆಂದು ನೆನಪಿಡಿ.

### ಕನ್ಯಾ ರಾಶಿ

ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು. ಗುಣಪಡಿಸಲಾರದ್ದನ್ನು ತಡೆದುಕೊಳ್ಳಬೇಕು ಎಂದು ನೆನಪಿಡಿ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ನಿಮಗೆ ಹಣದ ಅಗತ್ಯವಿರುತ್ತದೆ ಆದರೆ ನಿಮ್ಮ ಸಾಕಷ್ಟು ಹಣ ಇರುವುದಿಲ್ಲ.

### ತುಲಾ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ. ನಿಮ್ಮ ಪ್ರೀತಿಪಾತ್ರರ ನಿಷ್ಠೆಯನ್ನು ಅನುಮಾನಿಸಬೇಡಿ.

### ವೃಶ್ಚಿಕ ರಾಶಿ

ಸಂಗಾತಿಯ ಆರೋಗ್ಯಕ್ಕೆ ಸೂಕ್ತ ರಕ್ಷಣೆ ಮತ್ತು ಗಮನದ ಅಗತ್ಯವಿದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಸಹೋದರನಿಗೆ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಸಹಾಯ ಮಾಡಿ. ವ್ಯಾಜ್ಯಗಳನ್ನು ಅನಗತ್ಯವಾಗಿ ಹೆಚ್ಚಿಸದೇ ಅವುಗಳನ್ನು ಸೌಹಾರ್ದತೆಯಿಂದ ಪರಿಹರಿಸಲು ಪ್ರಯತ್ನಿಸಿ. ನಿಮ್ಮ ಪ್ರೇಮ ಜೀವನ ಶರದೃತುವಿನಲ್ಲಿನ ಮರದ ಎಲೆಯಂತಿರುತ್ತದೆ.

### ಧನು ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ.

### ಮಕರ ರಾಶಿ

ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪ್ರೋತ್ಸಾಹಿಸಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ.

### ಕುಂಭ ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ಕೆಲಸದ ಒತ್ತಡ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ.

### ಮೀನ ರಾಶಿ

ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ.

# ಕವಿಗಳ ಕವನಗಳು ಮಾನವನ ಜೀವನವನ್ನು ಪರಿವರ್ತನೆ ಮಾಡುವ ಶಕ್ತಿ ಹೊಂದಿದೆ-ಭೀಮಣ್ಣ ಟಿ.ನಾಯ್ಕ

**ದಾವಣಗೆರೆ:** ಅರ್ಥಪೂರ್ಣ ಹಿರಿಯ ಕವಿ, ಕವಯತ್ರಿಯರ ಕವನಗಳು ಮಾನವನ ಜೀವನವನ್ನು ಸಮಾಜವನ್ನು ಪರಿವರ್ತನೆ ಮಾಡುವ ಶಕ್ತಿ ಹೊಂದಿದೆ. ಕೇವಲ ಹಾಡು, ಕವನ ವಾಚನ, ಕವಿಗೋಷ್ಠಿಗಳಿಗೆ ಸೀಮಿತವಾಗದೇ ನಮ್ಮ ನಿಮ್ಮೆಲ್ಲರ ಮನದಲ್ಲಿ ಹೃದಯದಲ್ಲಿ ಕನ್ನಡ ಭಾಷೆ, ಸಾಹಿತ್ಯದ ಕಾಳಜಿ ಇದ್ದರೆ ಕನ್ನಡದ ಹೋರಾಟಕ್ಕೆ ಸೀಮಿತವಾಗದೇ ಕನ್ನಡದ ಸೇವೆ ಮಾಡೋಣ ಎಂದು ಶಿರಶಿಯ ಸಿದ್ದಾಪುರದ ವಿಧಾನಸಭಾ ಕ್ಷೇತ್ರದ ಶಾಸಕರಾದ ಭೀಮಣ್ಣ ಟಿ.ನಾಯ್ಕ ತಮ್ಮ ಮನದಾಳದ ಮಾತು ವ್ಯಕ್ತಪಡಿಸಿದರು.



ಉತ್ತರ ಕನ್ನಡ ಜಿಲ್ಲೆಯ ಶಿರಶಿಯ ಹೋಟೆಲ್ ಸುಪ್ರಿಯಾ ಇಂಟರ್ ನ್ಯಾಷನಲ್ ಸಭಾಂಗಣದ ಭವ್ಯ-ದಿವ್ಯ ವೇದಿಕೆಯಲ್ಲಿ ಶಿರಶಿಯ ಕದಂಬ ಕಲಾ ಸಾಂಸ್ಕೃತಿಕ ಪರಿಷತ್ತು ಹಾಗೂ ಕರ್ನಾಟಕ ಸಗಮ ಸಂಗೀತ ಪರಿಷತ್ ಸಂಯುಕ್ತಾಶ್ರಯದಲ್ಲಿ ಶತಕಂಠ ಗೀತಗಾಯನ ಸಮಾರಂಭವನ್ನು ಇತ್ತೀಚೆಗೆ ಉದ್ಘಾಟಿಸಿ ಅವರು ಮಾತನಾಡಿದರು. ಸಮಾರಂಭದ ಅಧ್ಯಕ್ಷತೆಯನ್ನು ಉತ್ತರ ಕನ್ನಡ ಜಿಲ್ಲೆಯ ಕರ್ನಾಟಕ ಸಗಮ ಸಂಗೀತ ಪರಿಷತ್‌ನ ಅಧ್ಯಕ್ಷರು ಹಾಗೂ ಕದಂಬ ಕಲಾ ಸಾಂಸ್ಕೃತಿಕ ಪರಿಷತ್ತು ಅಧ್ಯಕ್ಷರಾದ ಕದಂಬ ರತ್ನಾಕರ ವಹಿಸಿಕೊಂಡರು.

ಉತ್ತರ ಕನ್ನಡ ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಬಿ.ಎನ್. ವಾಸರೆಯವರು ಕದಂಬ ರತ್ನಾಕರರವರ "ಹೊನ್ನುಡಿ" ಕವನ ಸಂಕಲನವನ್ನು ವೇದಿಕೆಯಲ್ಲಿ ಲೋಕಾರ್ಪಣೆ ಮಾಡಿದರು. ವೇದಿಕೆಯಲ್ಲಿ ಶಿರಶಿಯ ತಹಶೀಲ್ದಾರರಾದ ಪಟ್ಟರಾಜ ಗೌಡ, ಹಿರಿಯ ಕವಿಗಳಾದ ಬೆಂಗಳೂರಿನ ಡಾ. ಕಾ.ವೆಂ. ಶ್ರೀನಿವಾಸಮೂರ್ತಿ, ಶಿರಶಿಯ ಶಿಕ್ಷಣ ತಜ್ಞರಾದ ಪ್ರೊ.ಕೆ.ಎನ್.ಹೊಸ್ಮನಿ, ಸತೀಶ್‌ನಾಯ್ಕ, ಡಾ. ವೆಂಕಟೇಶನಾಯ್ಕ, ಗಣಪತಿ ಭಟ್, ಗಣಪತಿ ಆರ್.ನಾಯ್ಕ, ಉಮಾಕಾಂತಗೌಡ, ಭೀಮಶಂಕರ ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

ಕರ್ನಾಟಕ ಸಗಮ ಸಂಗೀತ ಪರಿಷತ್‌ನ ಮೈಸೂರು ಜಿಲ್ಲೆಯ ಅಧ್ಯಕ್ಷರಾದ ಡಾ. ನಾಗರಾಜ ವಿ.ಬೈರಿ, ಚಾಮರಾಜ ನಗರದ ಖ್ಯಾತ ಗಾಯಕರಾದ ಸಿ.ಎಂ.ನರಸಿಂಹಮೂರ್ತಿ, ಕ.ಸು.ಸಂ.ಪರಿಷತ್ತಿನ ಮಂಡ್ಯ ಜಿಲ್ಲೆಯ ಅಧ್ಯಕ್ಷರಾದ ಡೇವಿಡ್ ಪ್ರತಿಭಾಂಜಲಿ, ಶಿವಮೊಗ್ಗ ಜಿಲ್ಲಾಧ್ಯಕ್ಷರಾದ ಶ್ರೀಮತಿ ಶಾಂತಾ ಶೆಟ್ಟಿ, ದಾವಣಗೆರೆ ಜಿಲ್ಲೆಯ ಅಧ್ಯಕ್ಷರಾದ ಸಾಲಿಗ್ರಾಮ ಗಣೇಶ್ ಶೆಣೈ, ಬೆಂಗಳೂರಿನ ಹೆಸರಾಂತ ಗಾಯಕರಾದ ಎರ್ರಿಸ್ವಾಮಿ ಹೆಚ್. ಇವರೆಲ್ಲರಿಗೂ ಅವರ ಕಲಾ ಪ್ರತಿಭೆ ಸಾಧನೆಗಳನ್ನು ಗುರುತಿಸಿ "ಕದಂಬ ಕಲಾರಾಧಕ" ರಾಜ್ಯ ಪ್ರಶಸ್ತಿಯನ್ನು ಗಣ್ಯಮಾನ್ಯರ ಸಮ್ಮುಖದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಕುಮಾರಿ ದಿವ್ಯಾ ಎಸ್. ಕದಂಬರವರು ಅಚ್ಚುಕಟ್ಟಾಗಿ ಸಂಗೀತ ಕಾರ್ಯಕ್ರಮಗಳನ್ನು ಸಂಯೋಜಿಸಿದರು. ನೂರಾರು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಗ್ರಂಥಾಲಯವೇ ದೇವಾಲಯ ಗೀತೆಯೊಂದಿಗೆ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಸಮಾರಂಭಕ್ಕೆ ಸಾಮೂಹಿಕ ಗೀತೆಯೊಂದಿಗೆ ಸ್ವಾಗತಿಸಿದರು. ಕೊನೆಯಲ್ಲಿ ಕುಮಾರಿ ದಿವ್ಯಾ ಶೇಟ್ ವಂದಿಸಿದರು. ಕಾವೆಂಶ್ರೀ "ಕಾವ್ಯಯಾನ-ಭಾವಯಾನ" ಕವಿಯ ನೋಡಿ ಕವಿತೆ ಹಾಡಿ ಗೀತಗಾಯನ ಸಮಾರಂಭವು ಅತ್ಯದ್ಭುತವಾಗಿ ಯಶಸ್ವಿಯಾಗಿ ಸುಸಂಪನ್ನಗೊಂಡಿತು ಎಂದು ಕರ್ನಾಟಕ ಸಗಮ ಸಂಗೀತ ಪರಿಷತ್‌ನ ಜಿಲ್ಲಾಧ್ಯಕ್ಷರಾದ, ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ ಸಾಲಿಗ್ರಾಮ ಗಣೇಶ್ ಶೆಣೈ ಮೆಚ್ಚುಗೆ ವ್ಯಕ್ತಪಡಿಸಿದರು.

### ಆಹಾರ ಗೋದಾಮಿನ ಮೇಲೆ ಲೋಕಾಯುಕ್ತ ದಾಳಿ

# ಸಾವಿರಾರು ಕ್ವಿಂಟಾಲ್ ಬಡವರ ಅಕ್ಕಿ ರಾಗಿ ಹುಳುಗಳ ಪಾಲು

ದಾವಣಗೆರೆ: ಎಪಿಎಂಸಿ ಆವರಣದಲ್ಲಿರುವ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಗೋಡಾನ್ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ಸರಿಯಾದ ನಿರ್ವಹಣೆಯ ಕೊರತೆಯಿಂದ ಕೊಳೆತು ಹುಳು ಬಿದ್ದಿರುವ ಸಾವಿರಾರು ಕ್ವಿಂಟಾಲ್ ಅಕ್ಕಿ, ಗೋಧಿ, ರಾಗಿ ಪತ್ತೆಯಾಗಿದೆ.

ಲೋಕಾಯುಕ್ತ ಇನ್ಸ್‌ಪೆಕ್ಟರ್ ಸರಳ ಅವರ ನೇತೃತ್ವದಲ್ಲಿ ನಡೆದ ಈ ದಾಳಿಯ ಸಂದರ್ಭದಲ್ಲಿ, ಗೋಡಾನ್‌ನಲ್ಲಿನ ಹುಳು ಬಿದ್ದಿರುವ ಮತ್ತು ಹಿಟ್ಟಿನ ರೂಪಕ್ಕೆ ತಿರುಗಿರುವ ಅಕ್ಕಿ ಹಾಗೂ ಗೋಧಿಯನ್ನು ಕಂಡು ಅಧಿಕಾರಿಗಳು ನಿಬ್ಬೆರಗಾದರು.

ಗೋಡಾನ್‌ಗೆ ಭೇಟಿ ನೀಡಿದ ಲೋಕಾಯುಕ್ತ ಎಸ್ಪಿ ಎಂ.ಎಸ್. ಕೌಲಾಪುರೆ ಅವರು ಅಲ್ಲಿನ ಅವ್ಯವಸ್ಥೆ ಕಂಡು ಕೆಂಡಮಂಡಾಲರಾದರು.

"ಹುಳು ಬಿದ್ದಿರುವ ಈ ಅಕ್ಕಿಯನ್ನು ನೀವು ತಿಂತೀರಾ? ಇಂತಹದ್ದನ್ನು ಜನ ರಿಗೆ ಕೊಡುತ್ತೀರಲ್ಲಾ ನಿಮಗೆ ಏನು ಅನ್ನಿಸೋ ಲ್ವಾ? ಯಾವುದೇ ನಿರ್ವಹಣೆ ಇಲ್ಲದೆ, ಬೇಜವಾಬ್ದಾರಿ ವಹಿಸಿದರೆ ಹೇಗೆ?" ಎಂದು ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ, ತಕ್ಷಣವೇ ಆಹಾರ ಇಲಾಖೆ ಅಧಿಕಾರಿಗಳಿಗೆ ಕರೆ ಮಾಡಿದ ಎಸ್ಪಿ ಕೌಲಾಪುರೆ ಅವರು ಫುಡ್ ಡಿಡಿ ಮಧುಸೂದನ್ ಅವರಿಗೆ ಕರೆ ಮಾಡಿ ತೀವ್ರ ತರಾಟೆಗೆ ತೆಗೆದುಕೊಂಡರು. ಪ್ರತಿ ಗೋಡಾನ್‌ನಲ್ಲಿ ಸಂಗ್ರಹಿಸಿಟ್ಟ ಧಾನ್ಯಗಳನ್ನು ಪರಿಶೀಲಿಸುವಂತೆ ಸೂಚಿಸಿದರು.

# ಶ್ರೀ ರಾಜವೀರ ಮದಕರಿ ನಾಯಕರ ಜಯಂತಿ ಆಚರಣೆ



**ದಾವಣಗೆರೆ:** ಕರ್ನಾಟಕ ವೀರ ಮದಕರಿ ಸೇನೆ ದಾವಣಗೆರೆ ವತಿಯಿಂದ ಈಚೆಗೆ ನಗರದ ನಾಯಕ ವಿದ್ಯಾರ್ಥಿ ನಿಲಯದ ಆವರಣದಲ್ಲಿ ಶ್ರೀ ರಾಜವೀರ ಮದಕರಿ ನಾಯಕರ 283ನೇ ವರ್ಷದ ಜಯಂತಿಯನ್ನು ಆಚರಿಸಲಾಯಿತು.

ಪಾಲಿಕೆಯ ಮಾಜಿ ಸದಸ್ಯ ಹುಲ್ಲುಮನೆ ಗಣೇಶ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಚಿತ್ರದುರ್ಗ ಜಿಲ್ಲೆಯ ಭರಮಸಾಗರ ಕೆರೆಯ ನಿರ್ಮಾತೃ ಶ್ರೀ ರಾಜವೀರ ಭರಮಣ್ಣ ನಾಯಕರ ಬೃಹತ್ ಪ್ರತಿಮೆಯನ್ನು ಭರಮಸಾಗರದ ಕೆರೆ ಸಮೀಪ ರಾಷ್ಟ್ರೀಯ ಹೆದ್ದಾರಿಯಲ್ಲಿಯೇ ನಿರ್ಮಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ವೀರ ಮದಕರಿ ಸೇನೆಯ ರಾಜ್ಯಾಧ್ಯಕ್ಷರಾದ ಅಣಜಿ ಅಂಜಿನಪ್ಪನವರ ಅಧ್ಯಕ್ಷತೆ ವಹಿಸಿ ಮಾತನಾಡಿ, ಶ್ರೀ ರಾಜವೀರ ಮದಕರಿ ನಾಯಕರ ಜಯಂತಿಯನ್ನು ಪ್ರತಿವರ್ಷವು ಆಚರಿಸಬೇಕು ಹಾಗೂ ರಾಜ್ಯ ಸರ್ಕಾರವು ಕೂಡ ನಾಡ ದೊರೆ ಶ್ರೀ ರಾಜವೀರ ಮದಕರಿ ನಾಯಕರ ಜಯಂತಿಯನ್ನು ಸಕಲ ಸರ್ಕಾರಿ ಗೌರವಾದರದೊಂದಿಗೆ ಆಚರಿಸಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ನಾಯಕ ಸಂಘದ ಗೌರವ ಅಧ್ಯಕ್ಷರಾದ ಅಣ್ಣಾಪುರದ ಹೇಮಣ್ಣ, ನಾಯಕ ಹಾಸ್ಟೆಲ್ ನಿರ್ದೇಶಕ ಹಾಗೂ ವಕೀಲರಾದ ಆಂಜನೇಯ ಗುರೂಜಿ, ತಾಲ್ಲೂಕು ನಾಯಕ ಸಂಘದ ಉಪಾಧ್ಯಕ್ಷರಾದ ಕರೂರು ಗಣೇಶ್, ಎ.ಪಿ.ಎಂ.ಸಿ ಮಾಜಿ ಅಧ್ಯಕ್ಷರಾದ ತುಂಬಿಗೆರೆ ಗಂಗಾಧರಪ್ಪ ಉಪಸ್ಥಿತರಿದ್ದರು.

# ಕಾಂಗ್ರೆಸ್ ನೊಂದಿಗೆ ಶಾಮೀಲಾಗಿಲ್ಲವಾದರೆ ಆಣೆ ಮಾಡಿ; ಕೃಷ್ಣಮೂರ್ತಿ ಪವಾರ್

**ದಾವಣಗೆರೆ:** ಪಕ್ಷದ ಮುತ್ಸದ್ದಿ ನಾಯಕರುಗಳು ಲೋಕಸಭಾ, ವಿಧಾನಸಭಾ ಚುನಾವಣೆಗಳಲ್ಲಿ ಕಾಂಗ್ರೆಸ್ ಜೊತೆ ಶಾಮೀಲಾಗಿ ಬಿಜೆಪಿ ಸೋಲಿಗೆ ಪ್ರತ್ಯಕ್ಷ ಸಾಕ್ಷಿಯಾಗಿದ್ದು, ಈಗ ಕಾಂಗ್ರೆಸ್‌ನವರೊಂದಿಗೆ ಶಾಮೀಲಾಗಿಲ್ಲ ಎಂದು ಕಾರ್ಯಕರ್ತರನ್ನು ನಂಬಿಸುತ್ತಿರುವ ನಾಯಕರುಗಳು ಭಾಜಪ ಕಾರ್ಯಾಲಯಕ್ಕೆ ಬಂದು ಧರ್ಮಸ್ಥಳದ ಮಂಜುನಾಥ ಸ್ವಾಮಿಯ ಮೇಲೆ ಆಣೆ ಮಾಡಿ ಕಾರ್ಯಕರ್ತರ ನಂಬಿಕೆಯನ್ನು ಉಳಿಸಿಕೊಳ್ಳಿರಿ ಎಂದು ಅಟಲ್ ಬಿಹಾರಿ ವಾಜಪೇಯಿ ಅಭಿಮಾನಿ ಬಳಗವು ಆಹ್ವಾನ ನೀಡಿದೆ.

ಪಕ್ಷದ ಕಚೇರಿಗೆ ಬಂದು ಯಾವಾಗ ಆಣೆ ಮಾಡುತ್ತೀರಿ ಎಂಬುದನ್ನು ನೀವೇ ದಿನಾಂಕ ನಿಗದಿಪಡಿಸಿರಿ. ಹೊನ್ನಾಳಿಯ ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಿ ಹೀನಾಯವಾಗಿ ಸೋತು ಈಗ ಮಾನ ಮರ್ಯಾದೆ ಇಲ್ಲದೆ ಜಿಲ್ಲಾ ಮುಖಂಡವತ್ವವನ್ನು ವಹಿಸಿಕೊಳ್ಳಲು ಹವಣಿಸುತ್ತಿರುವ ನಾಯಕರುಗಳೇ ಮೊದಲು ನಿಮ್ಮ ಕ್ಷೇತ್ರವನ್ನು ಗಟ್ಟಿ ಮಾಡಿಕೊಳ್ಳಿ ಎಂದು ಪರೋಕ್ಷವಾಗಿ ಮಾಜಿ ಸಚಿವ .ಪಿ. ರೇಣುಕಾಚಾರ್ಯಗೆ ಬಳಗದ ಅಧ್ಯಕ್ಷರಾದ ಕೃಷ್ಣಮೂರ್ತಿ ಪವಾರ್ ಪತ್ರಿಕಾ ಪ್ರಕಟಣೆಯಲ್ಲಿ ಟಾಂಗ್ ಕೊಟ್ಟಿದ್ದಾರೆ.

ಪಕ್ಷಕ್ಕಾಗಿ, ಪಕ್ಷದ ಪುರೋಭಿವೃದ್ಧಿಗಾಗಿ ಹಗಲಿರುಳು ಮನೆ-ಮಠ ವ್ಯವಹಾರಗಳನ್ನು ತೊರೆದು ನಿಷ್ಠೆಯಿಂದ ಪ್ರಾಮಾಣಿಕವಾಗಿ ದುಡಿದ ಕಾರ್ಯಕರ್ತರುಗಳಿಗೆ ನಮ್ಮ ಜಿಲ್ಲೆಯ ಗುಂಪುಗಾರಿಕೆಯಿಂದಾಗಿ ಪಕ್ಷದ ವರ್ಚಸ್ಸಿಗೆ ಸಾಕಷ್ಟು ಹಾನಿಯಾಗಿದೆ. ಅದಲ್ಲದೆ ಇವರ ಗುಂಪುಗಾರಿಕೆಯಿಂದ ಪಕ್ಷದ ನಾಯಕರಾಗಿ ಹೊರಹೊಮ್ಮಬೇಕಾಗಿದ್ದ ಅನೇಕ ಕಾರ್ಯಕರ್ತರನ್ನು ಮೂಲೆಗುಂಪು ಮಾಡಿರುವುದು ವಿಷಾದನೀಯ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.ದಾವಣಗೆರೆಗೆ ಬಂದು ಗುಂಪುಗಾರಿಕೆ ಮಾಡುವುದನ್ನು ಬಿಟ್ಟು ಪಕ್ಷದ ನಿಷ್ಠಾವಂತ ಕಾರ್ಯಕರ್ತರುಗಳನ್ನು ಒಳಗೊಂಡು ಎಲ್ಲರನ್ನೂ ಒಗ್ಗೂಡಿಸುವ ಕೆಲಸ ಮಾಡಿ, ಮುತ್ಸದ್ದಿ ರಾಜಕಾರಣಿ ಮಾಜಿ ಮುಖ್ಯ ಸಚೇತಕರು ಹಾಗೂ ಜಿಲ್ಲಾಧ್ಯಕ್ಷರು ಎರಡೂ ಗುಂಪುಗಳನ್ನು ಒಂದು ಮಾಡುವ ಜವಾಬ್ದಾರಿ ಇದ್ದರೂ ಈ ಕೆಲಸವನ್ನು ಯಾಕೆ ಮಾಡುತ್ತಿಲ್ಲ. ಮೊದಲು ಈ ಕೆಲಸವನ್ನು ಮಾಡಿರಿ ಎಂದು ಸಲಹೆ ನೀಡಿದ್ದಾರೆ. ಜಿಲ್ಲಾಧ್ಯಕ್ಷರು ಎರಡು ಗುಂಪುಗಳನ್ನು ಒಂದು ಮಾಡುವ ಪ್ರಯತ್ನ ಮಾಡಿ. ನಾವು ಯಾವುದೇ ಗುಂಪಿನ ಅಭಿಮಾನಿಗಳಲ್ಲ, ನಾವು ಎಲ್ಲರೂ ಪಕ್ಷ ನಿಷ್ಠರು. ಹಾಗೂ ಮಾಡಿರುವ ತಪ್ಪಿಗೆ ಸಾರ್ವಜನಿಕವಾಗಿ ಕ್ಷಮೆ ಯಾಚಿಸಿ. ಶಿಸ್ತು ಬದ್ಧ ಪಕ್ಷಕ್ಕೆ ಶಿಸ್ತನ್ನು ಮರಳಿ ತರುವ ಪ್ರಯತ್ನ ಮಾಡಿ ಎಂದು ಕೋರಿದ್ದಾರೆ.

# ಚಿಗಟೇರಿ ಅಸ್ಪತ್ರೆಗೆ ಸಿಎಸ್‌ಆರ್ ನಿಧಿಯಡಿ ವೈದ್ಯಕೀಯ ಉಪಕರಣಗಳ ಹಸ್ತಾಂತರ ಕಾಯಕ್ರಮ

**ದಾವಣಗೆರೆ:** ಆರೋಗ್ಯ ಮತು ಕುಟುಂಬ ಕಲ್ಯಾಣ ಇಲಾಖೆ ಚಿಗಟೇರಿ ಜಿಲ್ಲಾಸ್ಪತ್ರೆ ಹಾಗೂ ಬಿಎನ್‌ಪಿ(ಬ್ಯಾಮಕ್ ನೋಟ್ ಪೇಪರ್ ಮಿಲ್) ಸಹಯೋಗದಲ್ಲಿ ಅಕ್ಟೋಬರ್ 16ರಂದು ಮಧ್ಯಾಹ್ನ 2.30ಕ್ಕೆ ನಗರದ ಚಿಗಟೇರಿ ಜಿಲ್ಲಾಸ್ಪತ್ರೆ ಡಿಐಇಸಿ ಸಭಾಂಗಣದಲ್ಲಿ ಸಿಎಸ್‌ಆರ್ ನಿಧಿಯಡಿ ನೀಡಲಾದ ವೈದ್ಯಕೀಯ ಉಪಕರಣಗಳ ಹಸ್ತಾಂತರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ ಕಾರ್ಯಕ್ರಮ ಉದ್ಘಾಟಿಸಲಿದ್ದು, ಬಿಎನ್‌ಎಂಪಿ ಮ್ಯಾನೇಜಿಂಗ್ ಡೈರೆಕ್ಟರ್ ಎಸ್. ತಾಳಿಕೇರಪ್ಪ ವೈದ್ಯಕೀಯ ಉಪಕರಣಗಳ ಹಸ್ತಾಂತರಿಸುವರು. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗಿತ್ತೆ ಮಾಧವ ವಿಠಲ ರಾವ್, ಜಿಲ್ಲಾ ಅರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ ಭಾಗವಹಿಸುವರು ಎಂದು ಜಿಲ್ಲಾಸ್ಪತ್ರೆಯ ಅಧೀಕ್ಷಕ ಡಾ.ನಾಗೇಂದ್ರಪ್ಪ ತಿಳಿಸಿದ್ದಾರೆ.

## ನಿಧನ ಸುದ್ದಿಗಳು

### ಮಂಜುನಾಥ್ ನಿಧನ

**ದಾವಣಗೆರೆ:** ತಾಲ್ಲೂಕು ಚಿಕ್ಕತೋಗಲೇರಿ ಗ್ರಾಮದ ಪಾಸಿ ಜಿ. ಪ್ರಭಾಕರ ಅವರ ಪುತ್ರ ಚಿಕ್ಕತೊಗಲೇರಿ ಪಿ. ಮಂಜುನಾಥ್‌ಇವರು ದಿನಾಂಕ : 14.10.2025ರ ಮಂಗಳವಾರ ಬೆಳಿಗ್ಗೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 35 ವರ್ಷ ವಯಸ್ಸಾಗಿತ್ತು. ಮೃತರ ಅಂತ್ಯಕ್ರಿಯೆಯನ್ನು ಚಿಕ್ಕತೊಗಲೇರಿ ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಎಸ್. ಮರುಳಸಿದ್ದಯ್ಯ ನಿಧನ

**ದಾವಣಗೆರೆ:** ನಗರದ ಬನಶಂಕರಿ ಬಡಾವಣೆಯ ನಿವಾಸಿ ಹಾಗೂ ವಿಶ್ವ ಬಂಧು ಅಭಿವೃದ್ಧಿ ಪ್ರತಿಷ್ಠಾನದ ಕಾರ್ಯದರ್ಶಿಯಾಗಿದ್ದ ಎಸ್. ಮರುಳಸಿದ್ದಯ್ಯ ಇವರು ದಿನಾಂಕ 14.10.2025ರ ಮಂಗಳವಾರ ಸಂಜೆ 7.45 ಕ್ಕೆ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ನಿಧನರಾದರು. ಇವರಿಗೆ 72 ವರ್ಷ ವಯಸ್ಸಾಗಿತ್ತು.ಇವರ ಸ್ವಗ್ರಾಮ ಚಿತ್ರದುರ್ಗ ತಾಲ್ಲೂಕು, ಭರಮಸಾಗರ ಹೋಬಳಿ, ಹುಲ್ಲೇಹಾಳು ಗ್ರಾಮಕ್ಕೆ ಕೊಂಡೊಯ್ಯಲಾಗುವುದು. ಅಲ್ಲಿ ಮಧ್ಯಾಹ್ನ 3.30 ಕ್ಕೆ ಅಂತಿಮ ಸಂಸ್ಕಾರ ನೆರವೇರಿಸಲಾಯಿತು .

### ಕಮಲಮ್ಮ ನಿಧನ

**ಚನ್ನಗಿರಿ:** ತಾಲ್ಲೂಕಿನ ರಾಜಗೊಂಡನಹಳ್ಳಿ ಗ್ರಾಮದ ಗೌಡ್ರು ಪರಮೇಶಪ್ಪ ಅವರ ಪತ್ನಿ ಕಮಲಮ್ಮ (72) ಮಂಗಳವಾರ ನಿಧನರಾದರು. ಬುಧವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನಡೆಯದಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಕಿತ್ತೂರು ರಾಣೆ ಚನ್ನಮ್ಮ ಜಯಂತಿ ನಿಮಿತ್ಯ ಪೂರ್ವಭಾವಿ ಸಭೆ

**ಗದಗ** : ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವು ಅಕ್ಟೋಬರ್ 23 ರಂದು ಆಚರಿಸಲಾಗುವ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ನಿಮಿತ್ಯ ಅಕ್ಟೋಬರ್ 16 ರಂದು ಗುರುವಾರ ಬೆಳಿಗ್ಗೆ:11.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಆಗಮಿಸಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೇರ ಸಂದರ್ಶನ

**ಚಿಕ್ಕಮಗಳೂರು:** ನಗರದ ಖಾಸಗಿ ಕಂಪನಿಯಾದ ಅಪೋಲೋ ಫಾರ್ಮಸಿ ಮತ್ತು ಕೊಡಚಾದ್ರಿ ಚಿಟ್ಸ್ ಪ್ರೈ.ಲಿ.ನ ಶಾಖೆಯಲ್ಲಿ ಖಾಲಿ ಇರುವ ಹುದ್ದೆಗೆ ಅಕ್ಟೋಬರ್ 16 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ಏರ್ಪಡಿಸಲಾಗಿದೆ.


ನಗರಸಭಾ ಕಾರ್ಯಾಲಯ, ಚಿಕ್ಕಮಗಳೂರು

CITY MUNICIPAL COUNCIL, CHIKKAMAGALURU

office:08262-230420
Fax :0862232272

Commissioner:08262-232272
E-mail ID :comm ckg@yahoo.co.in
Website:WWW.Chickmagalur.gov.in

ಸಂ: ಸಿ.ಎಂ.ಸಿ/ಆಸಿ.ಕೆ.ಎಂ/15ನೇ ಹಕಾ ಎನ್.ಎಂ.ಪಿ.ಸಿ ಉ/ಸಿಆರ್/01/2025-26 ದಿನಾಂಕ:08.10.2025

ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

2021-22ನೇ ಸಾಲಿನ 15ನೇ ಹಣಕಾಸು ಯೋಜನೆ (ಎನ್.ಎಂ.ಪಿ.ಸಿ) ಉಳಿತಾಯ ಯೋಜನೆಯಡಿ ಈ ಕೆಳಕಂಡ ಕಾಮಗಾರಿಯನ್ನು ನಿರ್ವಹಿಸಲು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ದರ್ಜೆಯ ಗುತ್ತಿಗೆದಾರರಿಂದ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತ ಗುತ್ತಿಗೆದಾರರು ಷರತ್ತುಗಳಿಗೊಳಪಟ್ಟು ಟೆಂಡರ್ ಸಲ್ಲಿಸಬಹುದಾಗಿದೆ.

| ಕ್ರಸಂ | ವಿವರ | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) | ಇ.ಎಂ.ಡಿ (ರೂಗಳಲ್ಲಿ) |
|---|---|---|---|
| 1 | DMA/2025-26/WS/WORK-INDENT50383 | 13.43 | 33,600.00 |

ಟೆಂಡರ್ ಫಾರಂ ಬೆಲೆ ಇ-ಪ್ರೊಕ್ಯೂರ್‌ಮೆಂಟ್ ನಂತೆ ಕಾಲಾವಧಿ-06 ತಿಂಗಳು(ಮಳೆಗಾಲ ಹೊರತುಪಡಿಸಿ)

1. ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ:24.10.2025 ರ 17.30 ಗಂಟೆಯವರೆಗೆ
2. ಬಿಡ್ ತೆರೆಯುವ ದಿನಾಂಕ 27.10.2025 ರ 11.00 ಗಂಟೆಗೆ

ಹೆಚ್ಚಿನ ವಿವರಗಳನ್ನು ಈ ಕಛೇರಿಯ ಕೆಲಸದ ವೇಳೆಯಲ್ಲಿ ಮತ್ತು https;//kppp.karnataka.gov.in ನಲ್ಲಿ ಪಡೆಯಬಹುದಾಗಿದೆ.ಕಾರಣಾಂತರಗಳಿಂದ ಯಾವುದೇ ಬದಲಾವಣೆಗಳಾದ್ದಲ್ಲಿ ಇ-ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು. ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ. ಗುತ್ತಿಗೆದಾರರು ಕೆ.ಪಿ.ಪಿ.ಪಿ ಪೋರ್ಟಲ್ ನಲ್ಲಿ ಗಮನಿಸಬಹುದಾಗಿದೆ.

ಸಹಿ/-
ಶ್ರೀಮತಿ ಬಿ.ಶೀಲಾ ದಿನೇಶ್
ಅಧ್ಯಕ್ಷರು
ನಗರಸಭೆ, ಚಿಕ್ಕಮಗಳೂರು

ಸಹಿ/-
ಶ್ರೀಮತಿ ಲಲಿತಾ ರವಿನಾಯ್ಕ್
ಉಪಾಧ್ಯಕ್ಷರು
ನಗರಸಭೆ, ಚಿಕ್ಕಮಗಳೂರು

ಸಹಿ/-
(ಶ್ರೀ ಬಿ.ಸಿ,ಬಸವರಾಜು ಕೆ.ಎಂ.ಎ.ಎಸ್.)
ಪೌರಾಯುಕ್ತರು
ನಗರಸಭೆ, ಚಿಕ್ಕಮಗಳೂರು

# ನನಗೆ ಕಾಂಗ್ರೇಸ್ ಪಕ್ಷವೇ ಸರ್ವಸ್ವವಾಗಿದೆ: ಎಚ್.ಬಿ.ಮಂಜಪ್ಪ



**ಹೊನ್ನಾಳಿ :** ಕಳೆದ 31 ವರ್ಷಗಳಿಂದ ಕಾಂಗ್ರೇಸ್ ಪಕ್ಷದ ನಿಷ್ಟಾವಂತ ಕಾರ್ಯಕರ್ತನಾಗಿ ಸೇವೆ ಸಲ್ಲಿಸುತ್ತಾ ರಾಜಕೀಯ ಕ್ಷೇತ್ರದ ವಿವಿಧ ಹುದ್ದೆಗಳನ್ನು ಅಲಂಕರಿಸುತ್ತಾ ಪಕ್ಷದ ನಿಷ್ಠಿಯ ವಿಷಯ ಬಂದಾಗ ಯಾರೊಂದಿಗೂ ರಾಜೀಯಾಗದೇ ತನ್ನ ಅನೇಕ ಸ್ನೇಹಿತರು, ಹಾಗೂ ಬಂಧುಗಳನ್ನು ಕೂಡ ದೂರಮಾಡಿಕೊಂಡಿದ್ದೆ, ನನಗೆ ಕಾಂಗ್ರೇಸ್ ಪಕ್ಷವೇ ಸರ್ವಸ್ವವಾಗಿದೆ ಎಂದು ಕಾಂಗ್ರೇಸ್ ಜಿಲ್ಲಾಧ್ಯಕ್ಷ ಹಾಗೂ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ನೂತನ ಅಧ್ಯಕ್ಷರಾಗಿರುವ ಎಚ್.ಬಿ.ಮಂಜಪ್ಪ ಹೇಳಿದರು.

ಮಂಗಳವಾರ ಹಿರೇಕಲ್ಮಠದಲ್ಲಿ ಹೊನ್ನಾಳಿ ಮತ್ತು ನ್ಯಾಮತಿ ಅವಳಿ ತಾಲೂಕುಗಳ ಕಾಂಗ್ರೇಸ್ ಮುಖಂಡರು, ಕಾರ್ಯಕರ್ತರು, ಹಾಗೂ ಎಚ್.ಬಿ.ಮಂಜಪ್ಪ ಅಭಿಮಾನಿ ಬಳಗವತಿಯಿಂದ ಹಮ್ಮಿಕೊಂಡಿದ್ದ ಎಚ್.ಬಿ.ಮಂಜಪ್ಪ ಅವರಿಗೆ ಅಭಿನಂದನೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕಾಂಗ್ರೇಶ್ ಪಕ್ಷ ಯಾವುದೇ ಜವಾಬ್ದಾರಿ ಕೊಟ್ಟಾಗಲೂ ಕೂಡ ತಾನು ಅತ್ಯಂತ ನಿಷ್ಟೆಯಿಂದ ಸೇವೆ ಮಾಡಿಕೊಂಡು ಬಂದಿದ್ದೇನೆ ಬೇರೆ ಪಕ್ಷದ ಬಗ್ಗೆ ಕನಸು ಮನಸ್ಸೂ ಯೋಚನೆ ಮಾಡದೇ ಕಾಂಗ್ರೇಸ್ ಪಕ್ಷದ ಸೇವೆ ಮಾಡಿಕೊಂಡು ಬರುತ್ತಿದ್ದೇನೆ ಎಂದರು.

ಹೊನ್ನಾಳಿ ಖಾದಿ ಗ್ರಾಮೋದ್ಯೋಗ ಸಹಾಕಾರಿ ಸಂಘದ ಅಧ್ಯಕ್ಷನಾಗಿ ನಂತರ ಪಟ್ಟಣ ಪಂಚಾಯಿತಿ ಅಧ್ಯಕ್ಷನಾಗಿ ಇದೇ ರೀತಿ ತಾಲೂಕು ಪಂಚಾಯಿತಿ, ಯುವಕಾಂಗ್ರೇಸ್ ಅಧ್ಯಕ್ಷನಾಗಿ ನಂತರ ಜಿಲ್ಲಾ ಪಂಚಾಯಿತಿ ಅಧ್ಯಕ್ಷನಾಗಿ ಪ್ರಸ್ತುತ ರಾಜ್ಯದ ಮುಖ್ಯಮಂತ್ರಿ,ಉಪಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ್, ಶಾಮನೂರು ಕುಟುಂಬದ ಹಿರಿಯ ರಾಜಕಾರಣಿ ಮುತ್ಸದ್ದಿ ಶಾಮನೂರು ಶಿವಶಂಕರಪ್ಪ, ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಅವರುಗಳ ಅಭಿಮಾನದ ಫಲವಾಗಿ ಇಂದು ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷನಾಗಿ ನೇಮಕಗೊಂಡಿದ್ದೇನೆ. ಇಂದು ಪಕ್ಷದಲ್ಲಿ ಏನೇ ಸ್ಥಾನ- ಮಾನ ನನಗೆ ಲಭಿಸಿದ್ದರೂ ಇದಕ್ಕೆ ಪ್ರಮುಖ ಕಾರಣ ಎಸ್.ಎಸ್.ಮಲ್ಲಿಕಾರ್ಜುನ್, ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಹಾಗೂ ಶಾಮನೂರು ಶಿವಶಂಕರಪ್ಪ, ಸ್ಥಳೀಯ ಶಾಸಕ ಡಿ.ಜಿ.ಶಾಂತನಗೌಡ ಅವರುಗಳ ಎಂದು ಸ್ಮರಿಸಿದರು .ಕುರುಬ ಸಮಾಜ ಸೇರಿದಂತೆ ವೀರಶೈವ ಲಿಂಗಾಯಿತ, ಬಂಜಾರ ಸಂಘಗಳು, ವಿವಿಧ ಸಮುದಾಯಗಳು ಎಚ್.ಬಿ.ಮಂಜಪ್ಪ ಅವರಿಗೆ ಸನ್ಮಾನಿಸಿದರು.

ಮಂಗಳವಾರ ಬೆಳಗ್ಗೆ ಸಾವಿರಾರು ಜನ ಅಭಿಮಾನಿಗಳು ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಅದ್ದೋರಿ ಮೆರವಣಿಗೆ ಮೂಲಕ ಹಿರೇಕಲ್ಮಠದ ಸಮುದಾಯ ಭವನದ ವೇದಿಕೆಗೆ ಕರೆತರಲಾಯಿತು.ಅಭಿನಂದನೆ ಸಮಾರಂಭದಲ್ಲಿ ಕುರುಬ ಸಮಾಜದವತಿಯಿಂದ ಕರಿ ಕಂಬಳಿ ಮತ್ತು ಕುರಿ, ಹಾಗೂ ಬೆಳ್ಳಿ ಗದೆಗಳನ್ನು ನೀಡಿ ಎಚ್.ಬಿ.ಮಂಜಪ್ಪ, ಶಾಸಕ ಡಿ.ಜಿ.ಶಾಂತನಗೌಡ ಅವರನ್ನು ಸನ್ಮಾನಿಸಲಾಯಿತು ಮುಖಂಡ ವಸಂತನಾಯ್ಕ ಕಾರ್ಯಕ್ರಮ ನಿರೂಪಿಸಿದರು.

ಕುರುಬ ಸಮಾಜದ ಮೋಹನ್, ವಾಗೀಶ್, ಸೇರಿದಂತೆ,ಪುಟ್ಟಪ್ಪ, ಬೆನಕಪ್ಪ, ವಾಸಪ್ಪ, ವಿಜೇಂದ್ರಪ್ಪ, ಎಚ್.ಬಿ.ಅಣ್ಣಪ್ಪ, ಮುಖಂಡ ಗದ್ದಿಗೇಶ್, ಮಧುಗೌಡ, ನರಸಿಂಹಪ್ಪ,ತಮ್ಮಣ್ಣ ಪುರಸಭೆ ಅಧ್ಯಕ್ಷ ಮೈಲಪ್ಪ, ಉಪಾಧ್ಯಯಕ್ಷೆ ಸಾವಿತ್ರಮ್ಮ ವಿಜೇಂದ್ರಪ್ಪ,ಸೇರಿದಂತೆ ವಿವಿಧ ತಾಲೂಕುಗಳ, ಅನೇಕ ಮುಖಂಡರು, ಜನಪ್ರತಿನಿಧಿಗಳು ಭಾಗವಹಿಸಿದ್ದರು.

# ಪ್ರತೀ ಜಿಲ್ಲೆಯಲ್ಲೂ ಸುಸಜ್ಜಿತ ಕ್ಯಾನ್ಸರ್ ಆಸ್ಪತ್ರೆ



**ತುಮಕೂರು:** ನಗರದ ಜಿಲ್ಲಾಸ್ಪತ್ರೆ ಆವರಣದಲ್ಲಿ ಸುಮಾರು ನಿರ್ಮಿಸಿರುವ 100 ಹಾಸಿಗೆಗಳ ನೂತನ ಕ್ಯಾನ್ಸರ್ ಆಸ್ಪತ್ರೆಯ ಕಟ್ಟಡದ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನವೆಂಬರ್ 7ರಂದು ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಆರ್. ಪಾಟೀಲ ತಿಳಿಸಿದರು.

ಕ್ಯಾನ್ಸರ್ ಆಸ್ಪತ್ರೆ ಕಟ್ಟಡವನ್ನು ಪರಿಶೀಲಿಸಿ ಮಾತನಾಡಿದ ಅವರು, ಕ್ಯಾನ್ಸರ್ ಆಸ್ಪತ್ರೆಯನ್ನು ರೋಗಿಗಳ ಚಿಕಿತ್ಸೆಗೆ ಕಾರ್ಯಾಚರಣೆಗೊಳಿಸಲು ಪ್ರಥಮ ಹಂತದಲ್ಲಿ ಸುಮಾರು 41 ಕೋಟಿ ರೂ. ವೆಚ್ಚದಲ್ಲಿ ಅಗತ್ಯವಿರುವ ವೈದ್ಯಕೀಯ ಉಪಕರಣಗಳನ್ನು ಅಳವಡಿಸಲಾಗುವುದು. ಉಪಕರಣಗಳ ಅಳವಡಿಕೆಗೆ ನಾಲ್ಕೈದು ತಿಂಗಳು ಸಮಯ ಬೇಕಾಗಬಹುದು ಎಂದರಲ್ಲದೆ, ಉಪಕರಣ ಖರೀದಿಗಾಗಿ ಟೆಂಡರ್ ಕರೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪ್ರತೀ ದಿನ ಸುಮಾರು 20 ರಿಂದ 30 ಕ್ಯಾನ್ಸರ್ ರೋಗಿಗಳು ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ಭೇಟಿ ನೀಡುತ್ತಿದ್ದು, ಈ ರೋಗಿಗಳಿಗೆ ಕಿಮೋಥೆರಪಿ, ರೇಡಿಯೋ ಥೆರಪಿ ಹಾಗೂ ಆಂಕೊ ಸರ್ಜರಿ ಚಿಕಿತ್ಸೆಗಾಗಿ ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಗೆ ಕಳುಹಿಸಲಾಗುತ್ತಿದೆ.

ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಗೆ ಪ್ರತೀ ದಿನ ರಾಜ್ಯವಲ್ಲದೆ ಇತರೆ ರಾಜ್ಯದ ಕ್ಯಾನ್ಸರ್ ರೋಗಿಗಳೂ ಚಿಕಿತ್ಸೆಗೆ ಬರುತ್ತಿರುವುದರಿಂದ ಕಿದ್ವಾಯಿ ಆಸ್ಪತ್ರೆಯ ಒತ್ತಡ ಕಡಿಮೆ ಮಾಡಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಕ್ಯಾನ್ಸರ್ ಆಸ್ಪತ್ರೆ ನಿರ್ಮಿಸಲಾಗುವುದು ಎಂದು ತಿಳಿಸಿದರು.

ರಾಜ್ಯದಲ್ಲಿ 24 ಸರ್ಕಾರಿ ಮೆಡಿಕಲ್ ಕಾಲೇಜುಗಳಿದ್ದು ಬಡವರು, ಸಾಮಾನ್ಯರಿಗೆ ಉಚಿತ ಹಾಗೂ ಕಡಿಮೆ ದರದಲ್ಲಿ ಗುಣಮಟ್ಟದ ವೈದ್ಯಕೀಯ ಸೌಲಭ್ಯ ನೀಡುವ ಉದ್ದೇಶದಿಂದ ಪ್ರತೀ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜನ್ನು ತೆರೆಯಲು ಯೋಜಿಸಲಾಗಿದೆ ಎಂದು ಹೇಳಿದರು.

ಮುಂದಿನ 5 ವರ್ಷಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲಿಯೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ ನಿರ್ಮಿಸಲು ನಿರ್ಣಯಿಸಲಾಗಿದೆ. ಗುಲ್ಬರ್ಗಾ, ರಾಜಯಚೂರಿನಲ್ಲಿ ಈಗಾಗಲೇ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸಲಾಗಿದ್ದು, ಬಳ್ಳಾರಿಯಲ್ಲಿ ಉದ್ಘಾಟನೆಗೆ ಸಿದ್ಧವಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸಲು ಕಳೆದ ಆಯವ್ಯಯದಲ್ಲಿ ಮಂಡಿಸಲಾಗಿದೆ ಎಂದು ತಿಳಿಸಿದರು.

ಕ್ಯಾನ್ಸರ್ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಪ್ರತೀ ಜಿಲ್ಲೆಯಲ್ಲಿಯೂ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಮಾಡಲಾಗುವುದು. ಕಲ್ಬುರ್ಗಿಯಲ್ಲಿ ಈಗಾಗಲೇ ನಿರ್ಮಿಸಿರುವ 100 ಹಾಸಿಗೆಗಳುಳ್ಳ ಕ್ಯಾನ್ಸರ್ ಆಸ್ಪತ್ರೆ ಕಾರ್ಯ ನಿರ್ವಹಿಸುತ್ತಿದೆ. ಬಳ್ಳಾರಿ, ಬೀದರ್, ರಾಯಚೂರಿಗೂ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರದಿಂದ ಮಂಜೂರಾತಿ ದೊರೆತಿದೆ. ಶಿವಮೊಗ್ಗ, ಮಂಡ್ಯದಲ್ಲಿ ಕಟ್ಟಡ ಪೂರ್ಣಗೊಂಡಿದ್ದು, ಶೀಘ್ರದಲ್ಲಿ ಲೋಕಾರ್ಪಣೆಗೊಳಿಸಲಾಗುವುದು ಎಂದರು.

ಮುಖ್ಯಮಂತ್ರಿಗಳು ನವೆಂಬರ್ 7ರಂದು ನಗರದಲ್ಲಿ ಕ್ಯಾನ್ಸರ್ ಆಸ್ಪತ್ರೆಯೊಂದಿಗೆ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ನರ್ಸಿಂಗ್ ಕಾಲೇಜು ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಕ್ಯಾನ್ಸರ್ ಆಸ್ಪತ್ರೆಗೆ ವೈದ್ಯಕೀಯ ಉಪಕರಣಗಳೊಂದಿಗೆ ಅಗತ್ಯ ಸಿಬ್ಬಂದಿಗಳ ನೇಮಕಕ್ಕೆ ಕ್ರಮವಹಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಶಾಸಕರಾದ ಜಿ.ಬಿ. ಜ್ಯೋತಿ ಗಣೇಶ್ ಹಾಗೂ ಸುರೇಶ್ ಗೌಡ, ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕ ಸುಜಾತ ರಾಥೋಡ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್, ಜಿಲ್ಲಾ ಶಸಚಿಕಿತ್ಸಕ ಡಾ. ಅಸ್ಗರ್ ಬೇಗ್, ಕಿದ್ವಾಯಿ ಆಸ್ಪತ್ರೆಯ ಡಾ. ನವೀನ್, ಇಂಜಿನಿಯರ್ ಚಂದ್ರು, ಸೇರಿದಂತೆ ಮತ್ತಿತರರು ಹಾಜರಿದ್ದರು.

ಗ್ರಾಮಸ್ಥರ ಸಮಸ್ಯೆಗೆ ಧ್ವನಿಯಾಗಿ ಕೆಲಸ ಮಾಡಿ, ಗ್ರಾಪಂ ಸಿಬ್ಬಂದಿಗೆ ಇಒ ಚಂದ್ರಶೇಖರ ಕಂದಕೂರ ಸೂಚನೆ

# ಸೂಡಿ ಗ್ರಾಪಂ ಸಿಬ್ಬಂದಿಗಳ ಸಭೆಯಲ್ಲಿ ಇಒ ಚಂದ್ರಶೇಖರ ಕಂದಕೂರ ಎಚ್ಚರಿಕೆ



**ಗಜೇಂದ್ರಗಡ:(ಸೂಡಿ)** ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಮೂಲಭೂತ ಸೌಲಭ್ಯಗಳ ಕುರಿತು ಸಾರ್ವಜನಿಕರು ನೀಡುವ ಯಾವುದೇ ದೂರಿಗೆ ಗ್ರಾಪಂ ಸಿಬ್ಬಂದಿ ವರ್ಗ ತಕ್ಷಣ ಸ್ಪಂದಿಸಬೇಕು ಎಂದು ಗಜೇಂದ್ರಗಡ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ, ಕಂದಕೂರು ಗ್ರಾಪಂ ಸಿಬ್ಬಂದಿಗಳಿಗೆ ಸೂಚಿಸಿದರು.

ತಾಲೂಕಿನ ಸೂಡಿ ಗ್ರಾಪಂ ಕಚೇರಿಯಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ಜೊತೆ ನಡೆಸಿದ ಸಭೆಯಲ್ಲಿ ಸಾರ್ವಜನಿಕ ಸ್ನೇಹಿಯಾಗಿ ಸಿಬ್ಬಂದಿಗಳು ಕೆಲಸ ಮಾಡಬೇಕು ಎಂದು ತಾಕೀತು ಮಾಡಿದರು.

ಸೂಡಿ ಮತ್ತು ದ್ಯಾಮಹುಣಸಿ ಗ್ರಾಮಗಳಲ್ಲಿ ಗ್ರಾಮಸ್ಥರಿಗೆ ಸರಿಯಾಗಿ ಕುಡಿಯುವ ನೀರು ಪೂರೈಕೆಯಾಗಬೇಕು. ಮಲಪ್ರಭಾ ನೀರು ಬಿಡುಗಡೆ ಸಂದರ್ಭದಲ್ಲಿ ಗ್ರಾಮಸ್ಥರಿಗೆ ಸರಿಯಾದ ಮಾಹಿತಿ ನೀಡಬೇಕು. ಕುಡಿಯುವ ನೀರು ಎಲ್ಲೂ ಪೋಲಾಗದಂತೆ ನಿಗಾವಹಿಸಿ ಜನರಿಗೆ ಶುದ್ಧ ಕುಡಿಯುವ ನೀರನ್ನು ಗ್ರಾಪಂ ಸಿಬ್ಬಂದಿ ಒದಗಿಸಬೇಕು. ಸರಿಯಾಗಿ ಕುಡಿಯುವ ನೀರು ಬಿಡದೇ ಸಾರ್ವಜನಿಕರಿಗೆ ಸ್ಪಂದಿಸದೇ ಇದ್ದರೆ ವಾಟರ್ ಮೆನ್ ಸಂಗಯ್ಯ ಅವರನ್ನು ಕೆಲಸದಿಂದ ತಗೆದುಹಾಕಿ ಅಂತ ಪಿಡಿಒ ಅವರಿಗೆ ಸೂಚಿಸಿದರು.

ಸಭೆಯಲ್ಲಿದ್ದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ ರೋಣ ಮತ್ತು ಗಜೇಂದ್ರಗಡದ ಶಾಖಾಧಿಕಾರಿಗಳಾದ ಮಹದೇವಪ್ಪ ಅವರಿಗೆ ಸೂಡಿ ಗ್ರಾಮಕ್ಕೆ ಸರಬರಾಜಾಗುವ ಕುಡಿಯುವ ನೀರನ್ನು ವಿಳಂಬ ಮಾಡದೇ ಬಿಡಬೇಕು ಅಂತ ಸೂಚಿಸಿದರು.ಗ್ರಾಪಂ ವ್ಯಾಪ್ತಿಯಲ್ಲಿ ರಾತ್ರಿ ವೇಳೆ ಬೀದಿ ದೀಪ ಬೆಳಗುವಂತಿರಬೇಕು. ಬೀದಿ ದೀಪದ ಕಂಬಗಳಲ್ಲಿ ಸಮರ್ಪಕ ವಿದ್ಯುತ್ ಸಂಪರ್ಕ, ವಿದ್ಯುತ್ ಬಲ್ಪಗಳ ಅಳವಡಿಕೆಗೆ ಕ್ರಮವಹಿಸಿಬೇಕೆಂದರು.

ಗ್ರಾಪಂ ವ್ಯಾಪ್ತಿಯಲ್ಲಿ ಎಲ್ಲೆಂದರಲ್ಲಿ ಕಸ ಬೀಸಾಡದಂತೆ ಜಾಗೃತಿವಹಿಸಬೇಕು. ಕಸ ವಿಲೇವಾರಿ ಕಾರ್ಯ ಪ್ರತಿನಿತ್ಯ ನಡೆಯಬೇಕು. ಅನಧಿಕೃತವಾಗಿ ಗೈರಾಗಿ ಕಸ ವಿಲೇವಾರಿ ಮಾಡದಿದ್ದರೆ ಅಂತಹ ಸಿಬ್ಬಂದಿಗಳ ವಿರುದ್ಧ ಪಿಡಿಒ ಅವರು ಕ್ರಮವಹಿಸಬೇಕು. ಇಲ್ಲವೇ ಪಿಡಿಒ ಅವರ ವಿರುದ್ಧ ನಾನು ಕ್ರಮವಹಿಸುವುದಾಗಿ ಎಚ್ಚರಿಸಿದರು.

ಸಭೆಯಲ್ಲಿ ಸೂಡಿ ಗ್ರಾಪಂ ಪಿಡಿಒ ಬಸವರಾಜ ವಡ್ಡರ, ತೆರಿಗೆ ಸಂಗ್ರಹಕಾರ ದುರ್ಗಪ್ಪ, ಪಂಚಾಯತ ಕಾರ್ಯದರ್ಶಿ ಮುಕ್ತಾಬಾಯಿ ಜಾದವ್, ವಾಟರ್ ಮ್ಯಾನ್ ಸಂಗಯ್ಯ ಮತ್ತು ಗ್ರಾಪಂ ಸಿಬ್ಬಂದಿ ವರ್ಗ ಹಾಜರಿದ್ದರು.

ಸ್ವಯಂ ಪ್ರೇರಿತ ರಕ್ತದಾನ ಶಿಬಿರ

# ರಕ್ತದಾನ ಶ್ರೇಷ್ಠದಾನ, ಜನರ ಬಾಳಿಗೆ ಆಶಾಕಿರಣವಾಗಿ



**ದಾವಣಗೆರೆ :** ರಕ್ತದಾನ ಶ್ರೇಷ್ಠದಾನ. ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡುವ ಮೂಲಕ ಸಂಕಷ್ಟದಲ್ಲಿರುವ ಜನರ ಬಾಳಿಗೆ ಆಶಾಕಿರಣವಾಗಿ ಇತರರಿಗೆ ಮಾದರಿಯಾಗಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಷಣ್ಮುಖಪ್ಪ ಹೇಳಿದರು.

ಮಂಗಳವಾರ (ಅ.14) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಆರೋಗ್ಯ ಮತ್ತು ಇಲಾಖೆ, ರಕ್ತ ಕೇಂದ್ರ, ಸಿ.ಜಿ ಆಸ್ಪತ್ರೆ ಮತ್ತು ಜಿಲ್ಲೆಯ ವಿವಿಧ ರಕ್ತ ಕೇಂದ್ರಗಳು, ಎನ್.ಎಸ್.ಎಸ್, ಎನ್.ಸಿ.ಸಿ. ಮತ್ತು ಆರ್. ಆರ್.ಸಿ. ಕಾಲೇಜು ಸಹಯೋಗದೊಂದಿಗೆ ನಗರದ ಬಿ.ಇ.ಎ ಶಿಕ್ಷಣ ಮಹಾವಿದ್ಯಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದ್ದು, ಎಲ್ಲಾ ಬ್ಲಡ್ ಬ್ಯಾಂಕ್ ಗಳು ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ರಕ್ತದ ಶಿಬಿರ ಹಾಗೂ ರಕ್ತದಾನದ ಕುರಿತು ಜಾಗೃತಿ ಮೂಡಿಸಬೇಕು. ಹಿಮೋಗ್ಲೋಬಿನ್ ಪ್ರಮಾಣ 12 ಗ್ರಾಂ ಗಿಂತ ಹೆಚ್ಚಿರುವವರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬಹುದು ಎಂದರು.

ಇತ್ತೀಚಿನ ದಿನಗಳಲ್ಲಿ ಅಪಘಾತ ಹಾಗೂ ಮಹಿಳೆಯರ ಹೆರಿಗೆ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿರುವುದರಿಂದ ಜನರು ವರ್ಷಕ್ಕೆ ಒಮ್ಮೆಯಾದರೂ ರಕ್ತದಾನ ಮಾಡಿ ಜೀವ ಉಳಿಸುವಲ್ಲಿ ಸಹಕಾರಿಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಸ್ವಯಂ ಪ್ರೇರಿತರಾಗಿ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿದ ರಕ್ತದಾನಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಜಾಗೃತಿ ಜಾಥಾ: ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆಯ ಅಂಗವಾಗಿ ರಕ್ತದಾನ ಜಾಗೃತಿ ಜಾಥಕ್ಕೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾದವ್ ವಿಠ್ಠಲ್ ರಾವ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ರಕ್ತ ನೀಡಿ ಭರವಸೆ ನೀಡಿ, ಜೊತೆಯಾಗಿ ನಾವು ಜೀವ ಉಳಿಸೋಣ ಎಂಬ ಘೋಷ ವಾಕ್ಯದೊಂದಿಗೆ ಜಾಥಾವು ಬಿ.ಇ.ಎ ಮಹಾವಿದ್ಯಾಲಯ ಶಾಲೆಯಿಂದ ಸಾಗಿ ರಿಂಗ್ ರೋಡ್, ಅಮೃತ ವಿದ್ಯಾಲಯ ಶಾಲೆ ಮೂಲಕ ಬಿ.ಇ.ಎ ಶಾಲೆಗೆ ಬಂದು ಸೇರಿತು.

ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕ ಡಾ. ನಾಗೇಂದ್ರಪ್ಪ ಎಂ ಬಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಪಿ.ಡಿ ಮುರುಳೀಧರ್, ಬಿ.ಇ.ಎ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರರಾದ ಡಾ.ಎ.ಜೆ ನೀತಾ, ಸಹಾಯಕ ಪ್ರಾಧ್ಯಾಪಕರಾದ ಮುರುಗೇಶ್.ಕೆಐಸಿಟಿಸಿ ಕೇಂದ್ರದ ಆಪ್ತ ಸಮಾಲೋಚಕರಾದ ಬಿ.ಡಿ ಮಹೇಂದ್ರಪ್ಪ , ಡಾ. ಬಾರ್ಕಿ, ಉಪಸ್ಥಿತರಿದ್ದರು.

## ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ: ಗುತ್ತಿಗೆ ಆಧಾರದಡಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ವಿವಿಧ ತಾತ್ಕಾಲಿಕ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಉಪ ಕಾನೂನು ನೆರವು ಅಭಿರಕ್ಷಕರ ಹುದ್ದೆ 01 ಮತ್ತು ಕಚೇರಿ ಸಹಾಯಕ ಹುದ್ದೆ 01 ಇವುಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು.

ಮಾಹೆಯಾನ ಉಪ ಕಾನೂನು ನೆರವು ಅಭಿರಕ್ಷಕರ ಮಾಸಿಕ ವೇತನ ರೂ.45 ಸಾವಿರ ಮತ್ತು ಕಚೇರಿ ಸಹಾಯಕರ ವೇತನ ರೂ.19,695 ಸಂಚಿತ ಸಂಭಾವನೆ ನೀಡಲಾಗುವುದು.

ನೇಮಕಾತಿಗಳು ತಾತ್ಕಾಲಿಕವಾಗಿದ್ದು, ಪ್ರಾಧಿಕಾರವು ನೇಮಕಾತಿಯನ್ನು ಯಾವುದೇ ನೋಟೀಸನ್ನು ನೀಡದೇ ರದ್ದುಗೊಳಿಸುವ ಅಧಿಕಾರ ಹೊಂದಿರುತ್ತದೆ.

ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಕಚೇರಿಗೆ ಅರ್ಜಿ ಸಲ್ಲಿಸಬೇಕು ಹಾಗೂ ಇತ್ತೀಚಿನ 3 ಪಾಸ್ ಪೋಟೋ ಲಗತ್ತಿಸಬೇಕು. ಅರ್ಜಿ ಸಲ್ಲಿಸಲು ಅಕ್ಟೋಬರ್ 25 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ತಾಳೂರು ರಸ್ತೆಯ ನೂತನ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಮೂರನೇ ಮಹಡಿಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಚಿತ್ರದುರ್ಗ:** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ದೆಹಲಿ ಪೊಲೀಸ್ ಎಕ್ಸಾಮಿನೇಷನ್-2025 ಮೂಲಕ ಹೆಡ್ ಕಾನ್ಸಟೇಬಲ್ (ಅಸಿಸ್ಟೆಂಟ್ ವೈರ್‌ಲೆಸ್ ಆಪರೇಟರ್) (ಟೆಲಿ ಪ್ರಿಂಟರ್ ಆಪರೇಟರ್) ಕಾನ್ಸಟೇಬಲ್ (ಎಕ್ಸಿಟಿವ್)(ಡ್ರೈವರ್) ಹುದ್ದೆಗಳ ನೇಮಕಾತಿಗೆ ಕಂಪ್ಯೂಟರ್ ಆಧಾರಿತ ಪರೀಕ್ಷೆ ನಡೆಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಅಭ್ಯರ್ಥಿಗಳು 12ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಹುದ್ದೆಗಳಿಗೆ ಅನುಗುಣವಾಗಿ ಪಿಯುಸಿಯಲ್ಲಿ ವಿಜ್ಞಾನ ಹಾಗೂ ಗಣಿತ ಅಭ್ಯಾಸ ಮಾಡಿರಬೇಕು. ಡ್ರೈವಿಂಗ್ ಲೈಸೆನ್ಸ್ ಹೊಂದಿರಬೇಕು.18 ರಿಂದ 25 ವರ್ಷಗಳ ಒಳಗಿರಬೇಕು.

### ಮಾನ್ಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ (ಕಿ.ವಿ)ಮತ್ತು ಜೆ. ಎಂ ಎಫ್ ಸಿ ನ್ಯಾಯಾಲಯ ಜಗಳೂರು.

ಸಿ.ಆರ್.ಮಿಸ್ ನಂ: 830/2025

**ಅರ್ಜಿದಾರರು:** 1) ಶ್ರೀಮತಿ ಸಣ್ಣವೀರಮ್ಮ ಕೋಂ ಲೇಟ್ ಮುತ್ತಪ್ಪ ತಂದೆ ಲೇಟ್ ಚಿಕ್ಕಪ್ಪ ವಯಸ್ಸು 63 ವರ್ಷ ಕೆಲಸ ಗೃಹಿಣಿ ವಾಸ:ತೋರಣಗಟ್ಟೆ ಗ್ರಾಮ ಜಗಳೂರು ತಾಲ್ಲೂಕು 2) ಶ್ರೀಮತಿ ಚಿಕ್ಕಮ್ಮ ಕೋಂ ಲೇಟ್ ಚಿಕ್ಕಪ್ಪ ತಂದೆ ಲೇಟ್ ಚಿಕ್ಕಪ್ಪ ವಯಸ್ಸು 65 ವರ್ಷ, ಕೆಲಸ ವ್ಯವಸಾಯ ವಾಸ ಇಸಾಮುದ್ರ ಗೊಲ್ಲರಹಟ್ಟಿ, ಚಿತ್ರದುರ್ಗ ತಾಲ್ಲೂಕು ಚಿತ್ರದುರ್ಗ ಜಿಲ್ಲೆ

**ವಿರುದ್ಧ**

**ಎದುರುದಾರರು :-** 1) ತಹಶೀಲ್ದಾರರು, ತಾಲ್ಲೂಕು ಕಛೇರಿ, ಜಗಳೂರು, ದಾವಣಗೆರೆ ಜಿಲ್ಲೆ.2) ತಿಪ್ಪಮ್ಮ ಕೋಂ ಲೇಟ್ ದಾಸಪ್ಪ ವಯಸ್ಸು ಸುಮಾರು 753) ಚಿಕ್ಕಪ್ಪ @ ಚಿಕ್ಕಣ್ಣ ಬಿನ್ ಲೇಟ್ ದಾಸಪ್ಪ ವಯಸ್ಸು ಸುಮಾರು 55 ವರ್ಷಎದುರುದಾರರಾದ 1 ಮತ್ತು 2ರವರ ವಾಸ ತೋರಣಗಟ್ಟೆ ಗ್ರಾಮ ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರಾದ 1 ಮತ್ತು 2ನೇ ಅರ್ಜಿದಾರರಿಗೆ ತಾಯಿಯಾಗಬೇಕು. 2ನೇ ಎದುರುದಾರರಿಗೆ ಅಕ್ಕನಾಗಬೇಕು(ಗಂಡನ ಅಣ್ಣನ ಹೆಂಡತಿ), 3ನೇ ಎದುರುದಾರರಿಗೆ ದೊಡ್ಡಮ್ಮನಾಗಬೇಕು. ತಿಪ್ಪಮ್ಮ ಕೋಂ ಲೇಟ್ ಚಿಕ್ಕಪ್ಪ ಇವರು ದಿನಾಂಕ:15.12:1992ರಂದು ಜಗಳೂರು ತಾಲ್ಲೂಕು, ಕಸಬಾ ಹೋಬಳಿ, ತೋರಣಗಟ್ಟೆ ಗ್ರಾಮದ ಅರ್ಜಿದಾರರ ಮತ್ತು 2 ಮತ್ತು 3ನೇ ಎದುರುದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:- 18-11 -2025ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:-14-10-2025ರಂದು ನೀಡಲಾಗಿದೆ.

**ನ್ಯಾಯಾಲಯದ ಅಪ್ಪಣೆಯ ಮೇರೆಗೆ**

**ಅರ್ಜಿದಾರರ ಪರ ವಕೀಲರು**
( ಕೆ.ಸಿ.ಶಿವಮೂರ್ತಿ ವಕೀಲರು)

**ಶಿರಸ್ತೇದಾರ್**
ಸಿವಿಲ್ ಜಡ್ಜ್ ಹಾಗೂ ಜೆ. ಎಂ. ಎಫ್. ಸಿ ನ್ಯಾಯಾಲಯ ಜಗಳೂರು.

# "ವಿಕಸಿತ ಕೃಷಿ ಸಂಕಲ್ಪ ಅಭಿಯಾನದ" ಕುರಿತು ಒಂದು ದಿನದ ಸಂವಾದ ಕಾರ್ಯಕ್ರಮ



**ಗದಗ:** ಭಾರತ ಸರಕಾರದ ಜಲ ಶಕ್ತಿ ಸಚಿವಾಲಯದ ಅಡಿಯಲ್ಲಿನ ಕೇಂದ್ರೀಯ ಅಂತರ್ಜಲ ಮಂಡಳಿ ಹಾಗೂ ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಇವರ ಸಂಯುಕ್ತಾಶ್ರಯದಲ್ಲಿ ದಿನಾಂಕ 14-10-2025 ರಂದು "ವಿಕಸಿತ ಕೃಷಿ ಸಂಕಲ್ಪ ಅಭಿಯಾನದ" ಕುರಿತು ಒಂದು ದಿನದ ಸಾರ್ವಜನಿಕ ಸಂವಹನ ಕಾರ್ಯಕ್ರಮವನ್ನು ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ಹಮ್ಮಿಕೊಳ್ಳಲಾಯಿತು.

ಈ ಸಂವಾದ ಕಾರ್ಯಕ್ರಮವನ್ನು ಶ್ರೀ ಜಿ.ಕೃಷ್ಣಮೂರ್ತಿ, ಪ್ರಾದೇಶಿಕ ನಿರ್ದೇಶಕರು, ಸಿ.ಜಿ.ಡಬ್ಲ್ಯೂ.ಬಿ. ನೈಋತ್ಯ ವಲಯ, ಬೆಂಗಳೂರು ಇವರು ಹಾಗೂ ಶ್ರೀ. ಎಚ್.ಪಿ.ಜಯಪ್ರಕಾಶ್, ಡಾ. ಜೆ. ದೇವಿತುರಾಜ್ ಮತ್ತು ಶ್ರೀಮತಿ ಸಂಗೀತಾ ಪಿ. ಭಟ್ಟಾಚಾರ್ಜಿ, ವಿಜ್ಞಾನಿಗಳು ಇವರ ಉಪಸ್ಥಿತಿಯಲ್ಲಿ ಉದ್ಘಾಟಿಸಿದರು.

ಡಾ. ಸುಧಾ ವಿ. ಮಂಕಣಿ, ಹಿರಿಯ ವಿಜ್ಞಾನಿಗಳು ಹಾಗೂ ಮುಖ್ಯಸ್ಥರು, ಐ.ಸಿ.ಎ.ಆರ್.-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಇವರು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು ಮತ್ತು ಗೌರವ ಅತಿಥಿಯಾಗಿ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಸಿವ್ಹಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ. ಲೋಕೇಶ್ ಭಾಗವಹಿಸಿದ್ದರು.

ಸೂಕ್ಷ್ಮ ನೀರಾವರಿ ಪದ್ಧತಿ ಮತ್ತು ಕಡಿಮೆ ನೀರು ಬಯಸುವ ಬೆಳೆಗಳ ಕೃಷಿಯಂತಹ ತಂತ್ರಜ್ಞಾನಗಳನ್ನು ಪರಿಚಯಿಸುವ ಮೂಲಕ ಕೃಷಿ ವಲಯದಲ್ಲಿ ಸುಸ್ಥಿರ ಅಂತರ್ಜಲ ನಿರ್ವಹಣಾ ಪದ್ಧತಿಗಳ ಬಗ್ಗೆ ರೈತರು ಮತ್ತು ರೈತ ಮಹಿಳೆಯರಲ್ಲಿ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು.

ಕೇಂದ್ರೀಯ ಅಂತರ್ಜಲ ಮಂಡಳಿ, ನೈಋತ್ಯ ವಲಯದ ನಿರ್ದೇಶಕರಾದ ಶ್ರೀ ಜಿ. ಕೃಷ್ಣಮೂರ್ತಿ, ಇವರು ಕೇಂದ್ರೀಯ ಅಂತರ್ಜಲ ಮಂಡಳಿ (ಅಉಘಃ) ಯ ದೃಷ್ಟಿಕೋನ ಮತ್ತು ಧ್ಯೇಯೋದ್ದೇಶಗಳ ಕುರಿತು ವಿವರಿಸಿದರು. ನಮ್ಮ ದೇಶದಲ್ಲಿ ನೀರಿನ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಜಲ ಸಂಪನ್ಮೂಲದ ಮೌಲ್ಯಮಾಪನ, ಸಂರಕ್ಷಣೆ ಮತ್ತು ಸುಸ್ಥಿರ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸುವ ಮೂಲಕ ವೈಜ್ಞಾನಿಕ ಅಂತರ್ಜಲ ನಿರ್ವಹಣೆಗೆ ಮಂಡಳಿಯ ಬದ್ಧತೆಯನ್ನು ಅವರು ಒತ್ತಿ ಹೇಳಿದರು. ರಾಷ್ಟ್ರೀಯ ಜಲಚರ ನಕ್ಷೆ ಮತ್ತು ನಿರ್ವಹಣಾ ಕಾರ್ಯಕ್ರಮದ (ಓಂಕಿಗಖಒ) ಅಡಿಯಲ್ಲಿನ ಉಪಕ್ರಮಗಳನ್ನು ವಿವರಿಸಿದರು ಡಾ. ಡಾ. ಸುಧಾ ವ್ಹಿ. ಮಂಕಣಿ ಇವರು ಗದಗ ಜಿಲ್ಲೆಯ ಅಂತರ್ಜಲ ನಿರ್ವಹಣೆ ಕ್ಷೇತ್ರದಲ್ಲಿ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದ ಪಾತ್ರವನ್ನು ವಿವರಿಸಿದರು. ಕೃಷಿ ವಿಜ್ಞಾನ ಕೇಂದ್ರವು ರೈತರ ತರಬೇತಿಗಳ ಮೂಲಕ ನೀರಿನ ಸದ್ಬಳಕೆ ಕುರಿತು ಜಾಗೃತಿ ಮೂಡಿಸುತ್ತಿದೆ ಎಂದರು ಹಾಗೂ ಈ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದ್ದಕ್ಕಾಗಿ ಕೇಂದ್ರ ಅಂತರ್ಜಲ ಮಂಡಳಿಯ ಪ್ರಯತ್ನಗಳನ್ನು ಅವರು ಶ್ಲಾಘಿಸಿದರು.

ಗದಗ ಜಿಲ್ಲೆಯಲ್ಲಿ ಓಂಕಿಗಖಒ ಅಧ್ಯಯನಗಳು, ಜಲ ಸಂಪನ್ಮೂಲಗಳ ಸಂರಕ್ಷಣೆ, ಕೃಷಿ ವಲಯದಲ್ಲಿ ಅಭಿವೃದ್ಧಿ ಮತ್ತು ನೀರಿನ ಸರಿಯಾದ ಬಳಕೆ ಮತ್ತು ಅಂತರ್ಜಲ ಮರುಪೂರಣಕ್ಕಾಗಿ ತಂತ್ರಜ್ಞಾನಗಳಂತಹ ವಿವಿಧ ವಿಷಯಗಳ ಕುರಿತು ಶ್ರೀ. ಎಚ್. ಪಿ. ಜಯಪ್ರಕಾಶ್, ಪ್ರೊ. ಲೋಕೇಶ್ ಮತ್ತು ಶ್ರೀ. ಎನ್.ಎಚ್. ಭಂಡಿ ಇವರು ತಾಂತ್ರಿಕ ಉಪನ್ಯಾಸಗಳನ್ನು ನೀಡಿದರು. ಒಟ್ಟು 131 ರೈತರು ಮತ್ತು ಕೃಷಿ ಸಖಿಯರು ಸಾರ್ವಜನಿಕ ಸಂವಹನ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ದೇವಿಯ ದರ್ಶನಕ್ಕೆ ನಿರೀಕ್ಷೆಗೂ ಮೀರಿ ಭಕ್ತಾಧಿಗಳ ಆಗಮನ

**ಹಾಸನ:** ಹಾಸನಾಂಬ ದೇವಿ ಸಾರ್ವಜನಿಕ ದರ್ಶನಕ್ಕೆ ನಿರೀಕ್ಷೆಗೂ ಮೀರಿ ಭಕ್ತಾಧಿಗಳು ಆಗಮಿಸುತ್ತಿದ್ದು, ಸರಾಸರಿ 2 ಗಂಟೆಯಲ್ಲಿ ದರ್ಶನವಾಗುತ್ತಿದ್ದ ಸಮಯವು 4 ಗಂಟೆಗೂ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದೆ. ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾಧಿಗಳು ಸರತಿ ಸಾಲಿನಲ್ಲಿ ಸಾಗಲು ಮಾನಸಿಕವಾಗಿ ಸಿದ್ಧರಾಗಿ ಬರುವಂತೆ ಕಂದಾಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದ್ದಾರೆ.

ಇಂದು ಉಸ್ತುವಾರಿ ಸಚಿವರು ಧರ್ಮದರ್ಶನ ಸಾಲಿನಲ್ಲಿ ಸಾಗುತ್ತಿದ್ದ ಜನರನ್ನು ಮಾತನಾಡಿಸಿ ವ್ಯವಸ್ಥೆಗಳನ್ನು ಪರಿಶೀಲಿಸಿದ ನಂತರ ಮಾಧ್ಯಮ ಮಿತ್ರರೊಂದಿಗೆ ಮಾತನಾಡಿದ ಅವರು ಇಂದು ಐದನೇ ದಿನ. ಶುಕ್ರವಾರ ಬೆಳಿಗ್ಗೆಯಿಂದ ಮಂಗಳವಾರ ಬೆಳಿಗ್ಗೆ 5 ಗಂಟೆಯವರೆಗೆ 6,40,700 ಭಕ್ತಾಧಿಗಳು ದೇವಿ ದರ್ಶನ ಪಡೆದಿದ್ದಾರೆ.

ಇಂದು ಬೆಳಿಗ್ಗೆಯಿಂದ ಇಲ್ಲಿಯವರೆಗೆ 1,22,600 ಭಕ್ತರು ದರ್ಶನ ಪಡೆದಿದ್ದಾರೆ ಐದುವರೆ ಕಿಲೋಮೀಟರ್ ಬ್ಯಾರಿಕೇಡ್ ವ್ಯವಸ್ಥೆ ಮಾಡಿಲಾಗಿತ್ತು ಮಾರನೇ ದಿನ ಒಂದು ಕಿಲೋಮೀಟರ್, ಮೂರನೇ ದಿನ ಮತ್ತೊಂದು ಕಿಲೋಮೀಟರ್ ಜಾಸ್ತಿ ಮಾಡಲಾಗಿದೆ ಒಟ್ಟು ಏಳುವರೆ ಕಿಲೋಮೀಟರ್ ಬ್ಯಾರಿಕೇಡ್ ವ್ಯವಸ್ಥೆ ಮಾಡಲಾಗಿದೆ ಎಂದರು.

ಸೋಮವಾರ ಒಂದು ಲಕ್ಷದಿಂದ ಒಂದು ಲಕ್ಷದ ಹತ್ತು ಸಾವಿರ ಜನರನ್ನು ನಿರೀಕ್ಷೆ ಮಾಡಲಾಗಿತ್ತು, ಆದರೆ 2,29,000 ಜನ ಬಂದು ದರ್ಶನ ಮಾಡಿದ್ದಾರೆ.

ನಾಳೆ ಬೆಳಿಗ್ಗೆ 5 ಗಂಟೆಯವರೆಗೆ ಒಂದುವರೆ ಲಕ್ಷ ಜನ ದರ್ಶನ ಮಾಡುವ ಸಾಧ್ಯತೆ ಇದೆ. ಹಿಂದಿನ ವರ್ಷಗಳಿಗೆ ಹೋಲಿಕೆ ಮಾಡಿದ್ರೆ ವಾಡಿಕೆಗಿಂತ ಹೆಚ್ಚು ಜನ ಬಂದಿದ್ದಾರೆ ಎಂದರು.

ಸ್ವಚ್ಛತೆ, ಕುಡಿಯುವ ನೀರು, ಪ್ರಸಾದ, ಮಜ್ಜಿಗೆ ವ್ಯವಸ್ಥೆ ಜಿಲ್ಲಾಡಳಿತದಿಂದ ಮಾಡಲಾಗಿದೆ ಎಂದು ತಿಳಿಸಿದರಲ್ಲದೆ, ಜಿಲ್ಲಾಡಳಿತ ಹಗಲು-ರಾತ್ರಿ ಕೆಲಸ ಮಾಡುತ್ತಿದ್ದು, ಅರ್ಚಕರನ್ನು ಮನವಿ ಮಾಡಿ ನಿನ್ನೆ ರಾತ್ರಿ 3 ರಿಂದ ಮುಂಜಾನೆ 5 ಗಂಟೆಯವರೆಗೆ ಗರ್ಭಗುಡಿ ಬಾಗಿಲು ಮುಚ್ಚದೆ ಸಾರ್ವಜನಿಕರಿಗೆ ದರ್ಶನ ಕಲ್ಪಿಸಲಾಗಿದೆ ಎಂದು ಅವರು ಹೇಳಿದರು.

ಜನ ತುಂಬಾ ಸಂತೋಷದಿಂದ ದೇವಿಯ ದರ್ಶನ ಪಡೆಯುತ್ತಿದ್ದಾರೆ. ಸ್ಥಳೀಯರು ನಮ್ಮ ದೇವಿ ನಮಗೆ ವಾಪಸ್ಸು ನೀಡಿದ್ದೀರಿ ಎಂದು ಸಂತಸ ವ್ಯಕ್ತಪಡಿಸುತ್ತಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು,

ರೈತರು, ದುಡಿಯುವ ವರ್ಗದವರು ದೇವಿ ದರ್ಶನಕ್ಕೆ ಬರುತ್ತಿದ್ದಾರೆ ಎಂದು ತಿಳಿಸಿದರು.

ನಿನ್ನೆ ಮತ್ತು ಇವತ್ತು ಬಂದಿರುವ ಜನರನ್ನು ನೋಡಿದರೆ ಇನ್ನು ಮುಂದೆ ಶೇ.50 ಕ್ಕಿಂತ ಅಧಿಕ ಜನ ಬರುವ ಸಾಧ್ಯತೆ ಇದೆ. ಇನ್ನೂ ಎಂಟು ದಿನ ದರ್ಶನಕ್ಕೆ ಬಾಕಿ ಇದೆ ನಾವು ದರ್ಶನ ಕಲ್ಪಿಸಲು ಸಜ್ಜಾಗಿದ್ದೇವೆ ಎಂದರು.

ಇಂದು ಬೆಳಿಗ್ಗೆ 5 ಗಂಟೆಯವರೆಗೆ 1000 ರೂ ಹಾಗೂ 300 ರೂ ವಿಶೇಷ ದರ್ಶನದ ಟಿಕೆಟ್, ಲಾಡು ಪ್ರಸಾದ ಮಾರಾಟದಿಂದ 4,21,73,760 ರೂಪಾಯಿ ಆದಾಯ ಬಂದಿದೆ. ಕಳೆದ ವರ್ಷಕ್ಕಿಂತ ಒಂದು ಕೋಟಿ ಹೆಚ್ಚು ಆದಾಯ ಬಂದಿದೆ ಎಂದು ತಿಳಿಸಿದರು.

ಇಂದು ಮಧ್ಯಾಹ್ನಕ್ಕೆ 1000 ರೂಪಾಯಿಯ 3,600 ಟಿಕೆಟ್ ಗಳು ಮಾರಾಟ ಆಗಿದೆ, 300 ರೂಪಾಯಿಯ 6000 ಟಿಕೆಟ್‌ಗಳು ಮಾರಾಟ ಆಗಿದೆ.

ಆದಾಯಕ್ಕಿಂತ ಜನರಿಗೆ ಶೀಘ್ರ ದರ್ಶನ ಮಾಡಿಸುವುದು ನಮಗೆ ಮುಖ್ಯವಾಗಿದೆ ಎಂದರು.

ಈ ವೇಳೆಯಲ್ಲಿ ಸಂಸದರಾದ ಶ್ರೇಯಸ್ ಎಂ.ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಮ್ಮದ್ ಸುಜಿತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ. ಆರ್ ಪೂರ್ಣಿಮಾ, ಉಪವಿಭಾಗಾಧಿಕಾರಿ ಹಾಗೂ ಹಾಸನಾಂಬ ದೇವಾಲಯದ ಆಡಳಿತಾಧಿಕಾರಿ ಮಾರುತಿ ಉಪಸ್ಥಿತರಿದ್ದರು.

# ಬಾಲ್ಯವಿವಾಹ ನಿಯಂತ್ರಣಕ್ಕೆ ಸಮುದಾಯದ ಮುಖಂಡರು ಗಮನಹರಿಸಿ : ಗುರುದತ್ತ ಹೆಗಡೆ

**ಶಿವಮೊಗ್ಗ :** ಜಿಲ್ಲೆಯಲ್ಲಿ ಗುರುತಿಸಲಾಗಿರುವ ಬಾಲ್ಯವಿವಾಹ ಮತ್ತು ಪೋಕ್ಸೊ ಪ್ರಕರಣಗಳಲ್ಲಿ ಶೇ.60ರಷ್ಟು ಪರಿಶಿಷ್ಟ ಜಾತಿ ಪಂಗಡದ ಅಭ್ಯರ್ಥಿಗಳೇ ಇರುವುದು ಅತ್ಯಂತ ನೋವಿನ ಸಂಗತಿಯಾಗಿದ್ದು, ಅದರ ನಿಯಂತ್ರಣಲ್ಲಿ ಸಮುದಾಯದ ಮುಖಂಡರು ಮುಂಜಾಗ್ರತಾ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರಿಗೆ ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಹಿಂದಿನ ವರ್ಷಗಳಲ್ಲಿ ನಡೆದ ಪ್ರಕರಣಗಳನ್ನು ಗಮನಿಸಿದಾಗಿ ಇತ್ತೀಚಿನ ವರ್ಷಗಳಲ್ಲಿ ಅವುಗಳ ನಿಯಂತ್ರಣಕ್ಕೆ ಹೆಚ್ಚಿನ ಗಮನವಹಿಸಿದ್ದರಿಂದಾಗಿ ಬಾಲ್ಯವಿವಾಹ ಮತ್ತು ಪೋಕ್ಸೋ ಪ್ರಕರಣಗಳ ಸಂಖ್ಯೆಯಲ್ಲಿ ಗಣನೀಯ ಕುಸಿತವಾಗಿದೆ ಎಂದರು.

ಹಲವು ವರ್ಷಗಳಿಂದ ಇತ್ಯರ್ಥವಾಗದ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ವಿಶೇಷ ಗಮನಹರಿಸಲಾಗಿದೆ. ಅಲ್ಲದೇ ಪರಿಶೀಲನೆಯ ನಂತರ ಋಜುವಾತಾದ 11 ಪ್ರಕರಣಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿರುವುದಾಗಿ ತಿಳಿಸಿದ ಅವರು, ಪ್ರಸಕ್ತ ಸಾಲಿನಲ್ಲಿ ಸುಳ್ಳು ಜಾತಿ ಪ್ರಕರಣದಡಿ ಸಲ್ಲಿಕೆಯಾದ ಮೂರು ಪ್ರಕರಣಗಳ ಕುರಿತು ಹೆಚ್ಚಿನ ಮಾಹಿತಿ ಹಾಗೂ ನೈಜತೆಯ ಪರಿಶೀಲನೆಗಾಗಿ ಡಿ.ಸಿ.ಆರ್.ಇ. ನಾಗರೀಕ ಹಕ್ಕುಗಳ ಜಾರಿ ನಿರ್ದೇಶನಾಲಯಕ್ಕೆ ಸಲ್ಲಿಸಲಾಗಿದ್ದು, ವರದಿ ಬಂದ ನಂತರ ಕ್ರಮ ಅಗತ್ಯ ಕ್ರಮ ಕೈಗೊಳ್ಳಳಾಗುವುದು ಎಂದವರು ನುಡಿದರು.



ಈಗಾಗಲೇ ಜಿಲ್ಲೆಯಲ್ಲಿ ದಾಖಲಾಗಿರುವ ದೌರ್ಜನ್ಯ ಪ್ರಕರಣಗಳ ಕುರಿತು ಪರಿಹಾರ ಧನ 138.00ಲಕ್ಷ ರೂ.ಗಳ ಮಂಜೂರಾತಿಗಾಗಿ ಸರ್ಕಾರಕ್ಕೆ ಬೇಡಿಕೆ ಸಲ್ಲಿಸಲಾಗಿದ್ದು, ಅನುದಾನ ಬಂದ ನಂತರ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು. 2024ನೇ ಸಾಲಿನಲ್ಲಿ ದಾಖಲಾದ ಒಟ್ಟು 114ಪ್ರಕರಣಗಳ ಪೈಕಿ 90ಪ್ರಕರಣಗಳ ಕುರಿತು ಚಾರ್ಜ್‌ಶೀಟ್‌ಸಲ್ಲಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ದಾಖಲಾದ 98ಪ್ರಕರಣಗಳ ಪೈಕಿ 64ಪ್ರಕರಣಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ ಎಂದರು.

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿನ ಮುಜರಾಯಿ ದೇವಸ್ತಾನಗಳಲ್ಲಿ ಎಲ್ಲಾ ಜಾತಿ-ಜನಾಂಗದವರಿಗೆ ಪ್ರವೇಶಕ್ಕೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಇಲ್ಲಿ ಯಾವುದೇ ಜಾತಿ ತಾರತಮ್ಯ ಆಗದಂತೆ ಕ್ರಮ ವಹಿಸಲಾಗಿದೆ ಎಂದು ಪ್ರಚಾರ ಫಲಕ ಅಳವಡಿಸಲು ಸೂಚಿಸಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಹೇಳಿದರು.

ಶಿ ವ ’ ವ ’ ಊ ಗ ’ ಬಸ್‌ಸ್ಟ್ಯಾಂಡ್‌ಹಿಂಭಾಗದಲ್ಲಿನ ಬುದ್ಧನಗರದ ಅತ್ಯಲ್ಪ ಪ್ರದೇಶದಲ್ಲಿ ಹಲವು ದಶಕಗಳಿಂದ ಕನಿಷ್ಟ ಜೀವನ ನಡೆಸುತ್ತಿರುವ ನಿರ್ವಸತಿಗರಿಗೆ ವಸತಿ ಸೌಲಭ್ಯ ಕಲ್ಪಿಸಿ. ಅಂಬೇಡ್ಕರ್‌ನಗರದಲ್ಲಿನ ನಿವಾಸಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಿ. ಮಂಜುನಾಥ್, ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರು.

ಅಪ್ರಾಪ್ತ ವಿವಾಹಿತರನ್ನು ಗುರುತಿಸಿ, 2ಮಕ್ಕಳು ಜನಿಸಿದ ನಂತರ ಮದುವೆಯ ವರನನ್ನು ಕಾನೂನು ಸುಪರ್ದಿಗೆ ವಹಿಸಿಕೊಡುವುದು ಸರಿಯಲ್ಲ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ, ಪೊಲೀಸ್‌ಇಲಾಖೆಯ ಅಧಿಕಾರಿಗಳು ಸಕಾಲದಲ್ಲಿ ತನಿಖೆ ನಡೆಸಿ, ಮಾನವೀಯ ನೆಲೆಯಲ್ಲಿ ಕ್ರಮ ವಹಿಸಬೇಕು.

-ಬೂದಿಗೆರೆ ಬಸವರಾಜ

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ವಿದ್ಯಾರ್ಥಿಗಳನ್ನು ನಿಯೋಜಿಸಲು ಅದರಲ್ಲೂ ವಿಶೇಷವಾಗಿ ಪರಿಶಿಷ್ಟ ಜಾತಿ-ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಸೀಟು ಹಂಚಿಕೆ ಮಾಡುವಲ್ಲಿ ತಾರತಮ್ಯವಾಗುತ್ತಿರುವ ಬಗ್ಗೆ ಸಮಿತಿ ಸದಸ್ಯರು ಸಭೆಯ ಗಮನಸೆಳೆದಿದ್ದು, ಈ ವಿಷಯಕ್ಕೆ ಸಂಬಂಧಿಸಿದಂತೆ ಉಪವಿಭಾಗಾಧಿಕಾರಿಗಳು ಬಾಕಿ ಇರುವ ಅರ್ಜಿಗಳನ್ನು ಕೂಡಲೇ ವಿಲೇ ಮಾಡುವಂತೆ ಹಾಗೂ ವಿಸ್ತೃತ ವರದಿ ನೀಡುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಉಪವಿಭಾಗಾಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ರಕ್ಷಣಾಧಿಕಾರಿ ಎ.ಜಿ.ಕಾರಿಯಪ್ಪ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮಲ್ಲೇಶಪ್ಪ, ಸಮಿತಿ ಸದಸ್ಯರಾದ ರುದ್ರಪ್ಪ, ದಿನೇಶ್‌ಪಟೇಲ್, ಓಂಪ್ರಕಾಶ್, ನಾಗರಾಜ್, ಬೂದಿಗೆರೆ ಬಸವರಾಜ್, ಮಂಜುನಾಥ್, ಶಿವಬಸಪ್ಪ ಮತ್ತಿರರು ಉಪಸ್ಥಿತರಿದ್ದರು.

# ನಮ್ಮ ರಾಜ್ಯದಲ್ಲೆ ಮೊದಲು ತೃತೀಯ ಲಿಂಗಿಗಳಿಗೂ ಸಾಮಾಜಿಕ ಸಮೀಕ್ಷೆ

**ಹಾಸನ :** ದೇಶದ ಯಾವ ರಾಜ್ಯದಲ್ಲೂ ತೃತೀಯ ಲಿಂಗಿಗಳಿಗೆ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯನ್ನು ಮಾಡುವ ನಿರ್ಧಾರವನ್ನು ಮಾಡಿಲ್ಲ. ಆದರೆ ನಮ್ಮ ರಾಜ್ಯದಲ್ಲೆ ಮೊದಲ ಬಾರಿಗೆ ಈ ನಿರ್ಧಾರವನ್ನು ಜಾರಿಗೊಳಿಸಿದೆ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ ಪದ್ಮಾವತಿ ಅವರು ತಿಳಿಸಿದ್ದಾರೆ.

ಹಾಸನ ವೈದ್ಯಕೀಯ ವಿಜ್ಞಾನಗಳ ಆಸ್ಪತ್ರೆಯ ಕೊಠಡಿ ಸಂಖ್ಯೆ 115ನೇ ರಲ್ಲಿ ನಡೆಯುತ್ತಿದ್ದ ಲಿಂಗತ್ವ ಅಲ್ಪಸಂಖ್ಯಾತ ಸಮೀಕ್ಷೆಯ ಸ್ಥಳಕ್ಕೆ ಭೇಟಿ ಮಾಡಿ ತೃತೀಯ ಲಿಂಗಿಗಳನ್ನು ಮಾತನಾಡಿಸಿದ ಅವರು

ರಾಜ್ಯದಲ್ಲಿ ಎಷ್ಟು ಜನ ತೃತೀಯ ಲಿಂಗಿಗಳು ಇದ್ದಾರೆ ಎನ್ನುವ ಅಂಕಿ ಅಂಶಗಳು ಗೊತ್ತಾದರೆ. ನಿಮಗೆ ಒಂದಷ್ಟು ಸರ್ಕಾರದ ಅನುದಾನವನ್ನು ಬಿಡುಗಡೆ ಮಾಡಿ ಕೆಲಸಗಳನ್ನು ನೀಡಲು ಅನುಕೂಲವಾಗುತ್ತದೆ. ನಿಮ್ಮಲ್ಲಿ ಕೆಲವರು ಬಿಕ್ಷಾಟನೆ ಮಾಡುವುದನ್ನು ಸಹ ತಪ್ಪಿಸಬಹುದಲ್ಲದೆ, ಸ್ವಯಂ ಉದ್ಯೋಗಿಗಳಾಗಲು ಅನುಕೂಲವಾಗುತ್ತದೆ ಹಾಗಾಗಿ ಎಲ್ಲರೂ ಕಡ್ಡಾಯವಾಗಿ ಈ ಸಮೀಕ್ಷೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.



ಈ ಎಲ್ಲಾ ನೋವನ್ನು ಅನುಭವಿಸುವ ನಿಮ್ಮನ್ನು ನಮ್ಮ ಸರ್ಕಾರದಲ್ಲಿ ಗುರುತಿಸಬೇಕು. ಹಾಗೂ ನಿಮ್ಮಲ್ಲಿ ಕೆಲವರು ಮಾತ್ರ ವಿದ್ಯಾವಂತರು ಮತ್ತೆ ಕೆಲವರು ಭಿಕ್ಷಾಟನೆ ಮಾಡುವವರು ಇದ್ದಾರೆ ಹಾಗಾಗಿ ಎಲ್ಲಾ ರೀತಿಯಲ್ಲೂ ನಿಮಗೆ ಅನುಕೂಲವಾಗಬೇಕು ಎಂಬುದಕ್ಕೆ ಸರ್ಕಾರ ಈ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು.ದಸರಾ ಇನ್ನಿತರ ಕಾರ್ಯಕ್ರಮಗಳಿರುವುದರಿಂದ ಅನೇಕರು ಬೆಳಗ್ಗೆಯಿಂದ ರಾತ್ರಿ ಮಧ್ಯರಾತ್ರಿವರೆಗೂ ಕೆಲಸ ಮಾಡುತ್ತಾರೆ. ಸಾಮಾಜಿಕವಾಗಿ ಶೈಕ್ಷಣಿಕವಾಗಿ ಎಲ್ಲಾ ರೀತಿಯ ಸೌಲಭ್ಯಗಳು ನಿಮಗೆ ದೊರಕಬೇಕು ನೀವು ಸ್ವಾವಲಂಬಿಗಳಾಗಬೇಕು ಎನ್ನುವ ದೃಷ್ಟಿಯಿಂದ ಸರ್ಕಾರ ಈ ಸಮೀಕ್ಷೆಯನ್ನು ಮಾಡುತ್ತಿದೆ. ನಿಮ್ಮ ಜೀವನಕ್ಕೆ ಆಧಾರವಾಗಿ ಸರ್ಕಾರ ಇಂದು ನಿಂತುಕೊಂಡಿದೆ. ಹಾಗಾಗಿ ಎಲ್ಲರೂ ಸಮೀಕ್ಷೆಯಲ್ಲಿ ಭಾಗವಹಿಸಿ ಎಂದರು.

ಹಾಸನ ಜಿಲ್ಲೆಯಲ್ಲಿ 400 ಜನರಲ್ಲಿ ಕೇವಲ ನೂರು ಜನರಷ್ಟೇ ಸಮೀಕ್ಷೆಯಾಗಿದೆ. ಇದು ಬಹಳ ಕಡಿಮೆಯಾಗಿದೆ. ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತರನ್ನು ಉಪಯೋಗಿಸಿಕೊಂಡು ಹೆಚ್ಚಿನ ಪ್ರಚಾರ ನೀಡಬೇಕು ಎಂದು ತಿಳಿಸಿದರು.

# ವೃತ್ತಿ ರಂಗಭೂಮಿ ಕಲಾವಿದರ ಸಂಘದಿಂದ 'ರಂಗ ತಿರುಗಾಟ' ಕಾರ್ಯಕ್ರಮ

**ದಾವಣಗೆರೆ:** ರಾಜ್ಯ ವೃತ್ತಿ ರಂಗಭೂಮಿ ಕಲಾವಿದರ ಸಂಘದ 29ನೇ ವಾರ್ಷಿಕೋತ್ಸವ ಪ್ರಯುಕ್ತ ನವಂಬರ್ ತಿಂಗಳ ಅಂತ್ಯದಲ್ಲಿ ಜಿಲ್ಲೆಯಲ್ಲಿ 'ರಂಗ ತಿರುಗಾಟ' ಎಂಬ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ನಿಕಟಪೂರ್ವ ಅಧ್ಯಕ್ಷ ಎ.ಭದ್ರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಂಗ ತಿರುಗಾಟದ ಮೂಲಕ ಸಂಘದ 29ನೇ ವಾರ್ಷಿಕೋತ್ಸವವನ್ನು ವಿನೂತನವಾಗಿ ಆಚರಿಸಲು ತೀರ್ಮಾನಿಸಲಾಗಿದೆ. ಜಿಲ್ಲೆಯ ಪ್ರತೀ ತಾಲ್ಲೂಕು ಕೇಂದ್ರಗಳಲ್ಲಿ ಒಂದು ನಾಟಕವನ್ನು ಪ್ರದರ್ಶಿಸುವ ಉದ್ದೇಶವಿದೆ. ಅಂತಿಮವಾಗಿ ದಾವಣಗೆರೆಯಲ್ಲಿ ಒಂದು ನಾಟಕ ಪ್ರದರ್ಶಿಸಿ, ವಾರ್ಷಿಕೋತ್ಸವದ ಸಮಾರೋಪ ಸಮಾರಂಭ ನಡೆಸಲಾಗುವುದು ಎಂದರು.

ಸಂಘದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದು, ಅಧ್ಯಕ್ಷರಾಗಿ ಮಹೇಶ್ವರಪ್ಪ ದೊಡ್ಡಮನಿ ಆಯ್ಕೆಯಾಗಿದ್ದಾರೆ. ಉಪಾಧ್ಯಕ್ಷರಾಗಿ ಜಿ.ನಾಗವೇಣಿ, ಕಾರ್ಯದರ್ಶಿಯಾಗಿ ಕೆ.ಎಸ್.ಕೊಟ್ರೇಶ, ಸಹ ಕಾರ್ಯದರ್ಶಿಯಾಗಿ ಎಸ್.ಎಂ.ಕೆಂಚಪ್ಪ, ನಿರ್ದೇಶಕರಾಗಿ ತಿಪ್ಪೇಶ್ ರಾವ್ ಚವ್ಹಾಣ್, ಆರ್. ಚಂದ್ರಶೇಖರ್, ಕೆ.ಸರೋಜಮ್ಮ ಅವರುಗಳನ್ನು ಸರ್ವ ಸದಸ್ಯರು ಸರ್ವಾನುಮತದಿಂದ ಆಯ್ಕೆ ಮಾಡಿದ್ದಾರೆ ಎಂದು ಸಂಘದ ನೂತನ ಗೌರವ ಮಾರ್ಗದರ್ಶಕರಾಗಿರುವ ಎ.ಭದ್ರಪ್ಪ ತಿಳಿಸಿದರು.

ಧಾರವಾಡ ರಂಗಾಯಣ ನಿರ್ದೇಶಕರು, ರಂಗಭೂಮಿ ಹಾಗೂ ಚಲನಚಿತ್ರ ನಟರಾದ ರಾಜು ತಾಳಿಕೋಟೆಯವರು ಹೃದಯಘಾತದಿಂದ ನಿಧನರಾಗಿರುವುದು ವಿಷಾಧನೀಯ. ಕುಟುಂಬ ವರ್ಗದವರಿಗೆ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ ಎಂದು ಅವರು ಇದೇ ವೇಳೆ ಸಂತಾಪ ಸೂಚಿಸಿದರು.

ಸಂಘದ ನೂತನ ಪದಾಧಿಕಾರಿಗಳಾದ ಮಹೇಶ್ವರಪ್ಪ ದೊಡ್ಡಮನಿ, ಜಿ.ನಾಗವೇಣಿ, ಕೆ.ಎಸ್.ಕೊಟ್ರೇಶ, ಎಸ್.ಎಂ.ಕೆಂಚಪ್ಪ, ತಿಪ್ಪೇಶ್ ರಾವ್ ಚವ್ಹಾಣ್, ಆರ್.ಚಂದ್ರಶೇಖರ್ ಸುದ್ದಿಗೋಷ್ಠಿಯಲ್ಲಿದ್ದರು.

## ನೇರ ಸಂದರ್ಶನ

**ಚಿಕ್ಕಮಗಳೂರು:** ನಗರದ ಖಾಸಗಿ ಕಂಪನಿಯಾದ ಅಪೋಲೋ ಫಾರ್ಮಸಿ ಮತ್ತು ಕೊಡಚಾದ್ರಿ ಚಿಟ್ಸ್ ಪ್ರೈ.ಲಿ.ನ ಶಾಖೆಯಲ್ಲಿ ಖಾಲಿ ಇರುವ ಹುದ್ದೆಗೆ ಅಕ್ಟೋಬರ್ 16 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ಏರ್ಪಡಿಸಲಾಗಿದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 30 ವರ್ಷ ವಯೋಮಿತಿಯ ಪುರುಷ ಅಭ್ಯರ್ಥಿಗಳು ಮಾತ್ರ ಸಂದರ್ಶನದಲ್ಲಿ ಭಾಗವಹಿಸಬಹುದು. ಉಚಿತ ಪ್ರವೇಶವಿದ್ದು ಅಭ್ಯರ್ಥಿಗಳು ಒಂದು ಸೆಟ್ ರೆಸ್ಯೂಮ್‌ನೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರವನ್ನು (08262-295538, 8123321670) ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಹಾಸನಾಂಬ ದೇವಿ ಜಾತ್ರಾ ಮಹೋತ್ಸವ : ಅ.19 ರಂದು ಶ್ವಾನ ಪ್ರದರ್ಶನ

**ಹಾಸನ :** ಶ್ರೀ ಹಾಸನಾಂಬ ದೇವಿ ದರ್ಶನ ಹಾಗೂ ಸಿದ್ದೇಶ್ವರ ಸ್ವಾಮಿ ದೇವರ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಹಾಸನ ವತಿಯಿಂದ ಅ.19 ರಂದು ಸರ್ಕಾರಿ ವಿಜ್ಞಾನ ಕಾಲೇಜು, ಸಾಲಗಾಮೆ ರಸ್ತೆ, ಹಾಸನ ಇಲ್ಲಿ "ಜಿಲ್ಲಾ ಮಟ್ಟದ ಶ್ವಾನ ಪ್ರದರ್ಶನ" ವನ್ನು ಆಯೋಜಿಸಲಾಗಿರುತ್ತದೆ. ಶ್ವಾನ ಪ್ರದರ್ಶನದಲ್ಲಿ ಎರಡು ತಿಂಗಳ ವಯಸ್ಸಿನ ಮೇಲ್ಪಟ್ಟ ಯಾವುದೇ ತಳಿಯ ಶ್ವಾನಗಳು ಭಾಗವಹಿಸಬಹುದಾಗಿದೆ.

ಶ್ವಾನ ಪ್ರದರ್ಶನದಲ್ಲಿ ಭಾಗವಹಿಸಲು ನೊಂದಣಿ ಕಡ್ಡಾಯವಾಗಿದ್ದು, ಮಾಲೀಕರು ಹತ್ತಿರದ ಪಶುಚಿಕಿತ್ಸಾಲಯ ಪಶು ಆಸ್ಪತ್ರೆಗಳಿಗೆ ಭೇಟಿ ನೀಡಿ ಇಲ್ಲವೇ ಡಾ॥ಕರುಣಾಕರ್ (ಮೊ:8970181196) /ಡಾ॥ಜನಾರ್ಧನ್ (ಮೊ:7259378441) / ಡಾ॥ದರ್ಶನ್ (ಮೊ: 8792794935) ರವರುಗಳನ್ನು ಸಂಪರ್ಕಿಸಿ ಮುಂಚಿತವಾಗಿ ನೊಂದಣಿ ಮಾಡಿಸಿಕೊಳ್ಳಲು ಕೋರಿದೆ.

ನೊಂದಣಿ ಉಚಿತವಾಗಿದ್ದು, ಅ.18 ರ ಸಂಜೆ 5 ಗಂಟೆ ಒಳಗೆ ನೊಂದಣಿ ಮಾಡಿಸಿಕೊಳ್ಳಲು ಕೋರಿದೆ. ಪ್ರದರ್ಶನ ನಡೆಯುವ ಸ್ಥಳದಲ್ಲಿ ನೊಂದಣಿಗೆ ಅವಕಾಶವಿರುವುದಿಲ್ಲ. ಹಾಸನ ಜಿಲ್ಲೆಯ ನಿವಾಸಿಗಳಿಗೆ ನೊಂದಣಿಯನ್ನು ಸೀಮಿತಗೊಳಿಸಿದೆ.

ಎಲ್ಲಾ ತಳಿಯ ಉತ್ತಮ ಶ್ವಾನಗಳಿಗೆ ಹಾಗೂ ಶ್ವಾನ ಮರಿಗಳಿಗೆ ಬಹುಮಾನಗಳನ್ನು ಸಹ ವಿತರಿಸಲಾಗುವುದು. ಶ್ವಾನಗಳ ಮಾಲೀಕರು ತಮ್ಮ ವಿವಿಧ ತಳಿಯ ಶ್ವಾನಗಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಶ್ವಾನಗಳನ್ನು ಪ್ರದರ್ಶಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## 21 ರಂದು ಪೊಲೀಸ್ ಹುತಾತ್ಮರ ದಿನಾಚರಣೆ

**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಪೊಲೀಸ್ ಹುತಾತ್ಮರ ದಿನಾಚರಣೆ ಕಾರ್ಯಕ್ರಮವನ್ನು ಅ.21ರ ಮಂಗಳವಾರ ಬೆಳಿಗ್ಗೆ 8 ಗಂಟೆಗೆ ಚನ್ನಪಟ್ಟಣದ ಜಿಲ್ಲಾ ಪೊಲೀಸ್ ಸಶಸ್ತ್ರ ಮೀಸಲು ಪಡೆ ಮೈದಾನದಲ್ಲಿ ಆಯೋಜಿಸಲಾಗಿದೆ.

# ಹಿರಿಯ ನಾಗರಿಕರ ಅನುಕೂಲಕ್ಕಾಗಿ 5 ಕೋಟಿ ರೂ.ಗಳ ಸುಸಜ್ಜಿತ ಕಟ್ಟಡ ನಿರ್ಮಾಣಕ್ಕೆ ಚಿಂತನೆ

**ರಾಮನಗರ:** ಹಿರಿಯ ನಾಗರಿಕರ ಅನುಕೂಲಕ್ಕಾಗಿ ಸುಮಾರು 5 ಕೋಟಿ ವೆಚ್ಚದ ಸುಸಜ್ಜಿತವಾದ ಕಟ್ಟಡ ನಿರ್ಮಾಣ ಮಾಡಲು ಚಿಂತಿಸಲಾಗಿದೆ ಎಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಹೇಳಿದರು.

ಅವರು ಅ.14ರ ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗ್ರಾಮೀಣ ಪುನರ್ವಸತಿ ಯೋಜನೆಯ ಕಾರ್ಯಕರ್ತರು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ನಿವೃತ್ತ ನೌಕರರ ಸಂಘಗಳು, ಕರ್ನಾಟಕ ನಿವೃತ್ತ ಪೊಲೀಸ್ ಅಧಿಕಾರಿಗಳ ಸಂಘ ಹಾಗೂ ಹಿರಿಯ ನಾಗರಿಕರ ಏಳಿಗೆಗಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿಶ್ರಾಂತ ಜೀವನ ಸಾಗಿಸುತ್ತಿರುವ ಹಿರಿಯ ಜೀವಿಗಳು ಇಳಿ ವಯಸ್ಸಿನಲ್ಲಿ ಸಂತೋಷದ ಜೀವನ ಸಾಗಿಸಬೇಕು, ಅದಕ್ಕೆ ಅನುಕೂಲವಾಗುವಂತೆ ಹಿರಿಯ ನಾಗರೀಕರು ವಿವಿಧ ರೀತಿಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು, ತಮ್ಮ ಕಷ್ಟ ಸುಖಗಳು, ನೋವು ನಲಿವುಗಳನ್ನು ಹಂಚಿಕೊಳ್ಳಲು, ಎಲ್ಲರೂ ಒಂದೆಡೆ ಸೇರಿ ಚರ್ಚಿಸುವ, ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ವಿತರಿಸಲು ಅನುಕೂಲವಾಗುವಂತಹ ಉತ್ತಮ ಕಟ್ಟಡ ನಿರ್ಮಾಣ ಮಾಡುವ ಅಗತ್ಯವಿದೆ, ಆ ದಿಸೆಯಲ್ಲಿ ಅಂದಾಜು 5 ಕೋಟಿ ರೂ.ಗಳ ವೆಚ್ಚದಲ್ಲಿ ಜಿಲ್ಲಾ ಕೇಂದ್ರದಲ್ಲಿ ಕಟ್ಟಡ ನಿರ್ಮಾಣ ಮಾಡಲು ಚಿಂತನೆ ನಡೆಸಲಾಗಿದೆ, ಅದಕ್ಕೆ ಬೇಕಾಗುವ ಅನುದಾನವನ್ನು ಕ್ರೂಢಿಕರಿಸಲು ಜಿಲ್ಲಾ ಪಂಚಾಯತ್‌ಗೆ ಸೂಚಿಸಲಾಗಿದೆ ಎಂದರು.



ಹಿರಿಯರಿಗೆ ಮಾಡುವ ಸೇವೆ, ಉಪಚಾರಗಳು ಮುಖ್ಯ ಅವರಿಗೆ ಗೌರವ ನೀಡಬೇಕು, ನಾವು ಚಿಕ್ಕವರಿದ್ದಾಗ ನಮ್ಮ ಸೇವೆಗಳನ್ನು ಮಾಡಿ, ಸಮಾಜದಲ್ಲಿ ಮುಖ್ಯ ವಾಹಿನಿಗೆ ತಂದು ಶ್ರಮಿಸಿದ ದೇವರುಗಳು ಹಿರಿಯರು, ನಾವು ಅವರ ಸೇವೆ ಮಾಡಿದರೆ ದೇವರ ಸೇವೆ ಮಾಡಿದಂತೆ. ಹಿರಿಯರ ಪ್ರತಿಭೆಗಳು, ಅವರು ಜಿಲ್ಲೆ, ರಾಜ್ಯ, ರಾಷ್ಟ್ರಕ್ಕೆ ನೀಡಿದ ಕೊಡುಗೆಗಳನ್ನು ಗುರುತಿಸಬೇಕು. ಅವರು ಮಾಡಿರುವ ಸೇವೆಗಳನ್ನು ನಾವು ಸ್ಮರಿಸಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಹಿರಿಯರನ್ನು ವೃದ್ಧಾಶ್ರಮಕ್ಕೆ ಸೇರಿಸುತ್ತಿರುವುದು ಹೆಚ್ಚಾಗಿದೆ. ಅದನ್ನು ತಪ್ಪಿಸಬೇಕು. ಅವರನ್ನು ತಮ್ಮ ಬಳಿಯೇ ಇಟ್ಟುಕೊಂಡು ಅವರ ಸೇವೆ ಮಾಡಬೇಕು. ಆಗ ಮಾತ್ರ ಬದುಕಿಗೆ ಒಂದು ಅರ್ಥ ಬರುತ್ತದೆ, ಜಿಲ್ಲೆಯಲ್ಲಿರುವ ವೃದ್ಧಾಶ್ರಮಗಳಿಗೆ ಅಧಿಕಾರಿಗಳು ಭೇಟಿ ನೀಡಿ ಹಿರಿಯರ ಯೋಗಕ್ಷೇಮಗಳನ್ನು ವಿಚಾರಿಸುತ್ತಿದ್ದಾರೆ. ಇದರೊಂದಿಗೆ ಹಿರಿಯ ನಾಗರಿಕರಿಗೆ ಸರ್ಕಾರದ ಸೌಲಭ್ಯಗಳು ದೊರಕುತ್ತಿರುವ ಬಗ್ಗೆ ಪರಿಶೀಲಿಸಿ, ಅವರಿಗೆ ಸರ್ಕಾರದ ಸೌಲಭ್ಯಗಳನ್ನು ದೊರಕಿಸುವ ಕೆಲಸಗಳನ್ನು ಸಂಬಂಧಿಸಿದ ಅಧಿಕಾರಿಗಳು ಮಾಡಬೇಕು ಜಿಲ್ಲೆಯಲ್ಲಿರುವ ವಿಕಲಚೇತನರನ್ನು ಗುರುತಿಸಿ ಅವರಿಗೆ ಬೇಕಾಗಿರುವ ಸಾಧನ ಸಲಕರಣೆಗಳನ್ನು ವಿತರಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜ್ಯೋತಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ದಿನೇಶ್ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಕೃತಕ ಕಾಲುಗಳನ್ನು ವಿತರಿಸಿದರು. ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಹಿರಿಯ ನಾಗರಿಕರಿಗೆ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ.ರಾಜು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಜಯಂತ್, ಹಿರಿಯ ನಾಗರಿಕರು ಹಾಗೂ ಸಮಾಜ ಸೇವಕರಾದ ಜಯಮ್ಮ, ಹುಚ್ಚಪ್ಪ, ಕಾಡಯ್ಯ, ಕಾಳಪ್ಪ ವೇದಿಕೆಯಲ್ಲಿದ್ದರು.

# ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ

**ದಾವಣಗೆರೆ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡ 50 ವರ್ಷಗಳಾದ ಹಿನ್ನಲೆಯಲ್ಲಿ ಸುವರ್ಣ ಮಹೋತ್ಸವ ಅಂಗವಾಗಿ ಪರಿಸರ ಸಂರಕ್ಷಣೆ ಕುರಿತಂತೆ ವ್ಯಾಪಕ ಜಾಗೃತಿ ಮೂಡಿಸಲು ಕಾರ್ಯಕ್ರಮವನ್ನು ನವೆಂಬರ್ 3 ರಂದು ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗುತ್ತಿದ್ದು ವ್ಯವಸ್ಥಿತವಾಗಿ ಕಾರ್ಯಕ್ರಮ ಆಯೋಜನೆಗೆ ಸಿದ್ಧತೆ ನಡೆಸುವಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ. ಎಂ.ಗಂಗಾಧರವಾಸ್ವಾಮಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ವಿಶ್ವಪರಿಸರ ದಿನಚರಣೆ ಅಂಗವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡ 50 ವರ್ಷಗಳಾದ ಹಿನ್ನಲೆಯಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸಲಾಗುವುದು. ಕಾರ್ಯಕ್ರಮಕ್ಕೆ ಸುಮಾರು 6 ರಿಂದ 7 ಸಾವಿರ ಜನ ಸೇರುವ ನಿರೀಕ್ಷೆ ಇದೆ. ಸೇರಿದ ಜನತೆಗೆ ಬೇಕಾದ ಆಸನ ವ್ಯವಸ್ಥೆ, ನೆರಳು, ನೀರು, ಆಹಾರ ವ್ಯವಸ್ಥೆ ಸೇರಿದಂತೆ ಯಾವುದೇ ರೀತಿಯ ಕೊರತೆ ಆಗದಂತೆ ಅಗತ್ಯ ಮೂಲ ಸೌಲಭ್ಯ ಒದಗಿಸಬೇಕು.

ಸಾಮಾಜಿಕ ಮತ್ತು ಪರಿಸರ ಬಗ್ಗೆ ಕಳಕಳಿ ಇರುವವರನ್ನು ಬಳಸಿಕೊಳ್ಳುವುದರ ಮೂಲಕ ಪರಿಸರದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವುದರೊಂದಿಗೆ ಭವಿಷ್ಯದ ಪೀಳಿಗೆಗೆ ಉತ್ತಮ ಪರಿಸರದ ಕೊಡುಗೆ ನೀಡಬೇಕಿದೆ. ಈ ಮೂಲಕ ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತವಾಗಿಸಲು ಕೆಲಸ ಮಾಡಬೇಕಾಗಿದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ಡಿಡಿಪಿಐ ಕೊಟ್ರೇಶ್, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ ರಾಜಶೇಖರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ತುಂಗಭದ್ರ ಸಭಾಂಗಣ ಬಾಡಿಗೆ ದರ ಪರಿಷ್ಕರಣೆ

**ದಾವಣಗೆರೆ:** ಜಿಲ್ಲಾಡಳಿತ ಭವನದಲ್ಲಿನ ತುಂಗಭದ್ರ ಸಭಾಂಗಣದ ನಿರ್ವಹಣೆಗಾಗಿ ಬಾಡಿಗೆ ದರವನ್ನು ರೂ.3000 ದಿಂದ ರೂ.10,000 ಕ್ಕೆ ಹೆಚ್ಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿನ ತುಂಗಭದ್ರಾ ಸಭಾಂಗಣವನ್ನು ದುರಸ್ಥಿಪಡಿಸಲಾಗಿದೆ. ಹಿಂದೆ ನಿಗದಿಪಡಿಸಿರುವ ಬಾಡಿಗೆ ಮೊತ್ತ ಅತೀ ಕಡಿಮೆಯಾಗಿದ್ದು, ಇದರ ವಿದ್ಯುತ್ ವೆಚ್ಚ ಸೇರಿದಂತೆ ಇತರೆ ವೆಚ್ಚಗಳ ನಿರ್ವಹಣೆಗಾಗಿ ದರಪರಿಷ್ಕರಣೆ ಮಾಡಲಾಗಿದೆ. ಆದ್ದರಿಂದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಕಂದಾಯ ಇಲಾಖೆ ಹೊರತುಪಡಿಸಿ, ಇನ್ನುಳಿದ ಸರ್ಕಾರಿ, ಅರೆ ಸರ್ಕಾರಿ ಇಲಾಖೆ, ಸಂಘ-ಸಂಸ್ಥೆ, ಮಂಡಳಿ ಸೇರಿದಂತೆ ಯಾವುದೇ ಕಾರ್ಯಕ್ರಮಗಳಿಗೆ ದಿನದ ಬಾಡಿಗೆ ಮೊತ್ತ ರೂ.10 ಸಾವಿರ ನಿಗಧಿಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಇನ್‌ಕ್ಯೂಬೇಶನ್ ಅವೇರ್‌ನೆಸ್ ಪ್ರೋಗ್ರಾಮ್ ಉದ್ಘಾಟನೆ

**ಚಿಕ್ಕಮಗಳೂರು;** ಜಿಲ್ಲಾ ಕೈಗಾರಿಕಾ ಕೇಂದ್ರ, ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಹಾಗೂ ಡಿಎಸಿಜಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಇನ್‌ಕ್ಯೂಬೇಶನ್ ಒನ್ ಡೇ ಅವೇರ್‌ನೆಸ್ ಪ್ರೋಗ್ರಾಮ್ಸ್ ಅಂಡರ್ ಆರ್.ಎ.ಎಂ.ಪಿ. ಕಾರ್ಯಾಗಾರವನ್ನು ಅಕ್ಟೋಬರ್ 15 ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ.

ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ಡಿಪಾರ್ಟ್‌ಮೆಂಟ್‌ನ ಸೆಮಿನಾರ್ ಹಾಲ್‌ನಲ್ಲಿ ನಡೆಯುವ ಈ ಕಾರ್ಯಕ್ರಮವನ್ನು ಚಿಕ್ಕಮಗಳೂರು ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶಾಂತಾರಾಮ್ ಹೆಗಡೆ ಉದ್ಘಾಟಿಸುವರು. ಎಐಟಿ ಕಾಲೇಜಿನ ಪ್ರಾಂಶುಪಾಲ ಡಾ.ಸಿ.ಟಿ.ಜಯದೇವ್ ಅಧ್ಯಕ್ಷತೆ ವಹಿಸಲಿದ್ದು, ಚಿಕ್ಕಮಗಳೂರು ಸಣ್ಣ ಕೈಗಾರಿಕೆಗಳ ಒಕ್ಕೂಟದ ಅಧ್ಯಕ್ಷ ಸೈಯ್ಯದ್ ಮುನೀರ್ ಅಹಮ್ಮದ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸಿ.ಎಂ.ಮಹೇಶ್ ಕುಮಾರ್, ಎಐಟಿ ಕಾಲೇಜಿನ ಎಂಬಿಎ ವಿಭಾಗ ಮುಖ್ಯಸ್ಥ ಡಾ.ಕೆ.ಎಸ್.ಪ್ರಕಾಶ್‌ರಾವ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಹೆಚ್.ಎನ್.ಮಹೇಶ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಶಾಂತ್ ಭಾಗವಹಿಸುವರು.

## ಪೀಠೋಪಕರಣಗಳ ದರಪಟ್ಟಿ ಆಹ್ವಾನ

**ಚಿಕ್ಕಮಗಳೂರು:** ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ದುರಸ್ತಿ ಮಾಡಲಾಗದ ಪೀಠೋಪಕರಣಗಳ ವಿಲೇವಾರಿಗೆ ಸ್ಪರ್ಧಾತ್ಮಕ ದರಗಳನ್ನು ಆಹ್ವಾನಿಸಿ ಪೀಠೋಪಕರಣಗಳ ಅಧಿಕೃತ ಮಾರಾಟಗಾರರಿಂದ ಮೊಹರು ಮಾಡಿದ ಟೆಂಡರುಗಳನ್ನು ಹಲವು ನಿಬಂಧನೆಗೆ ಒಳಪಟ್ಟು ಕರೆಯಲಾಗಿದೆ.

ಸುಮಾರು 31 ಪೀಠೋಪಕರಣಗಳು ವಿಲೇವಾರಿಗೆ ಲಭ್ಯವಿದ್ದು, ಆಸಕ್ತಿ ಇರುವ ಅಧಿಕೃತ ಖರೀದಿದಾರರು ದರವನ್ನು ನಮೂದಿಸಿ (ಮಾರಾಟ ತೆರಿಗೆಯನ್ನು ಹೊರತುಪಡಿಸಿ) ಅಕ್ಟೋಬರ್ 31ರ ಮಧ್ಯಾಹ್ನ 4 ಗಂಟೆಯ ಒಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಜಿಲ್ಲಾ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ.

## ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ಚಿಕ್ಕಮಗಳೂರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಅಕ್ಟೋಬರ್ 27 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರಿಗೆ ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 35 ವರ್ಷ ವಯಸ್ಸಿನ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳನ್ನು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು.

ಅಭ್ಯರ್ಥಿಗಳು ಸ್ಥಳೀಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅಕ್ಟೋಬರ್ 27 ರಂದು ಬೆಳಿಗ್ಗೆ 9 ಗಂಟೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕು ಹಸಿಗಾಳ ಅಂಚೆ ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಡೆಯುವ ತರಬೇತಿಗೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕಾಗಿ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಂಸ್ಥೆಯನ್ನು (ದೂರವಾಣಿ ಸಂಖ್ಯೆ 8970476050, 9591514154, 9686248369) ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೆಲಹಾಸುಗಳಿಗೆ ಶೇ.50ರ ಸಹಾಯ ಧನ

**ಚಿಕ್ಕಮಗಳೂರು:** 2025–26ನೇ ಸಾಲಿನಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ರಬ್ಬರ್ ನೆಲಹಾಸುಗಳನ್ನು ಶೇ.50ರ ಸಹಾಯ ಧನ ಮತ್ತು ಶೇ.50ರಷ್ಟು ಫಲಾನುಭವಿ ವಂತಿಕೆಯೊಂದಿಗೆ ನೀಡುವ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.ಬಡತನ ರೇಖೆಗಿಂತ ಕೆಳಗಿರುವ ಭೂರಹಿತ ಕೃಷಿ ಕಾರ್ಮಿಕ ಮಹಿಳೆಯರು, ಅಲ್ಪಸಂಖ್ಯಾತರು, ವಿಕಲಚೇತನರು, ವಿಧವೆಯರು, ದೇವದಾಸಿಯರು ಮತ್ತು ಸಂಕಷ್ಟಕ್ಕೊಳಗಾದ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು, ಆಸಕ್ತರು ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸೂಕ್ತ ದಾಖಲಾತಿಗಳೊಂದಿಗೆ ಅಕ್ಟೋಬರ್ 31 ರೊಳಗಾಗಿ ಕಚೇರಿ ವೇಳೆಯಲ್ಲಿ ತಾಲ್ಲೂಕಿನ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ತಾಲ್ಲೂಕು ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರುಗಳನ್ನು (ಚಿಕ್ಕಮಗಳೂರು 08262–295319, ಕಡೂರು 94486–65567, ಕೊಪ್ಪ 87627–31755, ಮೂಡಿಗೆರೆ 94804–05304, ನ.ರಾ.ಪುರ 90086–25655, ಶೃಂಗೇರಿ 94486–28780, ತರೀಕೆರೆ 94485–71800, ಅಜ್ಜಂಪುರ 94497–05674 ಹಾಗೂ ಕಳಸ 94804–05304) ಸಂಪರ್ಕಿಸಬಹುದು ಎಂಣದು ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಬ್ಬರು ನೇತ್ರ ಸಹಾಯಕರ ಹುದ್ದೆ

**ಚಿಕ್ಕಮಗಳೂರು:** ಎನ್.ಹೆಚ್.ಎಂ ಕಾರ್ಯಕ್ರಮದಡಿ ನಗರದ ಜಿಲ್ಲಾ ಅಂಧತ್ವ ನಿವಾರಣಾ ವಿಭಾಗಕ್ಕೆ ಇಬ್ಬರು ನೇತ್ರ ಸಹಾಯಕರ ಹುದ್ದೆಯನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಎನ್.ಹೆಚ್.ಎಂ ಮಾರ್ಗಸೂಚಿ ಅನುಸಾರ “ರೋಸ್ಟರ್ ಕಂ ಮೆರಿಟ್ ಸಿಸ್ಟಮ್” ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿದ್ದು, ಅಕ್ಟೋಬರ್ 30 ರಂದು ಬೆಳಗ್ಗೆ 10:30 ರಿಂದ 01.30 ವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅರ್ಜಿ ವಿತರಿಸಲಾಗುವುದು ಮತ್ತು ಅದೇ ದಿನ ಅಪರಾಹ್ನ 3 ಗಂಟೆಗೆ ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನ ನಡೆಸಲಾಗುವುದು.

ಎರಡು ವರ್ಷದ ಡಿಪ್ಲೊಮಾ ಇನ್ ಆಪ್ಟೋಮೆಟ್ರಿ ಅಥವಾ ನೇತ್ರ ಸಹಾಯಕರು (ಆಪ್ತಾಲ್ಮಿಕ್ ಅಸಿಸ್ಟೆಂಟ್) ವಿದ್ಯಾರ್ಹತೆ ಹೊಂದಿದ್ದು, ಪರಿಶಿಷ್ಟ ಜಾತಿ ಪ್ರವರ್ಗ ಎ–1 ಹಾಗೂ ಸಾಮಾನ್ಯ ಅಭ್ಯರ್ಥಿ ಒಂದು ಈ ಎರಡು ಹುದ್ದೆಗಳಿಗೆ ಸಂದರ್ಶನ ನಡೆಯಲಿದ್ದು, 45 ವಯೋಮಿತಿ ಮೀರದ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು.ಸಲ್ಲಿಸಬೇಕಾದ ದಾಖಲಾತಿಗಳು: ಎಸ್.ಎಸ್.ಎಲ್.ಸಿ ಅಂಕಪಟ್ಟಿ, ದ್ವಿತೀಯ ಪಿ.ಯು.ಸಿ ಅಂಕಪಟ್ಟಿಗಳು. ಡಿಪ್ಲೊಮಾ ಇನ್ ಆಪ್ಟೋಮೆಟ್ರಿ ಅಥವಾ ನೇತ್ರ ಸಹಾಯಕರು (ಆಪ್ತಾಲ್ಮಿಕ್ ಅಸಿಸ್ಟೆಂಟ್) ವಿದ್ಯಾರ್ಹತೆಯ ಅಂಕಪಟ್ಟಿಗಳು, ಎರಡು ಭಾವಚಿತ್ರಗಳು, ಅನುಭವವಿದ್ದಲ್ಲಿ ಪ್ರಮಾಣ ಪತ್ರ. ಕಂಪ್ಯೂಟರ್ ಜ್ಞಾನದ ಬಗ್ಗೆ ಪ್ರಮಾಣ ಪತ್ರ ಹಾಗೂ ಆಧಾರ್ ಕಾರ್ಡ್ ಇವುಗಳನ್ನು ಸಂದರ್ಶನದ ವೇಳೆ ಸಲ್ಲಿಸಬಹುದು.

# ಫಲಪುಷ್ಪ ಪ್ರದರ್ಶನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ

**ಹಾಸನ :** ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತೋಟಗಾರಿಕೆ ಇಲಾಖೆ, ಹೇಮಾವತಿ ತೋಟಗಾರಿಕೆ ಸಂಘ (ನಿ), ಹಾಸನ ಹಾಗೂ ವಿವಿಧ ಅಭಿವೃದ್ಧಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಅ.17 ರಿಂದ ಅ.20 ರವರಗೆ ಫಲಪುಷ್ಪ ಪ್ರದರ್ಶನವನ್ನು ನಗರದ ಸಿಲ್ವರ್ ಜುಬಿಲಿ ಪಾರ್ಕ್‌ನಲ್ಲಿ ಏರ್ಪಡಿಸಲಾಗುತ್ತಿದೆ. ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್ ಪೂರ್ಣಿಮಾ ಅವರು ತಿಳಿಸಿದ್ದಾರೆ.



ಹಾಸನ ನಗರದ ಸಿಲ್ವರ್ ಜುಬಿಲಿ ಪಾರ್ಕ್‌ನಲ್ಲಿಂದು ಫಲಪುಷ್ಪ ಪ್ರದರ್ಶನ ಕುರಿತು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಈ ಹಿಂದೆ ಗಣರಾಜ್ಯೋತ್ಸವ ಅಥವಾ ಕನ್ನಡ ರಾಜ್ಯೋತ್ಸವದಂತಹ ಯಾವುದಾದರೂ ಒಂದು ಕಾರ್ಯಕ್ರಮದಲ್ಲಿ ಮಾತ್ರ ಫಲಪುಷ್ಪ ಪ್ರದರ್ಶನ ಮಾಡುತ್ತಿದ್ದೆವು. ಕಳೆದ ವರ್ಷದಿಂದ ಹಾಸನಾಂಬ ಜಾತ್ರೆಗೆ, ದೇವಿ ದರ್ಶನಕ್ಕೆ ಬಂದಿರುವ ಭಕ್ತರಿಗೆ ಹಾಸನದ ಜನತೆಗೆ ನೋಡುವುದಕ್ಕೆ ಅನುಕೂಲವಾಗಲೆಂದು 2024ನೇ ಸಾಲಿನಿಂದ ಈ ಕಾರ್ಯಕ್ರಮವನ್ನು ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಫಲಪುಷ್ಪ ಪ್ರದರ್ಶನದಲ್ಲಿ ಒಟ್ಟು 8000 ಸಂಖ್ಯೆಯ ವಿವಿಧ ಬಗೆಯ ಹೂವಿನ ಗಿಡಗಳನ್ನು ಉದ್ಯಾನವನದ ಪಾತಿಗಳಲ್ಲಿ ಮತ್ತು ವಿವಿಧ ಅಳತೆಯ ಪಾಟುಗಳಲ್ಲಿ ಬೆಳೆಸಲಾಗಿದ್ದು, ಮರಗಳ ಸುತ್ತ ಹಾಗೂ ಸಮೂಹಗಳಲ್ಲಿ ಆಕರ್ಷಕವಾಗಿ ಜೋಡಿಸುವ ಕಾರ್ಯ ಚಾಲ್ತಿಯಲ್ಲಿದೆ ಎಂದು ತಿಳಿಸಿದರು.

ಈ ಬಾರಿಯ ಫಲಪುಷ್ಪ ಪ್ರದರ್ಶನದ ವಿಶೇಷತೆ ಏನೆಂದರೆ ಸಾವಿರಾರು ವರ್ಷಗಳ ಐತಿಹಾಸಿಕ, ಧಾರ್ಮಿಕ ಹಿನ್ನೆಲೆಯಿರುವ ವರ್ಷಕ್ಕೊಮ್ಮೆ ಮಾತ್ರ ದರ್ಶನ ನೀಡುವ ಹಾಸನದ ಶಕ್ತಿದೇವತೆ ಹಾಸನಾಂಬೆಯ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಮೆರುಗು ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿರುವುದಲ್ಲದೇ ಭಕ್ತರ ಸಂಖ್ಯೆ ಲಕ್ಷೋಪಾದಿಯಲ್ಲಿ ವೃದ್ಧಿಯಾಗುತ್ತಿದೆ. ಅದರಂತೆ ಈ ಬಾರಿಯ ಫಲಪುಷ್ಪ ಪ್ರದರ್ಶನದಲ್ಲಿ ಶ್ರೀ ಹಾಸನಾಂಬ ದೇವಿ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ದೇವಾಲಯದ ರಾಜಗೋಪುರ, ಗರುಡ ಗಂಬ ಮತ್ತು ದೀಪವನ್ನು ವಿವಿಧ ಬಗೆಯ ಹೂವುಗಳಿಂದ ಅಲಂಕರಿಸಿ ಪ್ರದರ್ಶಿಸಲಾಗುತ್ತಿದೆ ಎಂದರು.

ದಿನನಿತ್ಯ ಬಳಸಿ ಎಸೆಯುವ ಅನೇಕ ವಸ್ತುಗಳಾದ ಪ್ಲಾಸ್ಟಿಕ್ , ಡ್ರಮ್ಮುಗಳು, ಟೈರುಗಳು, ಮರದ ತುಂಡುಗಳು, ಹಳೇ ವಾಹನಗಳು ಇತ್ಯಾದಿ ಅನುಪಯುಕ್ತ ವಸ್ತುಗಳನ್ನು ಎಸೆಯುವುದರಿಂದ ಪರಿಸರಕ್ಕೆ ಹಾನಿಯಾಗುತ್ತದೆ. ಬದಲಾಗಿ ಹಳೆಯ, ಉಪಯೋಗಿಸಿದ ಈ ರೀತಿಯ ಉತ್ಪನ್ನಗಳನ್ನು ಬಳಸಿ, ವಿವಿಧ ಬಗೆಯ ಹೂವುಗಳಿಂದ ಅಲಂಕರಿಸಿ ಪ್ರದರ್ಶಿಸುತ್ತಿದ್ದು, ಜನರಲ್ಲಿ ತ್ಯಾಜ್ಯ ವಸ್ತುಗಳ ಮರುಬಳಕೆಯ ಬಗ್ಗೆ ಜಾಗೃತಿ ಮೂಡಿಸುವ ಪ್ರಯತ್ನವನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಹಾಸನ ಜಿಲ್ಲೆಯಲ್ಲಿ ತೆಂಗು ಪ್ರಮುಖ ವಾಣಿಜ್ಯ ಬೆಳೆಯಾಗಿದ್ದು, ರೈತರ ಆರ್ಥಿಕತೆಯ ಮೂಲಾಧಾರವಾಗಿದೆ. ಇತ್ತೀಚೆಗೆ ಹಲವು ರೋಗ ಕೀಟ ಬಾಧೆಯಿಂದ ತೆಂಗಿನಲ್ಲಿ ಇಳುವರಿ ಕುಂಠಿಗೊಳ್ಳುತ್ತಿದ್ದು,ಸಾರ್ವಜನಿಕರಿಗೆ ಮನೋರಂಜನೆ ನೀಡುವ ಉದ್ದೇಶದಿಂದ ಫಲಪುಷ್ಪ ಪ್ರದರ್ಶನದ ಪ್ರಾರಂಭದಿಂದ ಮುಕ್ತಾಯವಾಗುವವರಗೆ ಪ್ರತಿದಿನ ಸಂಜೆ 07 ಗಂಟೆಯಿಂದ 09 ಗಂಟೆಯವರಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಫಲಪುಷ್ಪ ಪ್ರದರ್ಶನಕ್ಕೆ ಪ್ರವೇಶ ಶುಲ್ಕವಿದ್ದು, ವಯಸ್ಕರಿಗೆ ರೂ.20 ಗಳನ್ನು ಹಾಗೂ ಮಕ್ಕಳಿಗೆ ರೂ10 ಗಳ ಪ್ರವೇಶ ಶುಲ್ಕವನ್ನು ನಿಗದಿಪಡಿಸಲಾಗಿದೆ. ಖಾಸಗಿ ಅಥವಾ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಶಾಲಾ ಸಮವಸ್ತ್ರ ಧರಿಸಿ ಬಂದರೆ ಪ್ರದರ್ಶನಕ್ಕೆ ಉಚಿತ ಪ್ರವೇಶ ನೀಡಲಾಗುವುದು ಎಂದು ತಿಳಿಸಿದರು.

ಅ.17 ರಂದು ಫಲಪುಷ್ಪ ಪ್ರದರ್ಶನ ಉದ್ಘಾಟನೆಯನ್ನು ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ಅವರು ನೆರವೇರಿಸುತ್ತಿದ್ದು, ಪುಷ್ಪ ಕಲಾಕೃತಿಗಳನ್ನು ಕರ್ನಾಟಕ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ. ಶಿವಲಿಂಗೇಗೌಡ ಅವರು ಉದ್ಘಾಟಿಸುವರು, ಪ್ರದರ್ಶನಾ ಮಳಿಗೆಗಳನ್ನು ಸಂಸದರಾದ ಶ್ರೇಯಸ್, ಎಂ. ಪಟೇಲ್, ರವರು ನೆರವೇರಿಸಲಿದ್ದು, ಶಾಸಕರಾದ ಸ್ವರೂಪ್ ಪ್ರಕಾಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವರು. ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ಶಾಸಕರುಗಳು, ವಿಧಾನ ಪರಿಷತ್ ಸದಸ್ಯರುಗಳು, ಇತರೆ ಚುನಾಯಿತ ಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಲಿರುವರು ಎಂದು ತಿಳಿಸಿದರು.

ಕಳೆದ ಬಾರಿ ಫಲಪುಷ್ಪ ಪ್ರದರ್ಶನ ಬಹಳ ಯಶಸ್ವಿಯಾಗಿ ಜನಮನ್ನಣೆ ಪಡೆದಿತ್ತು, ಉತ್ತಮ ಜನಾಭಿಪ್ರಾಯ ಮೂಡಿ ಬಂದಿತ್ತು. ಈ ಬಾರಿಯೂ ರೈತರು, ಸಾರ್ವಜನಿಕರು ಸೇರಿದಂತೆ ಹಾಸನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ವೀಕ್ಷಿಸಿ ಪ್ರೋತ್ಸಾಹ ನೀಡಿ ಯಶಸ್ವಿಗೊಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಹೇಮಾವತಿ ತೋಟಗಾರಿಕೆ ಸಂಘದ ಉಪಾಧ್ಯಕ್ಷರಾದ ಸುಜಾತ ನಾರಾಯಣ್, ತೋಟಗಾರಿಕೆ ಉಪನಿರ್ದೇಶಕರು ಹಾಗೂ ಹೇಮಾವತಿ ತೋಟಗಾರಿಕೆ ಸಂಘದ ನಿರ್ದೇಶಕರಾದ ಯೋಗೇಶ್ ಹೆಚ್.ಆರ್, ಹಾಸನ ರಾಜ್ಯವಲಯದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ಹೇಮಾವತಿ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿಗಳಾದ ಭಾನುಪ್ರಕಾಶ್ ಬಿ.ಈ, ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಪವಿತ್ರ ಭಾಗವಹಿಸಿದ್ದರು.

# ಆಗ್ನೇಯ ಪದವೀಧರರ ಕ್ಷೇತ್ರ, ಮತದಾರರ ಪಟ್ಟಿಗೆ ನೋಂದಣಿ: ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ

**ದಾವಣಗೆರೆ:** ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿ ಸಿದ್ದಪಡಿಸುವ ಕೆಲಸ ಆರಂಭವಾಗಿದ್ದು 2025 ರ ನವೆಂಬರ್ 1 ಕ್ಕೆ ಮೂರು ವರ್ಷ ಮುಂಚಿತವಾಗಿ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಪಡೆದ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಹಾಗೂ ಎಲ್ಲಾ ಸರ್ಕಾರಿ ಅಧಿಕಾರಿಗಳು, ಹೊರಗುತ್ತಿಗೆ ನೌಕರರು ಮತದಾರರ ಪಟ್ಟಿಗೆ ಕಡ್ಡಾಯವಾಗಿ ಹೆಸರು ನೋಂದಣಿ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚಿಸಿದ್ದಾರೆ.



ಆಗ್ನೇಯ ಪದವೀಧರರ ಕ್ಷೇತ್ರದ ವ್ಯಾಪ್ತಿಗೆ ದಾವಣಗೆರೆ, ಹರಿಹರ ಹಾಗೂ ಜಗಳೂರು ತಾಲ್ಲೂಕುಗಳು ಒಳಪಡುತ್ತವೆ. ಈ ಕ್ಷೇತ್ರಗಳ ವ್ಯಾಪ್ತಿಗೆ ಒಳಪಡುವ ಮತರದಾರರು ಈ ತಾಲ್ಲೂಕು ವ್ಯಾಪ್ತಿಯಲ್ಲಿ ಕನಿಷ್ಠ 6 ತಿಂಗಳಿಗಿಂತಲೂ ಹೆಚ್ಚಿನ ಅವಧಿಯಲ್ಲಿ ಖಾಯಂ ನಿವಾಸಿಯಾಗಿರಬೇಕು. ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಣಿಗೆ ಅಂಗೀಕೃತ ವಿವಿಯಿಂದ ಪದವಿ ಪ್ರಮಾಣ ಪತ್ರ ಮತ್ತು ಅಗತ್ಯ ದಾಖಲೆಗಳೊಂದಿಗೆ ನಮೂನೆ–18 ಪ್ರತಿ, ಮತದಾರ ಗುರುತಿನ ಚೀಟಿ, ಆಧಾರ್ ಕಾರ್ಡ್, ಮತ್ತು ಆಯೋಗ ನಿಗದಿಪಡಿಸಿದ ದಾಖಲೆಗಳೊಂದಿಗೆ ಮತದಾರರ ನೊಂದಣಾಧಿಕಾರಿಗಳಿಗೆ ಸಲ್ಲಿಸಬಹುದು.

ದಾವಣಗೆರೆ ನಗರದ ಉತ್ತರ ಮತ್ತು ದಕ್ಷಿಣ ಹಾಗೂ ಕಸಬಾ ಹೋಬಳಿ ವ್ಯಾಪ್ತಿಯಲ್ಲಿನ ಅರ್ಹ ಪದವೀಧರರು ಮಹಾನಗರ ಪಾಲಿಕೆ, ದಾವಣಗೆರೆ, ಹರಿಹರ ಮತ್ತು ಜಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿನ ಅರ್ಹ ಪದವೀಧರರ ನೋಂದಣಿಗೆ ತಾಲ್ಲೂಕು ಕಚೇರಿಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ನಮೂನೆ 18 ಕನ್ನಡ, ಇಂಗ್ಲೀಷ್ ಡೌನ್ ಲೋಡ್ ಗಾಗಿhttps://ceo.karnataka.gov.in/uploads/mediatoupload1693469269.pdf CxÀªÁ https://ceo.karnataka.gov.in/uploads/mediatoupload1693469289.pdf ನಜಾಲತಾಣದಲ್ಲಿ ಡೌನ್ ಲೋಡ್ ಮಾಡೊಕೊಳ್ಳಬಹದು.

ಸಹಾಯಕ ನೊಂದಣಾಧಿಕಾರಿಗಳನ್ನು ವಿವರ: ದಾವಣಗೆರೆ ನಗರ ಉತ್ತರ ವ್ಯಾಪ್ತಿಗೆ ಮಹಾನಗರ ಪಾಲಿಕೆ ಕಂದಾಯ ಅಧಿಕಾರಿ ಎಂ.ಬಿ.ಗುರುಪ್ರಸಾದ್, ಮೊ.ಸಂಖ್ಯೆ 9611400040, ದಾವಣಗೆರೆ ದಕ್ಷಿಣ ವ್ಯಾಪ್ತಿಗೆ ಮಹಾನಗರ ಪಾಲಿಕೆ ಸಹಾಯಕ ಕಾರ್ಯಪಾಲಕ ಅಭಿಯಂತರ ಎಂ.ಆರ್.ಸಚಿನ್, ಮೊ.ನಂ 78289137361, ದಾವಣಗೆರೆ ಕೆ.ಆರ್.ದೇವರಾಜ್ ಮೊ.8197128162, ಹರಿಹರ ವಿ.ಪ್ರಶಾಂತ್ ಮೊ.97433661524, ಜಗಳೂರು ಜಿ.ಕೆ. ಮಂಜುನಾಥ್ ಮೊ.8296418321 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ :** ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ ಡೇ ಯೋಜನೆಯ ಸ್ವ ಸಹಾಯ ಸದಸ್ಯರುಗಳನ್ನು ಕಮ್ಯುನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವ ಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದ್ದು ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿ ಕನಿಷ್ಟ ಎಸ್‌ಎಸ್‌ಎಲ್‌ಸಿ ಪಾಸ್ ಆಗಿರಬೇಕು. ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು. ಅರ್ಜಿಯೊಂದಿಗೆ ಇತ್ತೀಚಿನ 4 ಭಾವಚಿತ್ರಗಳು, ಆಧಾರ ಕಾರ್ಡ , ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪಾನ್ ಕಾರ್ಡ , ವಿದ್ಯಾರ್ಹತೆ ಸಂಬಂಧಿಸಿದ ದಾಖಲಾತಿಗಳು, ಕಂಪ್ಯೂಟರ್ ತರಬೇತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ , ಡೇ ನಲ್ಮ ಯೋಜನೆಯ ಸ್ವ ಸಹಾಯ ಸಂಘದ ಸದಸ್ಯರಾಗಿರುವ ಬಗ್ಗೆ ಸಂಘದ ಪ್ರಮಾಣ ಪತ್ರ , ರಾಷ್ಟ್ರೀಕೃತ ಬ್ಯಾಂಕ್ ಪಾಸ್ ಬುಕ್ ಪ್ರತಿ , ಅನುಭವ ಪ್ರಮಾಣ ಪತ್ರ ಇವುಗಳನ್ನು ಲಗತ್ತಿಸಬೇಕು.ಅರ್ಜಿ ಸಲ್ಲಿಸಲು ಅಕ್ಟೋಬರ್ 24 ಕೊನೆಯ ದಿನವಾಗಿದ್ದು, ನಿಗದಿತ ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಅವಧಿ ವಿಸ್ತರಣೆ

**ರಾಮನಗರ:** 2025–26ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು 13 ಫಲಾನುಭವಿ ಆಧಾರಿತ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅ. 15ರ ವರೆಗೆ ಅವಧಿ ವಿಸ್ತರಿಸಿದೆ.

# ನಿರ್ಭಯದಿಂದ ಮುನ್ನಡೆದರೆ ಜೀವನದಲ್ಲಿ ಯಶಸ್ಸು ಪಡೆಯಲು, ನಾಯಕರಾಗಲು ಸಾಧ್ಯ: ಜಿ. ಬಿ. ವಿನಯ್ ಕುಮಾರ್ ಅಭಿಮತ

**ದಾವಣಗೆರೆ:** ದೇಶದಲ್ಲಿ ಭಯ ಇದ್ದರೆ ದೂರ ಉಳಿದುಬಿಡುತ್ತೇವೆ. ನೇರವಾಗಿ ಎದುರಿಸುವ ಬೆಳೆಸುವ ಶಕ್ತಿ ಬೆಳೆಸಿಕೊಂಡಿಲ್ಲ. ಇದು ದುರಂತ. ನಿರ್ಭಯದಿಂದ ಸಾಧನೆಯತ್ತ ಮುನ್ನಡೆದರೆ ಬದುಕಿನಲ್ಲಿ ನಾಯಕರಾಗಲು ಮತ್ತು ಯಶಸು ಸಾಧಿಸಲು ಸಾಧ್ಯವಾಗುತ್ತದೆ. ಗೆಲ್ಲುವವರೆಗೆ ನಿರಂತರ ಪ್ರಯತ್ನ ಇರಬೇಕು. ಸವಾಲಾಗಿ ತೆಗೆದುಕೊಂಡು ಮುನ್ನಡೆದವರು ಇಂದು ಪ್ರತಿಯೊಂದು ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಿದ್ದಾರೆ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ತಿಳಿಸಿದರು.



ದಾವಣಗೆರೆ ಜಿಲ್ಲೆಯ ಹೊನ್ನಾಳಿ – ನ್ಯಾಮತಿ ಅವಳಿ ತಾಲೂಕಿನ ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜಿನ ವತಿಯಿಂದ ಬಿ.ಕಾಂ, ಬಿ.ಎ ಮತ್ತು ಬಿ.ಸಿ.ಎ ವಿಭಾಗದ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ನಿರಂತರ ಕಲಿಕೆ, ಶಿಕ್ಷಣ, ಜ್ಞಾನ ತುಂಬಾನೇ ಮುಖ್ಯ ಎಂದು ಪ್ರತಿಪಾದಿಸಿದರು.

ದಿನಕ್ಕೆ 2 ಗಂಟೆಗಳವರೆಗೆ ಇಂಗ್ಲೀಷ್ ಪದ ಕಲಿಯಲು ಶುರು ಮಾಡಿ. ಏಕಾಗ್ರತೆ, ತನ್ಮಯತೆಯಿಂದ ಕಲಿತರೆ ಇಂಗ್ಲೀಷ್ ಭಾಷೆಯಲ್ಲಿ ಪರಿಣಿತರಾಗುವುದು ಖಚಿತ. ಮೂರು ಸಾವಿರ ಇಂಗ್ಲೀಷ್ ಪದಗಳನ್ನು ಕಲಿತರೆ ನೀವು ಇಂಗ್ಲೀಷ್ ಮಾಧ್ಯಮದವರಿಗಿಂತ ಹೆಚ್ಚು ಬುದ್ಧಿಶಾಲಿಯಾಗುತ್ತೀರಿ. ಇದು ಉತ್ಪ್ರೇಕ್ಷೆಯಲ್ಲ. ಇಂಗ್ಲೀಷ್ ಕಲಿಯಲು, ಬರೆಯುವ ಪ್ರಯತ್ನ ಮಾಡಲು ಹೋಗಲ್ಲ. ಇದೇ ನಮ್ಮ ಸಮಸ್ಯೆ. ಭಯದಿಂದಲೇ ನಮಗೆ ಏಕೆ ಬೇಕೆಂದು ದೂರ ಉಳಿಯಬಾರದು. ಧೈರ್ಯದಿಂದ ಮುನ್ನುಗ್ಗಬೇಕು ಎಂದು ಕರೆ ನೀಡಿದರು.

ಬದುಕಿನಲ್ಲಿ ಕಷ್ಟ ಎಂದು ಕೈಕಟ್ಟಿ ಕುಳಿತುಕೊಂಡರೆ ಅಡಿಯಾಳಾಗಿ ಉಳಿದುಬಿಡುತ್ತೇವೆ. ತಂತ್ರಜ್ಞಾನಕ್ಕೆ ತಕ್ಕಂತೆ ಬುದ್ಧಿಮಟ್ಟ ಬೆಳೆಸಿಕೊಳ್ಳದಿದ್ದರೆ ಮನುಷ್ಯರ ಗುಲಾಮರಾಗಲ್ಲ. ಯಂತ್ರಗಳ ಗುಲಾಮರಾಗುತ್ತೇವೆ. ಇಷ್ಟು ವರ್ಷಗಳ ಕಾಲ ನಾವು ತಂತ್ರಜ್ಞಾನ ನಿಯಂತ್ರಣ ಮಾಡುತ್ತಿದ್ದೆವು. ಕಂಪ್ಯೂಟರ್ ಆಚೆ ಹೊರ ಬಂದು ಮನುಷ್ಯನ ಬುದ್ಧಿ, ಸಾಮರ್ಥ್ಯ ಮೀರಿದಂಥ ತಂತ್ರಜ್ಞಾನ ಈಗ ಬೆಳೆದಿದೆ. ರೊಬೊ ಎಲ್ಲಾ ಕೆಲಸವನ್ನೂ ಮಾಡುತ್ತವೆ. ಕೃಷಿ ಕ್ಷೇತ್ರಕ್ಕೂ ಕಾಲಿಡಲಿದೆ. ಮನುಷ್ಯಕ್ಕಿಂತ ಜಾಸ್ತಿ ರೊಬೊಟ್ಸ್ ಕೆಲಸ ಮಾಡುತ್ತವೆ. ಇನ್ನು ಮುಂದಿನ ಕೇವಲ ಹತ್ತು ವರ್ಷದಲ್ಲಿ ರೊಬೊಟ್ ಮೇಲೆ ನಾವೆಲ್ಲರೂ ಅವಲಂಬಿತರಾಗಿಬಿಡುತ್ತೇವೆ. ಅಮೆರಿಕಾದಲ್ಲಿ ಇದು ಆಗುತ್ತಿದೆ. ಇದು ವಾಸ್ತವ. ಶಿಕ್ಷಣದ ಪಠ್ಯಪುಸ್ತಕ, ಪಠ್ಯೇತರ ಪುಸ್ತಕಗಳು, ಕಲೆ, ಸಾಹಿತ್ಯ ಸೇರಿದಂತೆ ಇತರೆ

ಪುಸ್ತಕಗಳನ್ನು ಓದಿ ಪ್ರಪಂಚದ ಜ್ಞಾನ ತಿಳಿದುಕೊಳ್ಳಿ. ಕಾಲಕ್ಕೆ ತಕ್ಕಂತೆ ನಾವು ಬದಲಾಗಬೇಕು. ಯಾವ್ಯಾವ ಸಂದರ್ಭದಲ್ಲಿ ಏನು ಮಾಡಬೇಕೆಂಬ ಬಗ್ಗೆ ಈಗಿನಿಂದಲೇ ಚಿಂತಿಸಬೇಕು ಎಂದು ಕರೆ ನೀಡಿದರು.

ಸಂವಿಧಾನ ಪೀಠಿಕೆಯಲ್ಲಿನ ಅಂಶಗಳು ನಮಗೆ ಸಂಬಂಧವೇ ಇಲ್ಲವೆಂಬಂತೆ ನಾವು ಬದುಕುತ್ತಿದ್ದೇವೆ. ಸಾಮಾಜಿಕ ನ್ಯಾಯ, ಆರ್ಥಿಕ ನ್ಯಾಯ, ರಾಜಕೀಯ ನ್ಯಾಯ. ಸಮಾನತೆ ಮತ್ತು ಸ್ವಾತಂತ್ರ್ಯ ಕೇವಲ ಪುಸ್ತಕಕಷ್ಟೇ ಸೀಮಿತವಾಗಿದೆ. ನಮಗೆ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ ಸಿಕ್ಕಿದೆಯಾ ಎಂಬ ಪ್ರಶ್ನೆ ಹಾಕಿಕೊಳ್ಳಬೇಕಿದೆ. ಅನ್ಯಾಯದ ವಿರುದ್ಧ ಯಾವಾಗ ಮಾತನಾಡಲು ಶುರು ಮಾಡುತ್ತೇವೆಯೋ ಆಗ ನ್ಯಾಯ ಜಯಸುತ್ತೇವೆಂದರ್ಥ ಎಂದು ಅಭಿಪ್ರಾಯಪಟ್ಟರು.

ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಅಸಮಾನತೆ ಈಗಲೂ ಇದೆ. ಸರ್ಕಾರಿ ಪ್ರಥಮ ಕಾಲೇಜು ಹಾಗೂ ಪ್ರತಿಷ್ಠಿತ ಕಾಲೇಜಿನಲ್ಲಿ ಓದಿ ಬರುವ ವಿದ್ಯಾರ್ಥಿಗಳನ್ನು ಅಕ್ಕಪಕ್ಕ ಕೂರಿಸಿದರೆ ಕನ್ನಡ ಮಾಧ್ಯಮದಲ್ಲಿ ಓದಿದ ಶಾಲೆಯ ಮಕ್ಕಳು ಚುರುಕಾಗಿರುವುದಿಲ್ಲ. ಸರ್ಕಾರವು ಸರ್ಕಾರಿ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ಒದಗಿಸುವ ಕೆಲಸ ಮಾಡುತ್ತಿಲ್ಲ. ಕೌಶಲ, ಮೂಲಭೂತ ಸೌಲಭ್ಯ ಒದಗಿಸುವ ಇಚ್ಛಾಶಕ್ತಿ ತೋರುತ್ತಿಲ್ಲ. ಹಾಗಾಗಿ ಒಳಗೆ ಕೂಪಮಂಡೂಕರಾಗಿ ವಿದ್ಯಾರ್ಥಿಗಳಿದ್ದು, ನಮ್ಮ ಪರಿಸರದ ಆಚೆಗಿನ ವಿಚಾರಗಳು,

ಅವಕಾಶಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಿಂದ ಸರ್ಕಾರದ ಗುಲಾಮರಾಗಿಬಿಡುತ್ತೇವೆ. ಯುವನಿಧಿ, ಗೃಹಲಕ್ಷ್ಮಿ ಯೋಜನೆಯಡಿ ಈಗ ನೀಡುತ್ತಿರುವ ಹಣ ಮುಂದೆ ಹತ್ತು ಪಟ್ಟಾಗಬಹುದು. ಆದರೆ ಅತ್ಯಂತ ಆಗರ್ಭ ಶ್ರೀಮಂತರಡಿ ಗುಲಾಮರಾಗಿಯೇ ಬದುಕುವಂಥ ಸ್ಥಿತಿ ಮುಂದುವರಿಯುತ್ತದೆ ಅಷ್ಟೇ. ಕರ್ನಾಟಕದ ಆಚೆ ಹೋದಾಗ ಕನ್ನಡಿಗ ಎಂದು ಗುರುತಿಸುತ್ತಾರೆ. ಇದು ನಮ್ಮ ಅಸ್ಮಿತೆ. ಭಾರತದ ದೇಶದ ಆಚೆ ಹೋದರೆ ಭಾರತೀಯ ಎಂದು ಗುರುತಿಸುತ್ತಾರೆ. ಇದನ್ನು ಮೀರಿ ವೈಯಕ್ತಿಕ ಸಾಧನೆ ಮಾಡಬೇಕು.

### ಅಸಮಾನತೆ ಹೋಗಲಾಡಿಸುವುದೇ ರಾಜಕಾರಣ: ಜಿಬಿವಿ

ರಾಜಕಾರಣವೆಂದರೆ ಕಾಲೆಳೆಯುವುದಲ್ಲ, ಸಮಾಜ ಸೇವೆ, ಅಭಿವೃದ್ಧಿ. ಅಸಮಾನತೆ ಹೋಗಲಾಡಿಸುವುದೇ ರಾಜಕೀಯದ ಮೂಲ ಉದ್ದೇಶ. ಈ ದೃಷ್ಟಿ ಇಟ್ಟುಕೊಂಡು ಬಂದ ನನಗೆ ಟಿಕೆಟ್ ಸಿಗಲಿಲ್ಲ ಎಂದು ಮನೆಯಲ್ಲಿ ಕೂರಲಿಲ್ಲ. ಸವಾಲು ಸ್ವೀಕರಿಸಿದೆ. ಇದಕ್ಕೆ ಕಾರಣ ನಾನು ಪಡೆದಂಥ ಶಿಕ್ಷಣ, ಪಡೆದ ಜ್ಞಾನ. ಪಕ್ಷೇತರನಾಗಿ ನಿಂತೆ. ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಅತಿ ಹೆಚ್ಚು ಮತ ಪಡೆದ ಪಕ್ಷೇತರ ಅಭ್ಯರ್ಥಿ ಎಂಬ ಹೆಗ್ಗಳಿಕೆ ಬಂತು. ಯಾವುದಕ್ಕೂ ಕುಗ್ಗಬೇಡಿ, ನಿರಂತರ ಪ್ರಯತ್ನ ಇರಲಿ ಎಂದು ಜಿ. ಬಿ. ವಿನಯ್ ಕುಮಾರ್ ಅವರು ಹೇಳಿದರು.

ದೇಶದ ಪ್ರತಿಯೊಂದು ರಾಜ್ಯಗಳಲ್ಲಿಯೂ ಇನ್ ಸೈಟ್ಸ್ ಸಂಸ್ಥೆಯಲ್ಲಿ ಓದಿದ 1700ಕ್ಕೂ ಹೆಚ್ಚು ಐಎಎಸ್, ಐಪಿಎಸ್, ಐಆರ್ ಎಸ್ ಅಧಿಕಾರಿಗಳಿದ್ದಾರೆ. ಸಾವಿರಾರು ವಿದ್ಯಾರ್ಥಿಗಳು ಕೆಎಎಸ್ ಪರೀಕ್ಷೆ ಬರೆದು ಯಶಸ್ವಿಯಾಗಿದ್ದಾರೆ. ಆಲೋಚನೆ, ದೊಡ್ಡ ಕನಸು ಕಾಣುವುದು, ಸವಾಲುಗಳನ್ನು ಸ್ವೀಕರಿಸುವುದು, ವ್ಯಕ್ತಿತ್ವ ರೂಪಿಸಿಕೊಳ್ಳುವುದು, ಉತ್ತಮ ಶಿಕ್ಷಣ ಪಡೆದರೆ ಯಶಸ್ಸು ಸಾಧ್ಯವಾಗುತ್ತದೆ ಎಂದು ತಿಳಿಸಿದ ಅವರು, ಈ ಕಾಲೇಜಿಗೆ 25 ಸಾವಿರ ರೂಪಾಯಿ ಪುಸ್ತಕಗಳನ್ನು ಗ್ರಂಥಾಲಯಕ್ಕೆ ಸ್ವಂತ ಖರ್ಚಿನಲ್ಲಿ ಕೊಡಿಸುವುದಾಗಿ ಭರವಸೆ ನೀಡಿದರು.

ಇದು ಸಾಧ್ಯವಾಗಬೇಕಾದರೆ ಐಎಎಸ್, ಉದ್ಯಮಿಗಳು, ರಾಜಕಾರಣದ ಯಶಸ್ಸು ಸೇರಿದಂತೆ ನಮ್ಮ ಸಾಮರ್ಥ್ಯದ ಮೇಲೆ ಗುರುತಿಸುವಂತಾಗಬೇಕು. ದಬ್ಬಾಳಿಕೆ ವಿರುದ್ಧ ಸಿಡಿದೇಳಬೇಕಾದರೆ ನಮ್ಮಲ್ಲಿನ ಶಕ್ತಿ, ಮೌಲ್ಯ ಹೆಚ್ಚಿಸಿಕೊಳ್ಳಬೇಕು. ಆಗ ಮಾತ್ರ ಶ್ರೀಮಂತರ ದುರಂಹಕಾರ ಕಡಿಮೆಯಾಗುತ್ತದೆ ಎಂದು ಜಿ. ಬಿ. ವಿನಯ್ ಕುಮಾರ್ ಅವರು ತಿಳಿಸಿದರು.

ವೇದಿಕೆಯಲ್ಲಿ ಕಾಲೇಜಿನ ಪ್ರಾಂಶುಪಾಲ ಶಿವಕುಮಾರ್, ಹೊನ್ನಾಳಿ ಹಿರಿಯ ಮುಖಂಡ ರಾಜು ಕಣಗಣ್ಣನವರ್, ಯುವ ಮುಖಂಡ ದಿಡಗೂರು ಸುದೀಪ್, ಅರ್ಥಶಾಸ್ತ್ರ ಅಧ್ಯಾಪಕ ರೇವಣಸಿದ್ದಪ್ಪ, ಅರ್ಥಶಾಸ್ತ್ರದ ಮುಖ್ಯಸ್ಥೆ ಡಾ. ನಮ್ರತಾ, ರಾಜ್ಯಶಾಸ್ತ್ರ ಅಧ್ಯಾಪಕ ಚಂದ್ರಪ, ಅಧ್ಯಾಪಕರಾದ ಗಿರೀಶ್, ನವೀನ್, ಗ್ರಂಥಪಾಲಕ ರಾಜಶೇಖರ ಹಾಗೂ ಕಾಲೇಜಿನ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಸ್ವಯಂ ಪ್ರೇರಿತ ರಕ್ತದಾನ ಶಿಬಿರ

# ರಕ್ತದಾನ ಶ್ರೇಷ್ಠದಾನ, ಜನರ ಬಾಳಿಗೆ ಆಶಾಕಿರಣವಾಗಿ : ಡಾ; ಷಣ್ಮುಖಪ್ಪ



**ದಾವಣಗೆರೆ :** ರಕ್ತದಾನ ಶ್ರೇಷ್ಠದಾನ. ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡುವ ಮೂಲಕ ಸಂಕಷ್ಟದಲ್ಲಿರುವ ಜನರ ಬಾಳಿಗೆ ಆಶಾಕಿರಣವಾಗಿ ಇತರರಿಗೆ ಮಾದರಿಯಾಗಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಷಣ್ಮುಖಪ್ಪ ಹೇಳಿದರು.

ಮಂಗಳವಾರ (ಅ.14) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಆರೋಗ್ಯ ಮತ್ತು ಇಲಾಖೆ, ರಕ್ತ ಕೇಂದ್ರ, ಸಿ.ಜಿ ಆಸ್ಪತ್ರೆ ಮತ್ತು ಜಿಲ್ಲೆಯ ವಿವಿಧ ರಕ್ತ ಕೇಂದ್ರಗಳು, ಎನ್.ಎಸ್.ಎಸ್, ಎನ್.ಸಿ.ಸಿ. ಮತ್ತು ಆರ್.ಆರ್.ಸಿ. ಕಾಲೇಜು ಸಹಯೋಗದೊಂದಿಗೆ ನಗರದ ಬಿ.ಇ.ಎ ಶಿಕ್ಷಣ ಮಹಾವಿದ್ಯಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದ್ದು, ಎಲ್ಲಾ ಬ್ಲಡ್ ಬ್ಯಾಂಕ್‌ಗಳು ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ರಕ್ತದ ಶಿಬಿರ ಹಾಗೂ ರಕ್ತದಾನದ ಕುರಿತು ಜಾಗೃತಿ ಮೂಡಿಸಬೇಕು. ಹಿಮೋಗ್ಲೋಬಿನ್ ಪ್ರಮಾಣ 12 ಗ್ರಾಂ ಗಿಂತ ಹೆಚ್ಚಿರುವವರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬಹುದು ಎಂದರು. ಇತ್ತೀಚಿನ ದಿನಗಳಲ್ಲಿ ಅಪಘಾತ ಹಾಗೂ ಮಹಿಳೆಯರ ಹೆರಿಗೆ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿರುವುದರಿಂದ ಜನರು ವರ್ಷಕ್ಕೆ ಒಮ್ಮೆಯಾದರೂ ರಕ್ತದಾನ ಮಾಡಿ ಜೀವ ಉಳಿಸುವಲ್ಲಿ ಸಹಕಾರಿಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಸ್ವಯಂ ಪ್ರೇರಿತರಾಗಿ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿದ ರಕ್ತದಾನಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

**ಜಾಗೃತಿ ಜಾಥಾ:** ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನಾಚರಣೆಯ ಅಂಗವಾಗಿ ರಕ್ತದಾನ ಜಾಗೃತಿ ಜಾಥಕ್ಕೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾದವ್ ವಿಠ್ಠಲ್ ರಾವ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ರಕ್ತ ನೀಡಿ ಭರವಸೆ ನೀಡಿ, ಜೊತೆಯಾಗಿ ನಾವು ಜೀವ ಉಳಿಸೋಣ ಎಂಬ ಘೋಷ ವಾಕ್ಯದೊಂದಿಗೆ ಜಾಥಾವು ಬಿ.ಇ.ಎ ಮಹಾವಿದ್ಯಾಲಯ ಶಾಲೆಯಿಂದ ಸಾಗಿ ರಿಂಗ್ ರೋಡ್, ಅಮೃತ ವಿದ್ಯಾಲಯ ಶಾಲೆ ಮೂಲಕ ಬಿ.ಇ.ಎ ಶಾಲೆಗೆ ಬಂದು ಸೇರಿತು.

ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕ ಡಾ. ನಾಗೇಂದ್ರಪ್ಪ ಎಂ ಬಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಪಿ.ಡಿ ಮುರುಳೀಧರ್, ಬಿ.ಇ.ಎ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರರಾದ ಡಾ.ಎ.ಜೆ ನೀತಾ, ಸಹಾಯಕ ಪ್ರಾಧ್ಯಾಪಕರಾದ ಮುರುಗೇಶ್.ಕೆಐಸಿಟಿಸಿ ಕೇಂದ್ರದ ಅಪ್ತ ಸಮಾಲೋಚಕರಾದ ಬಿ.ಡಿ ಮಹೇಂದ್ರಪ್ಪ, ಡಾ. ಬಾರ್ಕಿ, ಉಪಸ್ಥಿತರಿದ್ದರು.

## ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ

# ನ. 3 ರಂದು ನಡೆಯುವ ಕಾರ್ಯಕ್ರಮದ ವ್ಯವಸ್ಥಿತ ಆಯೋಜನೆಗೆ ಸೂಚನೆ; ಡಿಸಿ ಗಂಗಾಧರಸ್ವಾಮಿ

**ದಾವಣಗೆರೆ :** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡ 50 ವರ್ಷಗಳಾದ ಹಿನ್ನಲೆಯಲ್ಲಿ ಸುವರ್ಣ ಮಹೋತ್ಸವ ಅಂಗವಾಗಿ ಪರಿಸರ ಸಂರಕ್ಷಣೆ ಕುರಿತಂತೆ ವ್ಯಾಪಕ ಜಾಗೃತಿ ಮೂಡಿಸಲು ಕಾರ್ಯಕ್ರಮವನ್ನು ನವೆಂಬರ್ 3 ರಂದು ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗುತ್ತಿದ್ದು ವ್ಯವಸ್ಥಿತವಾಗಿ ಕಾರ್ಯಕ್ರಮ ಆಯೋಜನೆಗೆ ಸಿದ್ದತೆ ನಡೆಸುವಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ. ಎಂ. ಗಂಗಾಧರವಾಸ್ವಾಮಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ವಿಶ್ವಪರಿಸರ ದಿನಚರಣೆ ಅಂಗವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡ 50 ವರ್ಷಗಳಾದ ಹಿನ್ನಲೆಯಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸಲಾಗುವುದು. ಕಾರ್ಯಕ್ರಮಕ್ಕೆ ಸುಮಾರು 6 ರಿಂದ 7 ಸಾವಿರ ಜನ ಸೇರುವ ನಿರೀಕ್ಷೆ ಇದೆ. ಸೇರಿದ ಜನತೆಗೆ ಬೇಕಾದ ಆಸನ ವ್ಯವಸ್ಥೆ, ನೆರಳು, ನೀರು, ಆಹಾರ ವ್ಯವಸ್ಥೆ ಸೇರಿದಂತೆ ಯಾವುದೇ ರೀತಿಯ ಕೊರತೆ ಆಗದಂತೆ ಅಗತ್ಯ ಮೂಲ ಸೌಲಭ್ಯ ಒದಗಿಸಬೇಕು.

ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿಸಲು ಹಲವಾರು ಕಾರ್ಯಕ್ರಮ ಆಯೋಜಿಸಲಾಗಿದೆ.



ಸಾಗರ ಮಿತ್ರ ಅಭಿಯಾನದಡಿ ಎಲ್ಲಾ ಶಾಲೆಯ ಮಕ್ಕಳಿಗೂ ಪ್ಲಾಸಿಕ್ ಬಳಕೆ ಕುರಿತು ಜಾಗೃತಿ ಮೂಡಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಸಾಗರ ಮಿತ್ರ ಅಭಿಯಾನದ ವಿನೋದ್ ದಾಬೋಲ್ಕರ್ ಅವರನ್ನು ಆಹ್ವಾನಿಸಿ ಕಾಲೇಜಿನ ವಿದ್ಯಾರ್ಥಿಗಳಿಗೆ ಮತ್ತಷ್ಟು ಪರಿಸರ ಜಾಗೃತಿ ಮೂಡಿಸುವ ಕಾರ್ಯಕ್ರಮ ಮಾಡಲಾಗುತ್ತದೆ ಎಂದರು.

ಇತ್ತೀಚೆಗೆ ಜಿಲ್ಲೆಯ ಕುಂದುವಾಡ ಕೆರೆಯಲ್ಲಿ ಸ್ವಚ್ಛತಾ ಕಾರ್ಯ ನಡೆಸಲಾಯಿತು. ಆದರೆ ಕೆಲವು ಪುಂಡರ ಹಾವಳಿಯಿಂದ ಕುಡುಕರ ಅಡ್ಡೆಯಾಗಿ ಮಾರ್ಪಾಟಾಗಿದೆ ಎಂದು ಬೇಸರ ವ್ಯಕ್ತಪಡಿಸಿ, ಇಂತಹ ಕಾರ್ಯಕ್ರಮಗಳಿಗೆ ಸಾರ್ವಜನಿಕರು, ರೈತರು, ಸಾಮಾಜಿಕ ಮತ್ತು ಪರಿಸರ ಬಗ್ಗೆ ಕಳಕಳಿ ಇರುವವರನ್ನು ಬಳಸಿಕೊಳ್ಳುವುದರ ಮೂಲಕ ಪರಿಸರದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವುದರೊಂದಿಗೆ ಭವಿಷ್ಯದ ಪೀಳಿಗೆಗೆ ಉತ್ತಮ ಪರಿಸರದ ಕೊಡುಗೆ ನೀಡಬೇಕಿದೆ. ಈ ಮೂಲಕ ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತವಾಗಿಸಲು ಕೆಲಸ ಮಾಡಬೇಕಾಗಿದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ಡಿಡಿಪಿಐ ಕೊಟ್ರೇಶ್, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ ರಾಜಶೇಖರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಅ.19-20: ದೇವೀರಮ್ಮ ಜಾತ್ರೋತ್ಸವಕ್ಕೆ ಕೆಎಸ್ಸಾರ್ಟಿಸಿ ಬಸ್ ವ್ಯವಸ್ಥೆ

**ಚಿಕ್ಕಮಗಳೂರು, ಅ.15:** ಬಿಂಡಿಗಾ ಮಲ್ಲೇನಹಳ್ಳಿ ಆದಿಶಕ್ತ್ಯಾತ್ಮಕ ಶ್ರೀ ದೇವೀರಮ್ಮನವರ ಜಾತ್ರೆ ಪ್ರಯುಕ್ತ ಅಕ್ಟೋಬರ್ 19 ಮತ್ತು 20 ರಂದು ನಗರ ಬಸ್ ನಿಲ್ದಾಣದಿಂದ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ವಿಶೇಷ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು

ನಿಗಮದ ಚಿಕ್ಕಮಗಳೂರು ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಸ್ವಂತ ವಾಹನಗಳನ್ನು ಜಾತ್ರೆ ಮತ್ತು ಚಿಕ್ಕಮಗಳೂರಿಗೆ ಬರಲು ಬಳಸದೆ ನಿಗಮದ ಬಸ್‌ಗಳಲ್ಲಿ ಪ್ರಯಾಣಿಸುವ ಮೂಲಕ ಹಾಗೂ ಸಾಮೂಹಿಕ ಸಾರಿಗೆ ವ್ಯವಸ್ಥೆಯನ್ನು ಬಳಸುವ ಮೂಲಕ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಬೇಕೆಂದು ಅವರು ಕೋರಿದ್ದಾರೆ.

ಚಿಕ್ಕಮಗಳೂರು ನಗರದಿಂದ ಕಡೂರು, ಬೀರೂರು, ತರೀಕೆರೆ, ಹಾಸನ, ಬೇಲೂರು, ಮೂಡಿಗೆರೆ, ಆಲ್ದೂರು, ಶೃಂಗೇರಿ ಕಡೆಗೆ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಲಾಗಿದೆ. ಸಾರ್ವಜನಿಕರು ಬಸ್‌ಗಳ ವ್ಯವಸ್ಥೆಯನ್ನು ಸದುಪಯೋಗಪಡಿಸಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

## ಅ.17 ಮೆಸ್ಕಾಂ ಜನಸಂಪರ್ಕ ಸಭೆ

**ಚಿಕ್ಕಮಗಳೂರು, ಅ.15:** ಮೆಸ್ಕಾಂ ನಗರ ಉಪವಿಭಾಗದಲ್ಲಿ ಅಕ್ಟೋಬರ್ 17 ರಂದು ಬೆಳಿಗ್ಗೆ 11 ಗಂಟೆಗೆ ಜನ ಸಂಪರ್ಕ ಸಭೆಯನ್ನು ಆಯೋಜಿಸಲಾಗಿದ್ದು, ಸಾರ್ವಜನಿಕರು ನಗರ ಉಪವಿಭಾಗಕ್ಕೆ ಸಂಬಂಧಿಸಿದ ವಿದ್ಯುತ್ ಸಮಸ್ಯೆಗಳ ಅಹವಾಲು ಸಲ್ಲಿಸಬಹುದು. ಈ ಸಭೆಯಲ್ಲಿ ಮೆಸ್ಕಾಂನ ಹಿರಿಯ ಅಧಿಕಾರಿಗಳು ಖುದ್ದು ಹಾಜರಿರಲಿದ್ದಾರೆ ಎಂದು ಮೆಸ್ಕಾಂ ನಗರ ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ನಿಲುಗಡೆ

**ಚಿಕ್ಕಮಗಳೂರು, ಅ.15:** ಚಿಕ್ಕಮಗಳೂರು ಗ್ರಾಮೀಣ ಉಪವಿಭಾಗದ ವ್ಯಾಪ್ತಿಯಲ್ಲಿ ಬರುವ 220/66/11 ಕೆ.ವಿ. ಮುಗುಳುವಳ್ಳಿ ಸ್ವೀಕರಣ ಕೇಂದ್ರದಿಂದ ಹೊರ ಹೊಮ್ಮುವ 66 ಕೆ.ವಿ.ಕಳಸಾಪುರ ಮಾರ್ಗದ ತುರ್ತು ನಿರ್ವಹಣೆಯನ್ನು ಹಮ್ಮಿಕೊಂಡಿರುವುದರಿಂದ ಈ ಕೇಂದ್ರದಿಂದ ಹೊರಹೊಮ್ಮುವ ಎಲ್ಲ 11 ಕೆ.ವಿ. ಫೀಡರ್‌ಗಳಿಗೆ ಅಕ್ಟೋಬರ್ 16 ರಂದು ವಿದ್ಯುತ್ ಪೂರೈಕೆಯಾಗುವುದಿಲ್ಲ. ಈ ಫೀಡರ್‌ಗಳ ವ್ಯಾಪ್ತಿಗೆ ಬರುವ ಕಳಸಾಪುರ, ಕುನ್ನಾಳು, ಕಣಿವೆಹಳ್ಳಿ, ಗಾಳಿಹಳ್ಳಿ, ದೇವಗೊಂಡನಹಳ್ಳಿ, ಬೆಳವಾಡಿ, ಈಶ್ವರಹಳ್ಳಿ, ಸಿಂದಿಗೆರೆ, ಮಾಚೇನಹಳ್ಳಿ ಮತ್ತು ಕೆ.ಬಿ.ಹಾಳ್ ಗ್ರಾಮಗಳು ಒಳಪಡಲಿದ್ದು, ಅಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ನಿಲುಗಡೆಯಾಗಲಿದೆ ಎಂದು ಮೆಸ್ಕಾಂ ಗ್ರಾಮೀಣ ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೆಲಹಾಸುಗಳಿಗೆ ಶೇ.50ರ ಸಹಾಯ ಧನ

**ಚಿಕ್ಕಮಗಳೂರು :** 2025-26ನೇ ಸಾಲಿನಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ರಬ್ಬರ್ ನೆಲಹಾಸುಗಳನ್ನು ಶೇ.50ರ ಸಹಾಯ ಧನ ಮತ್ತು ಶೇ.50ರಷ್ಟು ಫಲಾನುಭವಿ ವಂತಿಕೆಯೊಂದಿಗೆ ನೀಡುವ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಬಡತನ ರೇಖೆಗಿಂತ ಕೆಳಗಿರುವ ಭೂರಹಿತ ಕೃಷಿ ಕಾರ್ಮಿಕ ಮಹಿಳೆಯರು, ಅಲ್ಪಸಂಖ್ಯಾತರು, ವಿಕಲಚೇತನರು, ವಿಧವೆಯರು, ದೇವದಾಸಿಯರು ಮತ್ತು ಸಂಕಷ್ಟಕ್ಕೊಳಗಾದ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು, ಆಸಕ್ತರು ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸೂಕ್ತ ದಾಖಲಾತಿಗಳೊಂದಿಗೆ ಅಕ್ಟೋಬರ್ 31 ರೊಳಗಾಗಿ ಕಚೇರಿ ವೇಳೆಯಲ್ಲಿ ತಾಲ್ಲೂಕಿನ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ತಾಲ್ಲೂಕು ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕರುಗಳನ್ನು (ಚಿಕ್ಕಮಗಳೂರು 08262-295319, ಕಡೂರು 94486-65567, ಕೊಪ್ಪ 87627-31755, ಮೂಡಿಗೆರೆ 94804-05304, ನ.ರಾ.ಪುರ 90086-25655, ಶೃಂಗೇರಿ 94486-28780, ತರೀಕೆರೆ 94485-71800, ಅಜ್ಜಂಪುರ 94497-05674 ಹಾಗೂ ಕಳಸ 94804-05304) ಸಂಪರ್ಕಿಸಬಹುದು ಎಂಣದು ಪಶುಪಾಲನಾ ಮತ್ತು ಪಶು ವೈದ್ಯಸೇವಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಡಳಿತದಿಂದ ರಾಜ್ಯೋತ್ಸವ ಆಚರಣೆಗೆ ಸಿದ್ಧತೆ: ಜಿಲ್ಲಾಧಿಕಾರಿ

**ಚಿಕ್ಕಮಗಳೂರು, ಅ.15:** ನವೆಂಬರ್ 1 ರಂದು ಜಿಲ್ಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ಆಕರ್ಷಕವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ಕನ್ನಡ ರಾಜ್ಯೋತ್ಸವ ಆಚರಿಸುವ ಸಂಬಂಧ ಕರೆಯಲಾಗಿದ್ದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನವೆಂಬರ್ 1 ರಂದು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ನಗರದ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ನಡೆಯಲಿದ್ದು, ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವ ಸಂದೇಶ ನೀಡಲಿದ್ದಾರೆ. ಸಮಾರಂಭದಲ್ಲಿ ಪೊಲೀಸ್, ಅಬಕಾರಿ, ಅರಣ್ಯ, ಗೃಹರಕ್ಷಕದಳ, ಎನ್‌ಸಿಸಿ, ಸ್ಕೌಟ್ ಮತ್ತು ಗೈಡ್ಸ್, ಸೇವಾದಳ ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳಿಂದ ಪಥ ಸಂಚಲನ ನಡೆಯಲಿದೆಯಲ್ಲದೆ, ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು



ಜರುಗಲಿವೆ ಎಂದರು. ಅಂದು ಬೆಳಿಗ್ಗೆ 7.30 ಗಂಟೆಗೆ ನಗರದ ತಹಸೀಲ್ದಾರ್ ಕಚೇರಿ ಆವರಣದಿಂದ ಎಂ.ಜಿ. ರಸ್ತೆ ಮೂಲಕ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದವರೆಗೆ ಸ್ತಬ್ಧ ಚಿತ್ರಗಳ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ನಾಡಿನ ಸಾಂಸ್ಕೃತಿಕ ಹಾಗೂ ಚಾರಿತ್ರಿಕ ಹಿನ್ನೆಲೆಯುಳ್ಳ ಸ್ತಬ್ಧ ಚಿತ್ರಗಳನ್ನು ವಿದ್ಯಾರ್ಥಿಗಳಿಂದ ತಯಾರಿಸಿ ಮೆರವಣಿಗೆಯಲ್ಲಿ ಭಾಗವಹಿಸುವಂತೆ ಹಾಗೂ ವಿವಿಧ ಇಲಾಖೆಗಳಿಂದ ಆಯಾ ಇಲಾಖೆಗಳ ಯೋಜನೆಗಳನ್ನು ಬಿಂಬಿಸುವ ಸ್ತಬ್ಧ ಚಿತ್ರಗಳನ್ನು ಇಲಾಖಾ ವತಿಯಿಂದ ತಯಾರಿಸಿ ಮೆರವಣಿಗೆಯಲ್ಲಿ ಭಾಗವಹಿಸುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ಅಂದು ಸಂಜೆ 6 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದ ಅವರು, ರಾಜ್ಯೋತ್ಸವ ದಿನದಂದು ನಗರದಾದ್ಯಂತ ಹಬ್ಬದ ವಾತಾವರಣವನ್ನು ಸೃಜಿಸುವ ನಿಟ್ಟಿನಲ್ಲಿ ಎಲ್ಲಾ ಸರ್ಕಾರಿ ಕಟ್ಟಡಗಳ ಮೇಲೆ ದೀಪಾಲಂಕಾರವನ್ನು ಆಯಾ ಇಲಾಖಾಧಿಕಾರಿಗಳು ಸ್ವಯಂಪ್ರೇರಿತವಾಗಿ ಕಚೇರಿ ವತಿಯಿಂದ ಮಾಡುವಂತೆ ತಿಳಿಸಿ, ಖಾಸಗಿ ಕಟ್ಟಡಗಳು, ಅಂಗಡಿ ಮುಂಗಟ್ಟುಗಳಲ್ಲಿಯೂ ಸಹ ಅಭಿಮಾನಪೂರ್ವಕವಾಗಿ ಸ್ವಪ್ರೇರಣೆಯಿಂದ ದೀಪಾಲಂಕಾರವನ್ನು ಮಾಡಿ ಹಬ್ಬದ ವಾತಾವರಣ ಮೂಡಿಸುವಂತೆ ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ದೀಪಾಲಂಕಾರ ಮಾಡಬೇಕೆಂದು ತಿಳಿಸಿದರು.

ಎಲ್ಲಾ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಕನ್ನಡ ರಾಜ್ಯೋತ್ಸವದಲ್ಲಿ ಭಾಗವಹಿಸುವಂತೆ ಸೂಚಿಸಿದರು. ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಅಪರ ಜಿಲ್ಲಾಧಿಕಾರಿ ನಾರಾಯಣ ರಡ್ಡಿ ಕನಕರಡ್ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿ.ರಮೇಶ್, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

# ಖಾತೆ ಪರಿವರ್ತನೆ ಆನ್‌ಲೈನ್‌ಗೆ ಡಿ.ಕೆ.ಶಿವಕುಮಾರ್ ಚಾಲನೆ

**ಬೆಂಗಳೂರು:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಬಿ ಖಾತಾ ನಿವೇಶನ ಮಾಲೀಕರಿಗೆ ಬಿ ಖಾತಾದಿಂದ ಎ ಖಾತಾಗೆ ಪರಿವರ್ತನೆ ಮತ್ತು ಹೊಸ ನಿವೇಶನಗಳಿಗೂ ಎ ಖಾತಾ ನೀಡಲು ಹೊಸದಾಗಿ ಜಾರಿಗೊಳಿಸಿರುವ ಆನ್‌ಲೈನ್ ವ್ಯವಸ್ಥೆಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ಚಾಲನೆ ನೀಡಿದರು.

ವಿಧಾನಸೌಧದದ ಸಮ್ಮೇಳನ ಸಭಾಂಗಣದಲ್ಲಿಂದು ಆನ್‌ಲೈನ್ ತಂತ್ರಾಂಶಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಬಿ ಖಾತಾವನ್ನು ಎ ಖಾತಾವನ್ನು ಮಾಡಲು ಐತಿಹಾಸಿಕ ಕಾರ್ಯಕ್ರಮವಾಗಿದ್ದು ಇದೊಂದು ಕ್ರಾಂತಿಕಾರಿ ಬದಲಾವಣೆಯೆಂದು ಬಣ್ಣಿಸಿದರು.




ಬೆಂಗಳೂರಲ್ಲಿ 7.5 ಲಕ್ಷ ಎ ಖಾತಾ ಆಸ್ತಿಗಳಿವೆ, 7.5 ಬಿ ಖಾತೆ ಆಸ್ತಿಗಳಿವೆ. ಈ ಆಸ್ತಿಯನ್ನು ಕಾಪಾಡಿಕೊಳ್ಳಲು ಕ್ರಾಂತಿಕಾರಿ ಬದಲಾವಣೆ ಮಾಡಿದ್ದೇವೆ. ಇಡೀ ದೇಶದಲ್ಲಿ ಯಾರು ಸಹ ಇಂತಹ ದೊಡ್ಡ ಹೆಜ್ಜೆಯಿಟ್ಟಿಲ್ಲ. ಈ ಕ್ರಮಕ್ಕೆ ಪ್ರಧಾನಿ ಮೋದಿಯವರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಕೆಟಿಸಿಪಿ ಕಾಯ್ದೆ 1961ರಡಿಯಲ್ಲಿ ಅನುಮೋದನೆಗಳಿಲ್ಲದೆ ಕೃಷಿ ಭೂಮಿಯನ್ನು ಕಂದಾಯ ನಿವೇಶನಗಳಿಗೆ ಬಿ ಖಾತಾ ಕೊಟ್ಟಿದ್ದಾರೆ. ಇವುಗಳನ್ನು ಎ ಖಾತಾಗೆ ದಾಖಲೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ನವೆಂಬರ್ 1 ರಿಂದ 100 ದಿನಗಳ ಕಾಲ ಅವಕಾಶ ಕಲ್ಪಿಸಲಾಗಿದ್ದು, ಇದಕ್ಕೆ 500 ರೂ. ಆರಂಭಿಕ ಶುಲ್ಕವನ್ನು ಆನ್‌ಲೈನ್ ಅರ್ಜಿ ಮೂಲಕ ಸಲ್ಲಿಸಬೇಕು ಎಂದು ಹೇಳಿದರು. ಹೊಸ ನಿವೇಶನಗಳಿಗೂ ಎ-ಖಾತಾ ಲಭ್ಯವಾಗುವಂತೆ ಹೊಸದಾಗಿ ಆನ್ ಲೈನ್ ವ್ಯವಸ್ಥೆ ಜಾರಿ ಮಾಡಲಾಗಿದೆ.

ಇದರಿಂದಾಗಿ ಬೆಂಗಳೂರು ನಗರದಲ್ಲಿ ಇನ್ನು ಮುಂದೆ ಬಿ ಖಾತಾ ಆಸ್ತಿಗಳನ್ನು ಎ ಖಾತಾ ಆಸ್ತಿಗಳಾಗಿ ಪರಿವರ್ತನೆ ಮಾಡಿಕೊಳ್ಳಬಹುದಾಗಿದೆ.


ರಾಜ್ಯ ಸರ್ಕಾರ ಹಾಗೂ ಜಿಬಿಎ ನಿಗದಿಪಡಿಸಿರುವ ನಿಯಮಗಳನ್ನು ಪಾಲಿಸಬೇಕು ಹಾಗೂ ಅಗತ್ಯ ಶುಲ್ಕ ಪಾವತಿಸಿ ಬಿ ಖಾತಾದಿಂದ ಎ ಖಾತಾ ಬದಲಾವಣೆ ಕೋರಿ ಅರ್ಜಿಯನ್ನು ತಂತ್ರಾಂಶದಲ್ಲಿ ಸಲ್ಲಿಸಬೇಕು.

# ನಿರ್ಭಯದಿಂದ ಮುನ್ನಡೆದರೆ ಜೀವನದಲ್ಲಿ ಯಶಸ್ಸು ಪಡೆಯಲು, ನಾಯಕರಾಗಲು ಸಾಧ್ಯ: ಜಿ. ಬಿ. ವಿನಯ್ ಕುಮಾರ್ ಅಭಿಮತ

**ದಾವಣಗೆರೆ:** ದೇಶದಲ್ಲಿ ಭಯ ಇದ್ದರೆ ದೂರ ಉಳಿದುಬಿಡುತ್ತೇವೆ. ನೇರವಾಗಿ ಎದುರಿಸುವ ಬೆಳೆಸುವ ಶಕ್ತಿ ಬೆಳೆಸಿಕೊಂಡಿಲ್ಲ. ಇದು ದುರಂತ. ನಿರ್ಭಯದಿಂದ ಸಾಧನೆಯತ್ತ ಮುನ್ನಡೆದರೆ ಬದುಕಿನಲ್ಲಿ ನಾಯಕರಾಗಲು ಮತ್ತು ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ. ಗೆಲ್ಲುವವರೆಗೆ ನಿರಂತರ ಪ್ರಯತ್ನ ಇರಬೇಕು. ಸವಾಲಾಗಿ ತೆಗೆದುಕೊಂಡು ಮುನ್ನಡೆದವರು ಇಂದು ಪ್ರತಿಯೊಂದು ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಿದ್ದಾರೆ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ತಿಳಿಸಿದರು.

ದಾವಣಗೆರೆ ಜಿಲ್ಲೆಯ ಹೊನ್ನಾಳಿ – ನ್ಯಾಮತಿ ಅವಳಿ ತಾಲೂಕಿನ ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜಿನ ವತಿಯಿಂದ ಬಿ.ಕಾಂ, ಬಿ.ಎ ಮತ್ತು ಬಿ.ಸಿ.ಎ ವಿಭಾಗದ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ನಿರಂತರ ಕಲಿಕೆ, ಶಿಕ್ಷಣ, ಜ್ಞಾನ ತುಂಬಾನೇ ಮುಖ್ಯ ಎಂದು ಪ್ರತಿಪಾದಿಸಿದರು.

ದಿನಕ್ಕೆ 2 ಗಂಟೆಗಳವರೆಗೆ ಇಂಗ್ಲೀಷ್ ಪದ ಕಲಿಯಲು ಶುರು ಮಾಡಿ. ಏಕಾಗ್ರತೆ, ತನ್ಮಯತೆಯಿಂದ ಕಲಿತರೆ ಇಂಗ್ಲೀಷ್ ಭಾಷೆಯಲ್ಲಿ ಪರಿಣಿತರಾಗುವುದು ಖಚಿತ. ಮೂರು ಸಾವಿರ ಇಂಗ್ಲೀಷ್ ಪದಗಳನ್ನು ಕಲಿತರೆ ನೀವು ಇಂಗ್ಲೀಷ್ ಮಾಧ್ಯಮದವರಿಗಿಂತ ಹೆಚ್ಚು ಬುದ್ಧಿಶಾಲಿಯಾಗುತ್ತೀರಿ. ಇದು ಉತ್ಪ್ರೇಕ್ಷೆಯಲ್ಲ. ಇಂಗ್ಲೀಷ್ ಕಲಿಯಲು, ಬರೆಯುವ ಪ್ರಯತ್ನ ಮಾಡಲು ಹೋಗಲ್ಲ. ಇದೇ ನಮ್ಮ ಸಮಸ್ಯೆ. ಭಯದಿಂದಲೇ ನಮಗೆ ಏಕೆ ಬೇಕೆಂದು ದೂರ ಉಳಿಯಬಾರದು. ಧೈರ್ಯದಿಂದ ಮುನ್ನುಗ್ಗಬೇಕು ಎಂದು ಕರೆ ನೀಡಿದರು.



ಬದುಕಿನಲ್ಲಿ ಕಷ್ಟ ಎಂದು ಕೈಕಟ್ಟಿ ಕುಳಿತುಕೊಂಡರೆ ಅಡಿಯಾಳಾಗಿ ಉಳಿದುಬಿಡುತ್ತೇವೆ. ತಂತ್ರಜ್ಞಾನಕ್ಕೆ ತಕ್ಕಂತೆ ಬುದ್ಧಿಮಟ್ಟ ಬೆಳೆಸಿಕೊಳ್ಳದಿದ್ದರೆ ಮನುಷ್ಯರ ಗುಲಾಮರಾಗಲ್ಲ. ಯಂತ್ರಗಳ ಗುಲಾಮರಾಗುತ್ತೇವೆ. ಇಷ್ಟು ವರ್ಷಗಳ ಕಾಲ ನಾವು ತಂತ್ರಜ್ಞಾನ ನಿಯಂತ್ರಣ ಮಾಡುತ್ತಿದ್ದೆವು. ಕಂಪ್ಯೂಟರ್ ಆಚೆ ಹೊರ ಬಂದು ಮನುಷ್ಯನ ಬುದ್ಧಿ, ಸಾಮರ್ಥ್ಯ ಮೀರಿದಂಥ ತಂತ್ರಜ್ಞಾನ ಈಗ ಬೆಳೆದಿದೆ. ರೊಬೊ ಎಲ್ಲಾ ಕೆಲಸವನ್ನೂ ಮಾಡುತ್ತವೆ. ಕೃಷಿ ಕ್ಷೇತ್ರಕ್ಕೂ ಕಾಲಿಡಲಿದೆ. ಮನುಷ್ಯಕ್ಕಿಂತ ಜಾಸ್ತಿ ರೊಬೊಟ್ಸ್ ಕೆಲಸ ಮಾಡುತ್ತವೆ. ಇನ್ನು ಮುಂದಿನ ಕೇವಲ ಹತ್ತು ವರ್ಷದಲ್ಲಿ ರೊಬೊಟ್ ಮೇಲೆ ನಾವೆಲ್ಲರೂ ಅವಲಂಬಿತರಾಗಿಬಿಡುತ್ತೇವೆ. ಅಮೆರಿಕಾದಲ್ಲಿ ಇದು ಆಗುತ್ತಿದೆ. ಇದು ವಾಸ್ತವ. ಶಿಕ್ಷಣದ ಪಠ್ಯಪುಸ್ತಕ, ಪಠ್ಯೇತರ ಪುಸ್ತಕಗಳು, ಕಲೆ, ಸಾಹಿತ್ಯ ಸೇರಿದಂತೆ ಇತರೆ

ಪುಸ್ತಕಗಳನ್ನು ಓದಿ ಪ್ರಪಂಚದ ಜ್ಞಾನ ತಿಳಿದುಕೊಳ್ಳಿ. ಕಾಲಕ್ಕೆ ತಕ್ಕಂತೆ ನಾವು ಬದಲಾಗಬೇಕು. ಯಾವ್ಯಾವ ಸಂದರ್ಭದಲ್ಲಿ ಏನು ಮಾಡಬೇಕೆಂಬ ಬಗ್ಗೆ ಈಗಿನಿಂದಲೇ ಚಿಂತಿಸಬೇಕು ಎಂದು ಕರೆ ನೀಡಿ-ದರು.

ಸಂವಿಧಾನ ಪೀಠಿಕೆಯಲ್ಲಿನ ಅಂಶಗಳು ನಮಗೆ ಸಂಬಂಧವೇ ಇಲ್ಲವೆಂಬಂತೆ ನಾವು ಬದುಕುತ್ತಿದ್ದೇವೆ. ಸಾಮಾಜಿಕ ನ್ಯಾಯ, ಆರ್ಥಿಕ ನ್ಯಾಯ, ರಾಜಕೀಯ ನ್ಯಾಯ. ಸಮಾನತೆ ಮತ್ತು ಸ್ವಾತಂತ್ರ್ಯ ಕೇವಲ ಪುಸ್ತಕಕಷ್ಟೇ ಸೀಮಿತವಾಗಿದೆ. ನಮಗೆ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ ಸಿಕ್ಕಿದೆಯಾ ಎಂಬ ಪ್ರಶ್ನೆ ಹಾಕಿಕೊಳ್ಳಬೇಕಿದೆ. ಅನ್ಯಾಯದ ವಿರುದ್ಧ ಯಾವಾಗ ಮಾತನಾಡಲು ಶುರು ಮಾಡುತ್ತೇವೆಯೋ ಆಗ ನ್ಯಾಯ ಜಯಸುತ್ತೇವೆಂದರ್ಥ ಎಂದು ಅಭಿಪ್ರಾಯಪಟ್ಟರು.

ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಅಸಮಾನತೆ ಈಗಲೂ ಇದೆ. ಸರ್ಕಾರಿ ಪ್ರಥಮ ಕಾಲೇಜು ಹಾಗೂ ಪ್ರತಿಷ್ಠಿತ ಕಾಲೇಜಿನಲ್ಲಿ ಓದಿ ಬರುವ ವಿದ್ಯಾರ್ಥಿಗಳನ್ನು ಅಕ್ಕಪಕ್ಕ ಕೂರಿಸಿದರೆ ಕನ್ನಡ ಮಾಧ್ಯಮದಲ್ಲಿ ಓದಿದ ಶಾಲೆಯ ಮಕ್ಕಳು ಚುರುಕಾಗಿರುವುದಿಲ್ಲ. ಸರ್ಕಾರವು ಸರ್ಕಾರಿ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ಒದಗಿಸುವ ಕೆಲಸ ಮಾಡುತ್ತಿಲ್ಲ. ಕೌಶಲ, ಮೂಲಭೂತ ಸೌಲಭ್ಯ ಒದಗಿಸುವ ಇಚ್ಛಾಶಕ್ತಿ ತೋರುತ್ತಿಲ್ಲ. ಹಾಗಾಗಿ ಒಳಗೆ ಕೂಪಮಂಡೂಕರಾಗಿ ವಿದ್ಯಾರ್ಥಿಗಳಿದ್ದು, ನಮ್ಮ ಪರಿಸರದ ಆಚೆಗಿನ ವಿಚಾರಗಳು,

ಅವಕಾಶಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಿಂದ ಸರ್ಕಾರದ ಗುಲಾಮರಾಗಿಬಿಡುತ್ತೇವೆ. ಯುವನಿಧಿ, ಗೃಹಲಕ್ಷ್ಮಿ ಯೋಜನೆಯಡಿ ಈಗ ನೀಡುತ್ತಿರುವ ಹಣ ಮುಂದೆ ಹತ್ತು ಪಟ್ಟಾಗಬಹುದು. ಆದರೆ ಅತ್ಯಂತ ಆಗರ್ಭ ಶ್ರೀಮಂತರಡಿ ಗುಲಾಮರಾಗಿಯೇ ಬದುಕುವಂಥ ಸ್ಥಿತಿ ಮುಂದುವರಿಯುತ್ತದೆ ಅಷ್ಟೇ. ಕರ್ನಾಟಕದ ಆಚೆ ಹೋದಾಗ ಕನ್ನಡಿಗ ಎಂದು ಗುರುತಿಸುತ್ತಾರೆ. ಇದು ನಮ್ಮ ಅಸ್ಮಿತೆ. ಭಾರತದ ದೇಶದ ಆಚೆ ಹೋದರೆ ಭಾರತೀಯ ಎಂದು ಗುರುತಿಸುತ್ತಾರೆ. ಇದನ್ನು ಮೀರಿ ವೈಯಕ್ತಿಕ ಸಾಧನೆ ಮಾಡಬೇಕು. ಇದು ಸಾಧ್ಯವಾಗಬೇಕಾದರೆ ಐಎಎಸ್, ಉದ್ಯಮಿಗಳು, ರಾಜಕಾರಣದ ಯಶಸ್ಸು ಸೇರಿದಂತೆ ನಮ್ಮ ಸಾಮರ್ಥ್ಯದ ಮೇಲೆ ಗುರುತಿಸುವಂತಾಗಬೇಕು. ದಬ್ಬಾಳಿಕೆ ವಿರುದ್ಧ ಸಿಡಿದೇಳಬೇಕಾದರೆ ನಮ್ಮಲ್ಲಿನ ಶಕ್ತಿ, ಮೌಲ್ಯ ಹೆಚ್ಚಿಸಿಕೊಳ್ಳಬೇಕು. ಆಗ ಮಾತ್ರ ಶ್ರೀಮಂತರ ದುರಂಹಕಾರ ಕಡಿಮೆಯಾಗುತ್ತದೆ ಎಂದು ಜಿ. ಬಿ. ವಿನಯ್ ಕುಮಾರ್ ಅವರು ತಿಳಿಸಿದರು.

ವೇದಿಕೆಯಲ್ಲಿ ಕಾಲೇಜಿನ ಪ್ರಾಂಶುಪಾಲ ಶಿವಕುಮಾರ್, ಹೊನ್ನಾಳಿ ಹಿರಿಯ ಮುಖಂಡ ರಾಜು ಕಣಗಣ್ಣನವರ್, ಯುವ ಮುಖಂಡ ದಿಡಗೂರು ಸುದೀಪ್, ಅರ್ಥಶಾಸ್ತ್ರ ಅಧ್ಯಾಪಕ ರೇವಣಸಿದ್ದಪ್ಪ, ಅರ್ಥಶಾಸ್ತ್ರದ ಮುಖ್ಯಸ್ಥೆ ಡಾ. ನಮ್ರತಾ, ರಾಜ್ಯಶಾಸ್ತ್ರ ಅಧ್ಯಾಪಕ ಚಂದ್ರಪ, ಅಧ್ಯಾಪಕರಾದ ಗಿರೀಶ್, ನವೀನ್, ಗ್ರಂಥಪಾಲಕ ರಾಜಶೇಖರ ಹಾಗೂ ಕಾಲೇಜಿನ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**